
ಜನಮನದ ದನಿ


# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ನಟ ಪ್ರಕಾಶ್ ರಾಜ್ ಸೇರಿ 70 ಮಂದಿಯನ್ನು ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.



31 ಅಕ್ಟೋಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 230 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಸ್ಯಾಂಡಲ್‌ವುಡ್ ಬಿಗೆಸ್ಟ್ ಸಿನಿಮಾಗಳು » 2



ಸೂರ್ಯಕಾಂತ್ ಸುಪ್ರೀಂ ನೂತನ ಮುಖ್ಯ ನ್ಯಾಯಮೂರ್ತಿ » 3



ಯುವಜನರ ಪ್ರತಿಭೆ ಪ್ರಪಂಚದಲ್ಲಿ ಪ್ರಜ್ವಲಿಸಲ್ಲಿ » 4

# 1,545 ಕೋ. ರೂ. ನೆರೆ ಪರಿಹಾರಕ್ಕೆ ಮೊರೆ

## ಕೇಂದ್ರಕ್ಕೆ ವರದಿ ಸಲ್ಲಿಸಲು ಸಂಪುಟ ತೀರ್ಮಾನ | ಶಾಲಾ ಕೊಠಡಿ ನಿರ್ಮಾಣಕ್ಕೆ 360 ಕೋ. ರೂ.

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದಲ್ಲಿ ಈ ವರ್ಷದ ಮುಂಗಾರು ಮಳೆಯಿಂದಾಗಿ ಉಂಟಾದ ಹಾನಿಗೆ ಸಂಬಂಧಿಸಿ 1,545 ಕೋ.ರೂ. ಪರಿಹಾರಕ್ಕಾಗಿ ಕೇಂದ್ರಕ್ಕೆ ಮನವಿ ಸಲ್ಲಿಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ರಾಜ್ಯದಲ್ಲಿ ಭಾರೀ ಮಳೆಯಿಂದ ಮೂಲಭೂತ ಸೌಕರ್ಯಗಳು, ರಸ್ತೆ, ಸೇತುವೆ, ಶಾಲೆ, ಕುಡಿಯುವ ನೀರಿನ ಯೋಜನೆಗಳು, ವಿದ್ಯುತ್ ವ್ಯವಸ್ಥೆ, ಮನೆ ಹಾಗು ಕೃಷಿ ಭೂಮಿಗಳು ತೀವ್ರ ಹಾನಿಗೊಳಗಾಗಿವೆ. ಈ ಹಿನ್ನಲೆಯಲ್ಲಿ ಸರ್ಕಾರವು ಎನ್‌ಡಿಆರ್‌ಎಫ್ ಅಡಿ 1,545 ಕೋ.ರೂ. ಪರಿಹಾರ ಮೊತ್ತವನ್ನು ಕೇಂದ್ರ ಸರ್ಕಾರದಿಂದ ಕೋರಿ ವರದಿ ಸಿದ್ಧಪಡಿಸಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಅವರು ಹೇಳಿದರು.

ಆದರೆ, ಬೆಳೆ ನಷ್ಟಕ್ಕೆ ಸಂಬಂಧಿಸಿದ ವರದಿ ಪ್ರತ್ಯೇಕವಾಗಿ ತಯಾರಿಸಿ, ಅದರ ಆಧಾರದ



ಮೇಲೆ ರೈತರಿಗೆ ಪರಿಹಾರ ದೊರಕುವಂತೆ ಮನವಿ ಸಲ್ಲಿಸಲಾಗುವುದು. ಹಾಸನ, ಕೊಡಗು, ಶಿವಮೊಗ್ಗಾ, ಚಿತ್ರದುರ್ಗ, ಬೆಳಗಾವಿ, ಕಲಬುರಗಿ ಹಾಗು ಬಳ್ಳಾರಿ ಜಿಲ್ಲೆಗಳಲ್ಲಿ ಮುಂಗಾರು ಮಳೆಯಿಂದ ಹೆಚ್ಚಿನ ಹಾನಿ ಸಂಭವಿಸಿದ್ದು, ಅಂದಾಜು ಸಾವಿರಾರು ಎಕರೆ ಪ್ರದೇಶದ ಬೆಳೆ ನಾಶವಾಗಿದೆ. ಸರ್ಕಾರವು ಈಗಾಗಲೇ ಹಾನಿಗೊಳಗಾದ ಪ್ರದೇಶಗಳ ಪಟ್ಟಿ, ಕ್ಷೇತ್ರವಾರು ಅಂದಾಜು ವರದಿ ಹಾಗೂ ಚಿತ್ರ ದಾಖಲೆಗಳೊಂದಿಗೆ ಸಂಪೂರ್ಣ ಮಾಹಿತಿಯನ್ನು ಕೇಂದ್ರದ ವಿಪತ್ತು ನಿರ್ವಹಣಾ ಇಲಾಖೆಗೆ ಕಳುಹಿಸಲು ಕ್ರಮ ಕೈಗೊಂಡಿದೆ ಎಂದರು.

### ಮುಂದಿನ ಸಭೆಯಲ್ಲಿ ಒಳಮೀಸಲಾತಿ ಚರ್ಚೆ

ಒಳಮೀಸಲಾತಿ ಬಗ್ಗೆ ಮುಖ್ಯಮಂತ್ರಿ, ಸಮಾಜ ಕಲ್ಯಾಣ ಸಚಿವರು ಹಾಗು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ಕಾರ್ಯದರ್ಶಿಗಳು ಸೇರಿ ಚರ್ಚೆ ನಡೆಸಿ, ಮಸೂದೆ ರೂಪಿಸಲು ಸಾಧ್ಯವಾದರೆ ಸಂಪುಟ ಸಭೆಯಲ್ಲಿ ಮಂಡಿಸಲು ಸೂಚಿಸಲಾಗಿತ್ತು. ಬುಧವಾರ ಸಭೆ ನಡೆಸಲು ಸಾಧ್ಯವಾಗದ ಹಿನ್ನಲೆಯಲ್ಲಿ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ನಡೆದಿಲ್ಲ, ಮುಂದಿನ ಸಭೆಯಲ್ಲಿ ಒಳಮೀಸಲಾತಿ ಕುರಿತು ಚರ್ಚಿಸಲಾಗುವುದೆಂದು ಸಚಿವರು ಮಾಹಿತಿ ನೀಡಿದರು.

ಸರ್ಕಾರಿ ಶಾಲೆಗಳಲ್ಲಿ 2,200 ಶಾಲಾ ಕೊಠಡಿಗಳನ್ನು 360 ಕೋ. ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲು ಲೋಕೋಪಯೋಗಿ ಇಲಾಖೆಗೆ ವಹಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ.

2025-26ನೇ ಆರ್ಥಿಕ ವರ್ಷದಲ್ಲಿ ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳಲ್ಲಿ ಶಾಲಾ ತರಗತಿ ಕೊಠಡಿಗಳ ನಿರ್ಮಾಣ ಕಾರ್ಯವನ್ನು ಲೋಕೋಪಯೋಗಿ ಇಲಾಖೆಗೆ ವಹಿಸಿ ವಲಯ ಮಟ್ಟದಲ್ಲಿ ಟೆಂಡರ್ ಕರೆಯಲು ಅವಕಾಶ ನೀಡುವುದು ಮತ್ತು ಮೈಸೂರು ಮತ್ತು ಬೆಂಗಳೂರು ವಿಭಾಗಗಳಲ್ಲಿ ಶಾಲಾ ತರಗತಿ ಕೊಠಡಿಗಳ ನಿರ್ಮಾಣ ಕಾರ್ಯವನ್ನು ಲೋಕೋಪಯೋಗಿ ಇಲಾಖೆಯ ಯೋಜನಾ ರಸ್ತೆ ಆಸ್ತಿ ನಿರ್ವಹಣಾ ಕೇಂದ್ರಕ್ಕೆ ವಹಿಸಿ, ಕೇಂದ್ರೀಕೃತ ಟೆಂಡರ್ ಕರೆಯಲು ಅವಕಾಶ ನೀಡುವುದು. ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಉಪ ನಿರ್ದೇಶಕರು ಕಾಮಗಾರಿಗಳ ಮೇಲ್ವಿಚಾರಣೆ ನಡೆಸಲಿದ್ದಾರೆ ಎಂದರು.

**ನೇಮಕಾತಿಗಳಿಗೆ ಅನುಮೋದನೆ**

ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ) ಮತ್ತು ಭಾರತೀಯ ಮೀಸಲು ಪಡೆಯ (ಐಆರ್‌ಬಿ) ಕರಡು ವೃಂದ ಮತ್ತು ನೇಮಕಾತಿ ನಿಯಮ ಆಕ್ಷೇಪಣೆಗಳನ್ನು ಆಹ್ವಾನಿಸಿ ಪ್ರಕಟಿಸಲು ಮತ್ತು ಕರಡು ನಿಯಮಗಳಿಗೆ ಸ್ವೀಕೃತವಾಗುವ ಆಕ್ಷೇಪಣೆಗಳು ಗುರುತರವಾಗಿಲ್ಲದಿದ್ದಲ್ಲಿ, ಮತ್ತೊಮ್ಮೆ ಸಚಿವ ಸಂಪುಟದ ಅನುಮೋದನೆ ಪಡೆಯದೇ ಅಂತಿಮಗೊಳಿಸಿ ಪ್ರಕಟಿಸಲು ಸಚಿವ ಸಂಪುಟ ನಿರ್ಧರಿಸಿದೆ ಎಂದು ಸಚಿವ ಪಾಟೀಲ್ ಹೇಳಿದರು.

ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಯಲು ಮತ್ತು ಪಂಪ್ ಸೆಟ್‌ಗಳನ್ನು ಸರಬರಾಜು ಮಾಡಲು ಫಲಾನುಭವಿಗಳ ಆಯ್ಕೆ ಅಧಿಕಾರವನ್ನು ಉಸ್ತುವಾರಿ ಸಚಿವರಿಗೆ ವಹಿಸಲಾಗಿದೆ ಎಂದು ಮಾಹಿತಿ ನೀಡಿದರು.

## ಮುಖ್ಯಮಂತ್ರಿಗಳ ಪರಿಹಾರ ನಿಧಿ ಕಲ್ಪಿಸುವಂತೆ ಸಿ.ಎಂ.ಗೆ ಮನವಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ :** ಮುಖ್ಯ ಮಂತ್ರಿಗಳ ಪರಿಹಾರ ನಿಧಿ ಯೋಜನೆಯಡಿ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡುವಂತೆ ಬೆಂಗಳೂರಿನ ಮುಖ್ಯಮಂತ್ರಿ ಗೃಹ ಕಚೇರಿಯಲ್ಲಿ ಸಿದ್ದರಾಮಯ್ಯ ಅವರನ್ನು ಶಾಸಕ ಸಿ.ಎನ್.ಬಾಲಕೃಷ್ಣ ಗುರುವಾರ ಭೇಟಿ ಮಾಡಿ ಮನವಿ ಮಾಡಿದರು.

ತಾಲ್ಲೂಕು ವ್ಯಾಪ್ತಿಯಲ್ಲಿ ವಿವಿಧ ಕಾಯಿಲೆಗಳು ಹಾಗೂ ಅಪಘಾತಗಳಿಗೆ ಒಳಗಾದ ಬಡವರು ಚಿಕಿತ್ಸೆಗಾಗಿ ಸಾಕಷ್ಟು ಖರ್ಚು ವೆಚ್ಚ ಮಾಡಿದ್ದಾರೆ. ಚಿಕಿತ್ಸೆ ಸಲುವಾಗಿ ಸಾಲ ಮಾಡಿಕೊಂಡಿದ್ದು ಜೀವನ ನಡೆಸಲಾಗದಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ. ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೆಲವರು ತುಂಬಾ ಕಡು ಬಡವರು ಇದ್ದು, ಚಿಕಿತ್ಸೆಗಾಗಿ ಹೆಚ್ಚಿನ ಖರ್ಚು ಮಾಡಿದ್ದಾರೆ. ತಲಾ 17 ಲಕ್ಷ ರೂ. ಮೀರಿ ಖರ್ಚಾಗಿದ್ದು, ವಿಶೇಷ ಪ್ರಕರಣವೆಂದು ಪರಿಗಣಿಸಬೇಕು.



ಅದರ ಸಲುವಾಗಿ ನಾನೇ ಖುದ್ದಾಗಿ ಬಂದಿದ್ದೇನೆ. ದಯವಿಟ್ಟು ಕ್ಷೇತ್ರದ ಫಲಾನುಭವಿಗಳ ಮೇಲೆ ದಯೆ ತೋರಿ ಎಂದು ಮನವಿ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಾಸಕರಿಗೆ ಉತ್ತರಿಸಿ, ಬಾಲಕೃಷ್ಣರವರೆ, ಬಡವರಿಗೆ ಒಳ್ಳೆಯದಾಗಬೇಕು. ಫಲಾನುಭವಿಗಳ ಪತ್ರ ಬಂದ್ರೆ, ಸಾಕು ನಾನು ಬರೆದು ಕೊಡುತ್ತೇನೆಂದು ಭರವಸೆ ನೀಡಿದ್ದಾರೆಂದು ಶಾಸಕರು ತಿಳಿಸಿದ್ದಾರೆ.

## ಕೆರೆಯಲ್ಲಿ ಮುಳುಗಿ ಸಹೋದರರ ದಾರುಣ ಸಾವು

• ಪ್ರಜೋದಯ ವರದಿ

**ಹಾಸನ:** ಹಸು ಮೇಯಿಸಲು ತೆರಳಿದ್ದ ಸಹೋದರರಿಬ್ಬರು ಕೆರೆಯಲ್ಲಿ ಮುಳುಗಿ ಮೃತಪಟ್ಟಿರುವ ದಾರುಣ ಘಟನೆ ತಾಲ್ಲೂಕಿನ ದುದ್ದ ಹೋಬಳಿ ವಳಗೇರಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರಾಮಚಂದ್ರ ಹಾಗು ರತ್ನ ದಂಪತಿ ಪುತ್ರರಾದ ದರ್ಶನ್ (17) ಮತ್ತು ಲಕ್ಷ್ಮೀಕಾಂತ್ (5) ಮೃತರು. ಎಸ್‌ಎಸ್‌ಎಲ್‌ಸಿ ವ್ಯಾಸಂಗ ಮುಗಿಸಿದ್ದ ದರ್ಶನ್ ಗ್ರಾಮದ ಆಂಜನೇಯಸ್ವಾಮಿ ದೇವಾಲಯದಲ್ಲಿ ತಂದೆಯೊಂದಿಗೆ ಅರ್ಚಕನಾಗಿ ಕೆಲಸ ಮಾಡಿಕೊಂಡಿದ್ದ. ಲಕ್ಷ್ಮೀಕಾಂತ್ ಅಂಗನವಾಡಿಗೆ ಹೋಗುತ್ತಿದ್ದ. ಬುಧವಾರ ಇಬ್ಬರೂ ತಮ್ಮ ಮೂರು ಹಸುಗಳನ್ನು ಕಟ್ಟಿಹಾಕಲು ಜಮೀನು ಬಳಿ ತೆರಳಿದ್ದರು. ಸಂಜೆವರೆಗೂ ಮನೆಗೆ ಬಾರದ ಹಿನ್ನಲೆಯಲ್ಲಿ ಕುಟುಂಬಸ್ಥರು ಎಲ್ಲಾ ಕಡೆ ಹುಡುಕಿ ರಾತ್ರಿ ದುದ್ದ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿದ್ದರು.

ಬುಧವಾರ ಸಂಜೆ ಮಕ್ಕಳು ಮನೆಗೆ ಬಾರದಿದ್ದಾಗ ಜಮೀನಿನಲ್ಲಿ ಹುಡುಕಾಡುತ್ತಿ ದ್ದಾಗ ಎರಡು ಹಸು ಕಟ್ಟಿ ಮತ್ತೊಂದನ್ನು ಹಾಗೆಯೇ ಬಿಟ್ಟಿರು



ವುದು ಗೊತ್ತಾಗಿದೆ. ಆದರೆ, ಕಟ್ಟಿ ಹಾಕದೆ ಬಿಟ್ಟಿದ್ದ ಹಸು ಅಲ್ಲೇ ಇತ್ತಾದರೂ ಮಕ್ಕಳಿರಲಿಲ್ಲ. ಅವರು ಹಾಕಿದ್ದ ಚಪ್ಪಲಿ ಸೇರಿ ಯಾವ ಕುರುಹು ಇರಲಿಲ್ಲ. ಕೆರೆ ಪಕ್ಕದಲ್ಲಿ ಶೋಧ ನಡೆಸಿದರೂ ಅವರು ಅಲ್ಲಿ ಓಡಾಡಿದ್ದರ ಬಗ್ಗೆ ಮಾಹಿತಿ ಇರಲಿಲ್ಲ. ಬೇರೆ ಎಲ್ಲಿಗಾದರೂ ಹೋಗಿರಬೇಕೆಂದು ಹುಡುಕಾಟ ನಡೆಸಲಾಗಿತ್ತು.

ಜಮೀನು ಪಕ್ಕದಲ್ಲೇ ಕೆರೆ ಇರುವುದರಿಂದ ಗುರುವಾರ ಬೆಳಿಗ್ಗೆ ಪೊಲೀಸರು ಅಗ್ನಿಶಾಮಕ ದಳದ ನೆರವಿನೊಂದಿಗೆ ಶೋಧ ಕಾರ್ಯ ಆರಂಭಿಸಿತ್ತು. ಮಧ್ಯಾಹ್ನದ ವೇಳೆಗೆ ಇಬ್ಬರ ಮೃತದೇಹವು ಪತ್ತೆಯಾಗಿದೆ.

**ಆಟವಾಡಲು ಹೋಗಿದ್ದರೆಂಬ ಸಂಶಯ**

ಜಮೀನು ಸಮೀಪದ ಕೆರೆಯಲ್ಲಿ ಬಾಲಕ ಲಕ್ಷ್ಮೀಕಾಂತ್ ಆಟವಾಡಲು ಇಳಿದಿದ್ದು, ದರ್ಶನ್ ತಮ್ಮನನ್ನು ರಕ್ಷಿಸಲು ಹಸು ಕಟ್ಟುವುದನ್ನು ಬಿಟ್ಟು ದೌಡಾಯಿಸಿದ್ದಾನೆ. ಇಬ್ಬರು ನೀರಿನಿಂದ ಪಾರಾಗಲು ಸಾಧ್ಯವಾಗದೆ ಮೃತಪಟ್ಟಿರಬಹುದೆಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಕೆರೆ ಸಾಕಷ್ಟು ಆಳವಾಗಿದ್ದು, ಇತ್ತೀಚೆಗೆ ಸುರಿದ ಭಾರೀ ಮಳೆಯಿಂದ ಭರ್ತಿಯಾಗಿದೆ. ಹೀಗಾಗಿ ಬದುಕುಳಿಯಲು ಸಾಧ್ಯವಾಗಿಲ್ಲ. ಕುಟುಂಬಸ್ಥರ ಆಕ್ರಂಧನ ಮುಗಿಲು ಮುಟ್ಟಿತ್ತು. ದುದ್ದ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಜ್ಯೋತ್ಸವ ಪ್ರಶಸ್ತಿಗೆ ರಂಗಸ್ವಾಮಿ, ಗುಂಡುರಾಜ್ ಆಯ್ಕೆ

• ಪ್ರಜೋದಯ ವರದಿ

**ಹಾಸನ:** ಪ್ರಸಕ್ತ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಜಿಲ್ಲೆಯ ಇಬ್ಬರು ಸಾಧಕರು ಆಯ್ಕೆಯಾಗಿದ್ದಾರೆ. ಕೃಷಿ ಕ್ಷೇತ್ರದಿಂದ ಎಂ.ಸಿ. ರಂಗಸ್ವಾಮಿ ಹಾಗು ಬಯಲಾಟ ಕ್ಷೇತ್ರದಿಂದ ತೊದಲುಗೊಂಬೆ ಕಲಾವಿದ ಗುಂಡುರಾಜ್ ಅವರನ್ನು ಪರಿಗಣಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸರ್ಕಾರದ ಕಾರ್ಯದರ್ಶಿ ಡಾ.ಎಂ.ವಿ. ವೆಂಕಟೇಶ್ ಅವರು ತಿಳಿಸಿದ್ದಾರೆ.

ನ.1ರಂದು ಬೆಂಗಳೂರಿನಲ್ಲಿ ನಡೆಯುವ ಕನ್ನಡ ರಾಜ್ಯೋತ್ಸವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡುವರು.

**ಬಂಗಾರದ ಮನುಷ್ಯ ಸಿನಿಮಾ ಪ್ರೇರಣೆ**

ಅರಕಲಗೂಡು ತಾಲ್ಲೂಕು ದೊಡ್ಡಮಗ್ಗೆ ಗ್ರಾಮದ ಎಂ.ಸಿ.ರಂಗಸ್ವಾಮಿ ಕೃಷಿ ಕ್ಷೇತ್ರದಲ್ಲಿ ಅಪರಿಮಿತ ಸಾಧನೆ ಮೆರೆದಿದ್ದಾರೆ. ಕೃಷಿ, ಹೈನುಗಾರಿಕೆ, ಆಧುನಿಕ ಕೃಷಿ ಪದ್ಧತಿಯಲ್ಲಿ ರಂಗಸ್ವಾಮಿ ಅವರ ಕಾರ್ಯ ಅಪಾರ.





ದಿ.ಎಂ.ಜೆ.ತಿಮ್ಮೇಗೌಡ-ಲಕ್ಷ್ಮಮ್ಮ ಅವರ ಹಿರಿಯ ಪುತ್ರ ಎಂ.ಸಿ. ರಂಗಸ್ವಾಮಿ 1955ರ ಜನವರಿ 1 ರಂದು ಜನಿಸಿದರು. ಬಿಎಸ್‌ಸಿ ಅಗ್ರಿಕಲ್ಚರ್ ಶಿಕ್ಷಣ ಪಡೆದಿರುವ ರಂಗಸ್ವಾಮಿ ನೂರಾರು ಎಕರೆ ಭೂಮಿಯಲ್ಲಿ ಶ್ರೀಗಂಧ, ತೆಂಗು, ಅಡಿಕೆ, ಕಾಳು ಮೆಣಸು, ಏಲಕ್ಕಿ, ಕಾಫಿ ಹಾಗು ಮಿಶ್ರ ಬೇಸಾಯ ಪದ್ಧತಿ ಮಾಡಿಕೊಂಡಿದ್ದಾರೆ. ಇಸ್ರೇಲ್ ಮಾದರಿಯ ಹೈನುಗಾರಿಕೆಯಲ್ಲಿ ತೊಡಗಿಸಿಕೊಂಡಿರುವ ಅವರು ಒಂದು ಸಾವಿರ ಹಸು ಗಳನ್ನು ಸಾಕಣೆ ಮಾಡಿದ್ದಾರೆ. ಮೀನು, ಕೋಳಿ ಸಾಕಾಣಿಕೆ ಸೇರಿ ಮಿಶ್ರ ಬೇಸಾಯದಲ್ಲಿ ಯಶಸ್ವಿಯಾಗಿ ದ್ದಾರೆ. ಸ್ಥಳೀಯವಾಗಿ

> **ಪ್ರಶಸ್ತಿಗಾಗಿ ಆಸೆಪಟ್ಟು ಕಲಾ ಸೇವೆ ಮಾಡಿಲ್ಲ. ಪ್ರಶಸ್ತಿಗೆ ಶಿಫಾರಸ್ಸು, ಅರ್ಜಿ, ರಾಜಕೀಯ ನಡೆಯದಿದ್ದರೆ ನನ್ನಂತಹ ಕಲಾವಿದನಿಗೆ ಅವಕಾಶಗಳು ಸಿಗುತ್ತವೆ ಎಂಬುದಕ್ಕೆ 70ನೇ ಕನ್ನಡ ರಾಜ್ಯೋತ್ಸವ ಸಾಕ್ಷಿ. ಪ್ರಶಸ್ತಿಯೇ ನನ್ನ ಕಲೆಯನ್ನು ಅರಸಿ ಬಂದಿದ್ದಕ್ಕೆ ಖುಷಿ ಇದೆ.**
> **-ಗುಂಡುರಾಜ್, ತೊದಲುಗೊಂಬೆ ಕಲಾವಿದ**

ಉದ್ಯೋಗ ಸೃಷ್ಟಿಸುವ ಮೂಲಕ, ಹಾಲಿನ ಉತ್ಪನ್ನಗಳಾದ ಮಿಲ್ಕಿಂಗ್ ಅಂಡ್ ಆಲ್ ಅಬೌಟ್ ಎಂಬ ಎರಡು ಬ್ರಾಂಡ್‌ಗಳನ್ನು ಪರಿಚಯಿಸಿದ್ದಾರೆ.

ರಂಗಸ್ವಾಮಿ ಅವರು ಪ್ರಗತಿ ಪರ ಕೃಷಿಕನಾಗಲು ಡಾ.ರಾಜಕುಮಾರ್ ಅಭಿನಯದ ಬಂಗಾರದ ಮನುಷ್ಯ ಚಲನಚಿತ್ರ ಪ್ರೇರಣೆ. ಸಿನಿಮಾ ನೋಡಿದ ರಂಗಸ್ವಾಮಿ ರಾಜಕುಮಾರ್ ಅವರಂತೆ ಕೃಷಿ ಸಾಧಕನಾಗಬೇಕೆಂದು ಪಣ ತೊಟ್ಟಿದ್ದರು. ಅದಕ್ಕೆ ಕುಟುಂಬದ ಸಹಕಾರವು ಅಧಿಕವಾಗಿತ್ತು. ಅಂದುಕೊಂಡಂತೆ ಕೃಷಿಯಲ್ಲಿ ಅತ್ಯದ್ಭುತ ಸಾಧನೆಗಳನ್ನು ರಂಗಸ್ವಾಮಿ ಮಾಡಿದ್ದಾರೆಂದರೆ ಅತಿಶಯೋಕ್ತಿಯಲ್ಲ. ರಂಗಸ್ವಾಮಿ ಅವರಿಗೆ ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದೆ. ಜೊತೆಗೆ ವಿವಿಧ ಸಂಘ ಸಂಸ್ಥೆಗಳಿಂದಲೂ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**ತೊದಲು ಗೊಂಬೆ ಕಲಾವಿದನಿಗೆ ಒಲಿದ ಪ್ರಶಸ್ತಿ**

ಬಯಲಾಟ ಕ್ಷೇತ್ರದಿಂದ ತೊದಲುಗೊಂಬೆ ಕಲಾವಿದ ಹಾಸನ ತಾಲ್ಲೂಕಿನ ಹೂವಿನಹಳ್ಳಿ ಕಾವಲು ಗ್ರಾಮದ ಗುಂಡುರಾಜ್ ಅವರನ್ನು 2025ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

1959ರಲ್ಲಿ ರಾಮಯ್ಯ ಮತ್ತು ಹನುಮಮ್ಮ ಅವರ ಪುತ್ರರಾಗಿ ಗುಂಡುರಾಜ್ ಜನಿಸಿದರು. ಶಿಳ್ಳೆಕ್ಯಾತ ಸಮುದಾಯಕ್ಕೆ ಸೇರಿದ ಇವರ ಪೂರ್ವಜರು ಸಹ ಹಳ್ಳಿಯಿಂದ ದಿಲ್ಲಿಯವರೆಗೆ ತೊದಲುಗೊಂಬೆ ಪ್ರದರ್ಶಿಸುತ್ತಾ ಬಂದಿದ್ದಾರೆ. ಕುಟುಂಬದ ಹಿರಿಯರಿಂದ ಬಳುವಳಿಯಾಗಿ ಬಂದ ಕಲೆಯನ್ನು ಗುಂಡುರಾಜ್ ಅವರು ಅಳವಡಿಸಿಕೊಂಡು ದೇಶ-ವಿದೇಶಗಳಲ್ಲಿ ಹಲವು ಪ್ರದರ್ಶನ ನೀಡಿದ್ದಾರೆ. 67 ವರ್ಷದ ಅವರು ಇಂದಿಗೂ ಕಲಾ ಸೇವೆ ಮುಂದುವರಿಸಿದ್ದಾರೆ. ಕಳೆದ 60 ವರ್ಷಗಳಿಂದ ರಾಮಾಯಣ, ಮಹಾಭಾರತ, ಪೌರಾಣಿಕ, ಐತಿಹಾಸಿಕ ಪ್ರಸಂಗಗಳನ್ನು ಗೊಂಬೆಯಾಟದ ಮೂಲಕ ಪ್ರದರ್ಶಿಸುತ್ತಾ ಜನಜಾಗೃತಿ ಮೂಡಿಸುತ್ತಿದ್ದಾರೆ.

ಅಮೇರಿಕಾ, ಕುವೈತ್, ಕೊರಿಯಾ, ದಕ್ಷಿಣ ಆಫ್ರಿಕಾ, ಜಿಂಬಾಬ್ವೆ, ಫ್ರಾನ್ಸ್, ಪೊಲೆಂಡ್ ಮುಂತಾದ ದೇಶಗಳಲ್ಲಿ ಕಾರ್ಯಕ್ರಮ ನೀಡಿ ಮೆಚ್ಚುಗೆ ಗಳಿಸಿದ್ದಾರೆ. ಕೊರಿಯಾದಲ್ಲಿ ನಡೆದ 3ನೇ ಡೆಲಿಫಿಕ್ಸ್ ಗೇಮ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿ ಮಾರ್ನಿಂಗ್ ಮೆಡಲ್ ಪ್ರಶಸ್ತಿಯೊಂದಿಗೆ ಬೆಳ್ಳಿ ಪದಕಗಳಿಸಿದ್ದಾರೆ. ಕುವೈತ್‌ನ ಕನ್ನಡ ಕಲಾ ಕೂಟದ ಗೌರವಕ್ಕೂ ಭಾಜನರಾಗಿದ್ದಾರೆ.

## ಜಿಲ್ಲಾಧಿಕಾರಿ ಬಹಿರಂಗ ಕ್ಷಮೆಯಾಚನೆಗೆ ವಕೀಲರ ಆಗ್ರಹ

### ಡಿಸಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ | ವಾಹನ ಸಂಚಾರ ತಡೆದು ಆಕ್ರೋಶ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಸಾರ್ವಜನಿಕವಾಗಿ ವಕೀಲರಿಗೆ ಅಪಮಾನ ಮಾಡಿದ್ದಾರೆ. ಬಹಿರಂಗವಾಗಿ ಕ್ಷಮೆ ಕೇಳಬೇಕೆಂದು ಒತ್ತಾಯಿಸಿ ಜಿಲ್ಲಾ ವಕೀಲರ ಸಂಘ ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಿತು.

ಜಿಲ್ಲಾ ನ್ಯಾಯಾಲಯದ ಆವರಣದಿಂದ ಪ್ರತಿಭಟನಾ ಮೆರವಣಿಗೆ ನಡೆಸಿದ ವಕೀಲರು, ಎನ್.ಆರ್. ವೃತ್ತಕ್ಕೆ ಆಗಮಿಸಿ ಮಾನವ ಸರಪಳಿ ನಿರ್ಮಿಸಿ, ವಾಹನ ಸಂಚಾರ ತಡೆದು ಜಿಲ್ಲಾಧಿಕಾರಿ ವಿರುದ್ಧ ಘೋಷಣೆ



ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿ ಬಳಿ ತೆರಳಿ ಕೆಲ ಕಾಲ ಧರಣಿ ನಡೆಸಿ, ಜಿಲ್ಲಾಧಿಕಾರಿ ವಿರುದ್ಧ ಸರ್ಕಾರ ಮುಖ್ಯಕಾರ್ಯದರ್ಶಿಗೆ ಮನವಿ ಸಲ್ಲಿಸಿದರು.

ಈ ವೇಳೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕಾರ್ಲೆ ಮೊಗಣ್ಣಗೌಡ ಅವರು ಮಾತನಾಡಿ, ಸಾರ್ವಜನಿಕರ ಮನವಿ ಆಲಿಸಬೇಕಾದ ಜಿಲ್ಲಾಧಿಕಾರಿ ನಮ್ಮ ನ್ಯಾಯಸಮ್ಮತ ಬೇಡಿಕೆ ನಿರ್ಲಕ್ಷ್ಯ ಮಾಡಿದ್ದು ವಿಷಾದನೀಯ. ಅವರು ಕಚೇರಿಯಲ್ಲಿದ್ದರೂ ಮನವಿ ಸ್ವೀಕರಿಸಲು ಬಾರದೆ ಉದ್ಧಟತನ ತೋರಿದ್ದರಿಂದ ಕೂಡಲೇ ಬಹಿರಂಗ ಕ್ಷಮೆ ಕೇಳಬೇಕು. ಇಲ್ಲದಿದ್ದರೆ ವರ್ಗಾವಣೆ ಆಗಬೇಕು. ಜಿಲ್ಲಾಧಿಕಾರಿ ಅವರು ಜಿಲ್ಲೆಯಿಂದ ನಿರ್ಗಮಿಸುವವರೆಗೂ ಹೋರಾಟ ಮುಂದುವರಿಸುವ ಎಚ್ಚರಿಕೆ ನೀಡಿದರು.

» ನಾಲ್ಕನೇ ಪುಟದಲ್ಲಿ

## ನ.3 ರಿಂದ ಡಿ.2 ರವರೆಗೆ ಕಾಲುಬಾಯಿ ರೋಗದ ಲಸಿಕೆ

• ಪ್ರಜೋದಯ ವರದಿ

**ಹಾಸನ :** ಕಾಲು-ಬಾಯಿ ರೋಗವು ದನ, ಎಮ್ಮೆ, ಹಂದಿ, ಕುರಿ, ಮೇಕೆ ಮತ್ತು ವನ್ಯ ಜೀವಿಗಳಲ್ಲಿ ವೈರಾಣುವಿನಿಂದ ಉಂಟಾಗುವ ಸಾಂಕ್ರಾಮಿಕ ರೋಗವಾಗಿದ್ದು, ಜಾನುವಾರುಗಳಲ್ಲಿ ಅತೀಯಾದ ಜ್ವರ ಹಾಗೂ ಕಾಲು ಮತ್ತು ಬಾಯಿಗಳಲ್ಲಿ ಉಣ್ಣು ಕಂಡು ಬರುತ್ತದೆ. ರೋಗಗ್ರಸ್ಥ ಜಾನುವಾರುಗಳಲ್ಲಿ ಉತ್ಪಾದಕತೆ ಕುಂಠಿತಗೊಂಡು ರೈತಾಪಿ ವರ್ಗಕ್ಕೆ ಇದರಿಂದ ಸಾಕಷ್ಟು ಆರ್ಥಿಕ ನಷ್ಟ ಉಂಟಾಗುತ್ತದೆ.

ಜಿಲ್ಲೆಯಾದ್ಯಂತ 8ನೇ ಸುತ್ತಿನ ಕಾಲುಬಾಯಿ ರೋಗದ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

## ಮಗುಚಿ ಬಿದ್ದ ಮಿನಿ ಬಸ್: ವ್ಯಕ್ತಿ ಸಾವು, 20 ಮಂದಿಗೆ ಗಾಯ

### ಮದುವೆಗೆ ತೆರಳುತ್ತಿದ್ದ ವೇಳೆ ಅವಘಡ | ಬಿಸಿಲೆಘಾಟ್‌ನಲ್ಲಿ ಘಟನೆ

• ಪ್ರಜೋದಯ ವರದಿ

**ಸಕಲೇಶಪುರ :** ಮದುವೆಗೆ ತೆರಳುತ್ತಿದ್ದ ಮಿನಿ ಬಸ್ ಮಗುಚಿ ಬಿದ್ದ ಪರಿಣಾಮ ವ್ಯಕ್ತಿಯೊಬ್ಬರು ಮೃತಪಟ್ಟು, 20ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ತಾಲ್ಲೂಕಿನ ಬಿಸಿಲೆಘಾಟ್‌ನಲ್ಲಿ ಗುರುವಾರ ಬೆಳಿಗ್ಗೆ ನಡೆದಿದೆ.

ತಾಲ್ಲೂಕಿನ ವಣಗೂರು ಗ್ರಾಮದ ಶಿವರಾಜ್ ಎಂಬುವವರು ಸಾವನ್ನಪ್ಪಿದ್ದಾರೆ. ಮಂಜುಳಾ (49), ವಿಜಯಮ್ಮ (69), ದೇವರಾಜ್ (56), ಗೌರಮ್ಮ (65), ಪ್ರಶಾಂತ್ (42), ಸರಿತಾ (36), ದಿವ್ಯಾ (50), ಧರ್ಮೇಗೌಡ (61), ಪ್ರವೀಣ್ (45), ನೀಲಮ್ಮ (50), ಐ.ಎಲ್. ಪಾಕೀರಪ್ಪ (63), ಯಶೋಧಾ (50), ಮದನ್ (40), ಗಂಗಮ್ಮ (60), ವೆಂಕಟೇಶ್ (50), ಶಿವರಾಮ (55), ನಿರ್ಮಲಾ (48), ಶಿವರಾಜ್ (65), ಲಿಂಗಮ್ಮ (50), ಗೀತಾ (50) ಮತ್ತಿತರರು ಗಾಯಾಗೊಂಡಿದ್ದಾರೆ.



ವನಗೂರು ಸಮೀಪದ ಮಡ್ಡಿಕೇರಿ ಗ್ರಾಮ ಬಸಪ್ಪ ಅವರ ಪುತ್ರ ಯೋಗೇಶ್ ಅವರ ಮದುವೆ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಗುರುವಾರ ಬೆಳಿಗ್ಗೆ ನಡೆಯುತ್ತಿತ್ತು. ಮದುವೆಗೆ » ನಾಲ್ಕನೇ ಪುಟದಲ್ಲಿ

## ವಕೀಲರ ಪ್ರತಿಭಟನೆ ಗೊಂದಲ-ಅಚ್ಚರಿ : ಜಿಲ್ಲಾಧಿಕಾರಿ

• ಪ್ರಜೋದಯ ವರದಿ

**ಹಾಸನ:** ವಕೀಲರು ಯಾವ ಕಾರಣಕ್ಕೆ ಪ್ರತಿಭಟನೆ ಮಾಡುತ್ತಿದ್ದಾರೆಂಬುದೇ ನಮಗೆ ಗೊಂದಲವಾಗಿದೆ. ಏಕಾಏಕಿ ಅಸಮಾಧಾನ ವ್ಯಕ್ತಪಡಿಸಿರುವುದು ಅಚ್ಚರಿ ತಂದಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ತಿಳಿಸಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ವಿಷಯವಿದ್ದರೂ ಕೇಳುವ ತಾಳ್ಮೆ ನಮ್ಮಲ್ಲಿದೆ. ಆದರೆ, ಅವರು ಯಾವುದೇ ವಿಷಯವನ್ನು ನನ್ನ ಗಮನಕ್ಕೆ ತಂದಿಲ್ಲ. ಅವರೇ ಹುಟ್ಟುಹಾಕಿಕೊಂಡು ಪ್ರತಿಭಟನೆ ನಡೆಸುತ್ತಿದ್ದಾರೆ ಎನಿಸುತ್ತಿದೆ ಎಂದು ಹೇಳಿದರು.

ಯಾವುದೇ ಸಮಯ ನೀಡದೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನನ್ನ ಗಮನಕ್ಕೆ ಬಾರದೆ ರಸ್ತೆಯಲ್ಲಿ ವಾಹನ ಸಂಚಾರ ತಡೆದು ಸಾರ್ವಜನಿಕರಿಗೆ ತೊಂದರೆ ಉಂಟು ಮಾಡಿದ್ದಾರೆ. ಯಾವುದೇ ಸಮಸ್ಯೆ ಇದ್ದರೂ ಖಂಡಿತ ಪರಿಹಾರವಿದ್ದು, ನಮ್ಮ ಸ್ಪಂದನೆ ಕೂಡ ಇರುತ್ತದೆ. ಸಾರ್ವಜನಿಕರಿಗೆ ತೊಂದರೆ ನೀಡುವ ರೀತಿಯಲ್ಲಿ ವರ್ತಿಸುವುದು ಬೇಡವೆಂದರು.

ವಕೀಲರು ಕೂಡ ಎಲ್ಲವನ್ನು ತಿಳಿದಿರುವ ಪ್ರಜ್ಞಾವಂತ ನಾಗರಿಕರು. ಜಿಲ್ಲಾಧಿಕಾರಿ ಮನವಿ ಸ್ವೀಕಾರ ಮಾಡುವ ಬದಲು ಅಪರ ಜಿಲ್ಲಾಧಿಕಾರಿಯನ್ನು ಕಳುಹಿಸಿದರೆಂಬ ಆರೋಪ ಮಾಡುತ್ತಿದ್ದಾರೆ. ಅಧಿಕಾರಿಗಳ ಸಮಯವೂ ಅಷ್ಟೇ ಮೌಲ್ಯಯುತವಾಗಿರುತ್ತದೆ. ಪ್ರತಿಭಟನೆ ನಡೆಸಿರುವುದು ನಮಗೂ ಗೊಂದಲ ಉಂಟು ಮಾಡಿದೆ ಎಂದು ಹೇಳಿದರು.

**ಅವ್ಯವಸ್ಥೆ ಸರಿಪಡಿಸದಿದ್ದರೆ ಕಷ್ಟ**

ಪಾಲಿಕೆ ಆಯುಕ್ತರನ್ನು ಕಡ್ಡಾಯ ರಜೆ ಮೇಲೆ ಕಳುಹಿಸಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಯವರು, ಎಲ್ಲಾ ಇಲಾಖೆಯಲ್ಲೂ ಸಿಬ್ಬಂದಿ ಕೊರತೆ ಇದೆ. ಸಿಬ್ಬಂದಿ ಕೊರತೆ ಎಂಬ ಕಾರಣಕ್ಕೆ ನಮ್ಮ ಮೂಲಭೂತ ಕರ್ತವ್ಯ ನಿರ್ವಹಿಸದೇ ಇರುವುದು ಕಾರಣವಾಗಬಾರದು. ಸಿಬ್ಬಂದಿ ಕೊರತೆ ಜೊತೆಗೆ ನಗರವನ್ನು ಸ್ವಚ್ಛವಾಗಿಡಲು ಸಾಧ್ಯವಿಲ್ಲವೆಂದು ಅಧಿಕಾರಿಗಳಿಗೆ ಅನ್ನಿಸಿದರೆ ಕಷ್ಟ. ಅವ್ಯವಸ್ಥೆಯನ್ನು ಸರಿಪಡಿಸಲು ಸಾಧ್ಯವಿಲ್ಲವೆಂದು ಜವಾಬ್ದಾರಿ ಸ್ಥಾನದಲ್ಲಿರುವ ಅಧಿಕಾರಿ ಹೇಳಿದರೆ ನಾವು ಯಾವುದೇ ಸುಧಾರಣೆ ತರಲು ಸಾಧ್ಯವಾಗುವುದಿಲ್ಲ. ಆ ನಿಟ್ಟಿನಲ್ಲಿ ಒಂದು ಸಣ್ಣ ಪ್ರಯತ್ನ ಮಾಡಲಾಗಿದೆ ಎಂದು ಸಮರ್ಥಿಸಿಕೊಂಡರು.

### ಸಿಎಂ ಕಾಯುವಿಕೆ ವ್ಯರ್ಥ, ಸಚಿವರಿಂದಲೇ ಗಂಗೆಪೂಜೆ | ಅಹವಾಲು ಸಲ್ಲಿಸಲು ಕಾಯುತ್ತಿದ್ದ ಸಂತ್ರಸ್ತರಿಗೆ ಈ ವರ್ಷವೂ ನಿರಾಸೆ

## ನಾಳೆ ಹೇಮಾವತಿ ಅಣೆಕಟ್ಟೆಗೆ ಕೃಷ್ಣಬೈರೇಗೌಡ ಬಾಗಿನ

• ಪ್ರಜೋದಯ ವರದಿ

**ಹಾಸನ :** ಹೇಮಾವತಿ ಅಣೆಕಟ್ಟೆಗೆ ಬಾಗಿನ ಅರ್ಪಣೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾಯುವಿಕೆ ಈ ವರ್ಷವೂ ವ್ಯರ್ಥವಾಗಿದೆ. ಸಾರ್ವಜನಿಕರಿಂದ ತೀವ್ರ ಆಕ್ಷೇಪ ವ್ಯಕ್ತವಾದ ಹಿನ್ನಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ನ.1ರಂದು ಬಾಗಿನ ಅರ್ಪಿಸಲು ಮುಂದಾಗಿದ್ದಾರೆ.

ಮುಖ್ಯಮಂತ್ರಿ ಆಗಮಿಸಿದ ವೇಳೆ ಹೇಮಾವತಿ ಭೂಸಂತ್ರಸ್ತರು ತಮ್ಮ ಸಮಸ್ಯೆ ಹೇಳಿಕೊಳ್ಳಬಹುದು, ರೈತರು ನಾಲೆ ವಿಸ್ತರಣೆ, ದುರಸ್ತಿ, ಅಣೆಕಟ್ಟೆ ಎದುರು ಕೆಆರ್‌ಎಸ್ ಮಾದರಿ ಬೃಂದಾವನ ನಿರ್ಮಾಣ ಸೇರಿ ವಿವಿಧ ಬೇಡಿಕೆ ಸಲ್ಲಿಸಲು ಸತತ ಎರಡು ವರ್ಷದಿಂದ ಕಾಯುತ್ತಿದ್ದರೂ ಮುಖ್ಯಮಂತ್ರಿ ಆಗಮಿಸದಿರುವುದು ನಿರಾಸೆ ಮೂಡಿಸಿದೆ.

ಹೇಮಾವತಿ ಜಲಾಶಯ ಜುಲೈ ತಿಂಗಳಲ್ಲೇ ಭರ್ತಿಯಾಗಿದ್ದರೂ ಬಾಗಿನ ಅರ್ಪಣೆಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಥವಾ ಉಪ



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಂದ ಸಮಯ ಕೇಳಿದ್ದರೂ ಇಬ್ಬರು ನಾಯಕರು ನವೆಂಬರ್ ಕ್ರಾಂತಿ, ನಾಯಕತ್ವ ಬದಲಾವಣೆ, ಸಂಪುಟ ಪುನರ್ ರಚನೆ ರಾಜಕೀಯದಲ್ಲೇ ಮುಳುಗಿದ್ದಾರೆ. ಹೀಗಾಗಿ ವಿಧಿ ಇಲ್ಲದೇ ಉಸ್ತುವಾರಿ ಸಚಿವರೇ ಬಾಗಿನ ಅರ್ಪಣೆ ಮಾಡಬೇಕಾಗಿದೆ.

ಈ ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಕೆ.ಎನ್.ರಾಜಣ್ಣ ಅವರು, ಸಿದ್ದರಾಮಯ್ಯ ಅವರ ಕೈಯಿಂದ ಬಾಗಿನ ಅರ್ಪಿಸಬೇಕೆಂಬ ಹಠ ಹಿಡಿದು ಕಾಯುತ್ತ ಕುಳಿತಿದ್ದರೂ, ಮುಡಾ ಹಗರಣದ ಆರೋಪ ಎದುರಿಸುತ್ತಿದ್ದ ಸಿದ್ದರಾಮಯ್ಯ ಅವರು ಆಗಮಿಸದೆ ಇದ್ದರಿಂದ ವಿಧಿ ಇಲ್ಲದೇ 2024 ಸೆ.30ರಂದು ಕೆ.ಎನ್. ರಾಜಣ್ಣ ಅವರೇ ಅಣೆಕಟ್ಟೆಗೆ ಬಾಗಿನ ಅರ್ಪಣೆ ಮಾಡಿದ್ದರು.

ಈಗ ಜಿಲ್ಲಾ ಉಸ್ತುವಾರಿ ಹೊಣೆ ಹೊತ್ತಿಕೊಂಡ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು, ಜಿಲ್ಲೆಗೆ ಮೊದಲ ಬಾರಿ ಆ.15ರಂದು ಸ್ವಾತಂತ್ರ್ಯ ದಿನಾಚರಣೆಗೆ ಆಗಮಿಸಿದ್ದ ವೇಳೆ, ಮುಖ್ಯಮಂತ್ರಿ ಅಥವಾ ಉಪ ಮುಖ್ಯಮಂತ್ರಿ ಅವರನ್ನು ಜಿಲ್ಲೆಗೆ ಕರೆಸಿ, ಬಾಗಿನ ಅರ್ಪಿಸಲಾಗುವುದೆಂದು ಭರವಸೆ ನೀಡಿದ್ದರು. ಸಮಯ ಕೇಳಿ, ಹಲವು ಬಾರಿ ಪ್ರಸ್ತಾಪಿಸಿದ್ದರೂ ಸಮಯ ನೀಡದೆ ಇದ್ದರಿಂದ ಕೃಷ್ಣಬೈರೇಗೌಡ ಅವರೇ ನ.1 ಮಧ್ಯಾಹ್ನ 12 ಗಂಟೆಗೆ ಬಾಗಿನ ಅರ್ಪಣೆ ಮಾಡಲಿದ್ದಾರೆ.

**ಸರ್ಕಾರದ ನಿರ್ಲಕ್ಷ್ಯ ಧೋರಣೆ**

ಹೇಮಾವತಿ ಜಲಾಶಯ ಮಾತ್ರವಲ್ಲದೇ ಬೇಲೂರು ತಾಲ್ಲೂಕಿನಲ್ಲಿರುವ ಯಗಚಿ, ಆಲೂರು ತಾಲ್ಲೂಕಿನಲ್ಲಿರುವ ವಾಟೆಹೊಳೆ ಜಲಾಶಯವೂ ಭರ್ತಿಯಾಗಿದ್ದವು. ಆದರೆ, ಸರ್ಕಾರ ಮತ್ತು ಜನಪ್ರತಿನಿಧಿಗಳ ನಿರ್ಲಕ್ಷ್ಯ ಧೋರಣೆಯಿಂದ ಪ್ರತಿಬಾರಿಯೂ ಬಾಗಿನ ಅರ್ಪಿಸುವುದನ್ನು ಕಡೆಗಣಿಸಲಾಗುತ್ತಿದೆ.

ಅಣೆಕಟ್ಟೆ ಜಿಲ್ಲೆಯಲ್ಲಿದ್ದರೂ ಹೆಚ್ಚಿನ ಪ್ರಮಾಣದ ನೀರು ತುಮಕೂರು, ಮಂಡ್ಯ, ಮೈಸೂರು ಜಿಲ್ಲೆಯ ಜನರು ಉಳಸಿಕೊಳ್ಳುತ್ತಾರೆ. ಆದರೆ, ಜಲಾಶಯ ನಿರ್ಮಾಣದಿಂದ ಸಂತ್ರಸ್ತರಾಗಿರುವ ಜನರು ಪರಿಹಾರ ಸಿಗದೆ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಹೆಚ್‌ಆರ್‌ಪಿ ಹಗರಣಕ್ಕೆ ಪರಿಹಾರವೇ ಇಲ್ಲದಂತಾಗಿದೆ.

**ಜಲಾಶಯದ ನೀರಿನ ಮಟ್ಟ**

ಗುರುವಾರ ಬೆಳಿಗ್ಗೆ 6 ಗಂಟೆಗೆ ಕೊನೆಗೊಂಡಂತೆ 2,922 ಅಡಿ (37.103 ಟಿಎಂಸಿ) ಗರಿಷ್ಠ ನೀರಿನ ಸಂಗ್ರಹ ಸಾಮರ್ಥ್ಯ ಹೊಂದಿರುವ ಹೇಮಾವತಿ ಜಲಾಶಯಲ್ಲಿ ಪ್ರಸ್ತುತ 2921.90 ಅಡಿ (37.006 ಟಿಎಂಸಿ) ನೀರು ಸಂಗ್ರಹವಾಗಿದೆ. ಜಲಾಶಯಕ್ಕೆ 4,829 ಕ್ಯೂಸೆಕ್ ಒಳಹರಿವು ಬರುತ್ತಿದ್ದು, ಒಟ್ಟು 5900 ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ಹೇಮಾವತಿ ಎದದಂಡೆ ನಾಲೆಗೆ 3100 ಕ್ಯೂಸೆಕ್, ಬಲದಂಡೆ ನಾಲೆಗೆ 50 ಕ್ಯೂಸೆಕ್, ನದಿಗೆ 2400 ಕ್ಯೂಸೆಕ್ ನೀರನ್ನು ಹರಿಸಲಾಗುತ್ತಿದೆ.

## ಬೈಕ್‌ಗಳಿಗೆ ಕಾರು ಡಿಕ್ಕಿ : ಮೂವರಿಗೆ ಗಾಯ



• ಪ್ರಜೋದಯ ವರದಿ

**ಅರಕಲಗೂಡು :** ಕಾರು ಡಿಕ್ಕಿ ಹೊಡೆದು ಬೈಕ್‌ಗಳಲ್ಲಿ ತೆರಳುತ್ತಿದ್ದ ಮೂವರು ಗಾಯಗೊಂಡಿರುವ ಘಟನೆ ಪಟ್ಟಣದ ಶಿವದೇವ ಮಂಗಳ ಮಂದಿರ ಸಮುದಾಯ ಭವನದ ಮುಂಭಾಗ ನಡೆದಿದೆ.

ರಾಮನಾಥಪುರಕ್ಕೆ ತೆರಳುತ್ತಿದ್ದ ಮಾರುತಿ ಕಾರು ಮುಂದೆ ಸಾಗುತ್ತಿದ್ದ ಬೈಕ್‌ಗಳಿಗೆ ಡಿಕ್ಕಿ ಹೊಡೆದಿದೆ. ಹಂಪಾಪುರ ಗ್ರಾಮದ ಧರಣಿ ಕೃಷ್ಣೇಗೌಡ, ಬೆಟ್ಟದಹಳ್ಳಿ ಗ್ರಾಮದ ಗಣೇಶ್ ತೀವ್ರವಾಗಿ ಗಾಯಗೊಂಡಿದ್ದಾರೆ. ಒಬ್ಬರ ಎರಡು ಕಾಲು ಮುರಿದಿದೆ ಎನ್ನಲಾಗಿದೆ. ಘಟನೆ ಸಂಬಂಧ ವ್ಯಕ್ತಿಯೊಬ್ಬರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

E-mail : prajodayahsn@gmail.com
ಪ್ರಜೋದಯ
31 ಅಕ್ಟೋಬರ್ 2025 ಶುಕ್ರವಾರ

# ಸಿನಿ ಪ್ರಭಾ

# ಸ್ಯಾಂಡಲ್‌ವುಡ್ ಬಿಗೆಸ್ಟ್ ಸಿನಿಮಾಗಳು

## ಯಾವುದು ಯಾವಾಗ ಆಗುತ್ತೆ ರಿಲೀಸ್?



ಕನ್ನಡದ ಬಿಗ್ ಸಿನಿಮಾಗಳು ಯಾವವು? ಯಾವ ಸಿನಿಮಾ ಯಾವಾಗ ಬರುತ್ತದೆ? ಈ ಸಿನಿಮಾಗಳಲ್ಲಿ ಅತಿ ಹೆಚ್ಚು ನಿರೀಕ್ಷೆ ಹುಟ್ಟಿಸಿದ ಸಿನಿಮಾ ಯಾವುದು? ಈ ಎಲ್ಲದರ ವಿವರ ಇಲ್ಲಿದೆ ಓದಿ.

ಕನ್ನಡದಲ್ಲಿ ಒಂದಷ್ಟು ಸಿನಿಮಾಗಳು ಇವೆ. ಇವು ಈ ವರ್ಷ ರಿಲೀಸ್ ಆಗುತ್ತಿವೆ. ಆದರೆ, ಈ ಚಿತ್ರಗಳಲ್ಲಿ ಎಲ್ಲವೂ ಸೂಪರ್ ಹಿಟ್ ಆಗ್ತವೋ ಇಲ್ವೋ. ಆದರೆ ಹೈಪ್ ಈಗಲೇ ಇದೆ. ಸೂಪರ್ ಸ್ಟಾರ್‌ಗಳ ಸಿನಿಮಾ ಅನ್ನೋ ಟ್ಯಾಗ್ ಬೇರೆ. ಈ ಸಿನಿಮಾಗಳು ಬರೋವಾಗ ಎಲ್ಲ ಸಣ್ಣ-ಪುಟ್ಟ ಸಿನಿಮಾಗಳು ಪಕ್ಕಕ್ಕೆ ಸರಿಯೋದಂತು ಗ್ಯಾರಂಟಿನೇ ಬಿಡಿ. ಆ ಮಟ್ಟಿನ ಸಿನಿಮಾಗಳೇ ಕನ್ನಡದಲ್ಲಿ ಮುಂದಿನ ದಿನಗಳಲ್ಲಿ ಬರ್ತಿವೆ. ಈ ಸಿನಿಮಾಗಳ ಒಂದು ಸ್ಟೋರಿ ಇಲ್ಲಿದೆ ಓದಿ.

ಕನ್ನಡದ ಬಿಗೆಸ್ಟ್ ಸಿನೆಮಾಗಳು

ಈ ಪ್ರಶ್ನೆಗೆ ಸಡನ್ ಆಗಿಯೇ ಒಂದು ಹೆಸರು ಬರುತ್ತದೆ. ಅದು ಟಾಕ್ಸಿಕ್ ಅನ್ನೋದು ಮತ್ತೆ ಒತ್ತಿ ಹೇಳಬೇಕಿಲ್ಲ. ಯಶ್ ಅಭಿನಯದ ಟಾಕ್ಸಿಕ್ ಚಿತ್ರ ತನ್ನದೇ ಹಾದಿಯಲ್ಲಿಯೇ ಇದೆ. ವಿಶ್ವಮಟ್ಟದ ಸಿನಿಮಾ ಆಗಿಯೇ ರೆಡಿ ಆಗುತ್ತಿದೆ. ಯಶ್ ಕಂಡಿರೋ ಅತಿ ದೊಡ್ಡ ಕನಸು ಇದಾಗಿದೆ.

ಬಹು ಕೋಟಿ ವೆಚ್ಚದ ಈ ಚಿತ್ರವನ್ನ ಗೀತು ಮೋಹನದಾಸ್ ಡೈರೆಕ್ಷನ್ ಮಾಡುತ್ತಿದ್ದಾರೆ. ಈ ಚಿತ್ರ ಮಂಗಳೂರು, ಬೆಂಗಳೂರು, ಮುಂಬೈ, ಗೋವಾ ಹೀಗೆ ಬಹುತೇಕ ಕಡೆಗೆ ಚಿತ್ರೀಕರಣ ಆಗಿದೆ. ಕೊನೆಯ ಹಂತದ ಚಿತ್ರೀಕರಣವನ್ನ ಬೆಂಗಳೂರಿನಲ್ಲಿಯೇ ಮಾಡುವ ಪ್ಲಾನ್ ಇದೆ. ಈ ಚಿತ್ರದ ಮೊದಲ ಹಂತದ ಶೂಟಿಂಗ್ ಕೂಡ ಇಲ್ಲಿಯೇ ನಡೆದಿದೆ.

ಟಾಕ್ಸಿಕ್ ಚಿತ್ರದಲ್ಲಿ ಬಹು ತಾರೆಯರು

ಟಾಕ್ಸಿಕ್ ಚಿತ್ರದಲ್ಲಿ ಬಹು ತಾರೆಯರು ಇದ್ದಾರೆ. ಕಾಂತಾರ ಒನ್ ಚಿತ್ರದ ನಾಯಕಿ ರುಕ್ಮಿಣಿ ವಸಂತ್, ಬಾಲಿವುಡ್ ನಟಿ ಕಿಯಾರಾ ಅಡ್ವಾಣಿ, ನಯನತಾರಾ, ತಾರಾ ಸುತಾರಿಯಾ, ಹುಮಾ ಕುರೇಷಿ ಹೀಗೆ ಸಾಲು ಸಾಲು ನಟಿಯರಿದ್ದಾರೆ. ಇವರ ಈ ಚಿತ್ರಕ್ಕೆ ಅನಿರುದ್ಧ್ ರವಿಚಂದರ್ ಸಂಗೀತ ಕೊಡುತ್ತಿದ್ದಾರೆ.

ಈ ಚಿತ್ರ ಕನ್ನಡ ಮತ್ತು ಇಂಗ್ಲಿಷ್ ಅಲ್ಲಿಯೇ ತಯಾರಾಗುತ್ತಿದೆ. ಇದು ಈ ವರ್ಷ ಅಲ್ಲ. ಮುಂದಿನ ವರ್ಷ ಮಾರ್ಚ್ ೯-19, 2026 ರಂದೇ ರಿಲೀಸ್ ಆಗುತ್ತಿದೆ ಅಂತಲೇ ಹೇಳಬಹುದು.




ಜೋಗಿ ಪ್ರೇಮ್ ಕೆಡಿ ಸಿನಿಮಾ

ಕೆಡಿ ಸಿನಿಮಾದ ರಿಲೀಸ್ ಡೇಟ್ ಇನ್ನು ಫಿಕ್ಸ್ ಆಗಿಲ್ಲ. ಆದರೆ, ಇದು ಇದೇ ವರ್ಷ ರಿಲೀಸ್ ಆಗುತ್ತದೆ ಅನ್ನೊ ನಿರೀಕ್ಷೆ ಇದೆ. ಸ್ವತಃ ಜೋಗಿ ಪ್ರೇಮ್ ಮತ್ತು ಧ್ರುವ ಸರ್ಜಾ ಈ ಚಿತ್ರದ ರಿಲೀಸ್ ಬಗ್ಗೆ ಹೇಳಿಕೊಂಡಿದ್ದಾರೆ. ಕಿಚ್ಚ ಸುದೀಪ್ ಈ ಚಿತ್ರದಲ್ಲಿ ವಿಶೇಷ ಪಾತ್ರದಲ್ಲಿಯೇ ಇರ್ತಾರೆ.

ಇವರ ಈ ಚಿತ್ರದಲ್ಲಿ ಸಂಜಯ್ ದತ್ ಇದ್ದಾರೆ. ಶಿಲ್ಪಾ ಶೆಟ್ಟಿ ನಟಿಸಿದ್ದಾರೆ. ರಮೇಶ್ ಅರವಿಂದ್, ಕ್ರೇಜಿ ಸ್ಟಾರ್ ರವಿಚಂದ್ರನ್ ಹೀಗೆ ಇಲ್ಲೂ ಸಾಲು ಸಾಲು ಕಲಾವಿದರಿದ್ದಾರೆ. ಈ ಚಿತ್ರವೂ ಎರಡು ಭಾಗದಲ್ಲಿಯೇ ರಿಲೀಸ್ ಆಗುತ್ತಿದೆ. ಅರ್ಜುನ್ ಜನ್ಯ ಈ ಚಿತ್ರಕ್ಕೆ ಸಂಗೀತ ಕೊಟ್ಟಿದ್ದಾರೆ.

ಅರ್ಜುನ್ ಜನ್ಯ 45 ಸಿನಿಮಾ

ಅರ್ಜುನ್ ಜನ್ಯ 45 ಸಿನಿಮಾ ರೆಡಿ ಇದೆ. ಇದೇ ವರ್ಷ ಡಿಸೆಂಬರ್-25 ರಂದು ಈ ಚಿತ್ರ ರಿಲೀಸ್ ಆಗುತ್ತಿದೆ. ಮಲ್ಟಿಸ್ಟಾರರ್ ಸಿನಿಮಾ ಇದಾಗಿದೆ. ಇದರಲ್ಲಿ ಶಿವರಾಜ್ ಕುಮಾರ್ ಇದ್ದಾರೆ. ಉಪೇಂದ್ರ ನಟಿಸುತ್ತಿದ್ದಾರೆ. ರಾಜ್ ಬಿ ಶೆಟ್ಟಿ ಕೂಡ ಇದ್ದಾರೆ.

ಡೈರೆಕ್ಟರ್ ಅರ್ಜುನ್ ಜನ್ಯ ಅವರಿಗೆ ಇದು ಮೊದಲ ಚಿತ್ರವೇ ಆಗಿದೆ. ಸಂಗೀತ ನಿರ್ದೇಶನದಲ್ಲಿ ಸಾಕಷ್ಟು ಸಿನಿಮಾಗಳನ್ನ ಮಾಡಿದ್ದಾರೆ. ಆದರೆ, ನಿರ್ದೇಶನ ಅಂತ ಬಂದ್ರೆ, ಅದು 45 ಚಿತ್ರವೇ ಆಗಿದೆ. ಈ ಚಿತ್ರಕ್ಕೆ ಅರ್ಜುನ್ ಸಂಗೀತ ನಿರ್ದೇಶನ ಮಾಡಿದ್ದಾರೆ. ಇದರ ಬಗ್ಗೆನೂ ಒಂದು ನಿರೀಕ್ಷೆ ಇದ್ದೇ ಇದೆ.

ದರ್ಶನ್ ಡೆವಿಲ್ ಸಿನಿಮಾ

ದರ್ಶನ್ ಡೆವಿಲ್ ಸಿನಿಮಾ ರೆಡಿ ಆಗುತ್ತಿದೆ. ನಿರ್ದೇಶಕ-ನಿರ್ಮಾಪಕ ಮಿಲನ ಪ್ರಕಾಶ್ ದೊಡ್ಡಮಟ್ಟದಲ್ಲಿಯೇ ಇದನ್ನ ರಿಲೀಸ್ ಮಾಡುತ್ತಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತದ ಇದ್ರೇ ನೆಮ್ದಿಯಾಗ್ ಇರ್ಬೇಕ್, ಒಂದೆ ಒಂದು ಸಲ ಅನ್ನುವ ಎರಡು ಹಾಡು ಈಗಾಗಲೇ ರಿಲೀಸ್ ಆಗಿವೆ. ಈ ಚಿತ್ರವನ್ನ ಡಿಸೆಂಬರ್-12 ರಂದು ರಿಲೀಸ್ ಮಾಡಲಾಗುತ್ತಿದೆ.









ಈ ಒಂದು ಡಿಸೆಂಬರ್ ತಿಂಗಳಲ್ಲಿಯೇ ಸುದೀಪ್ ಅಭಿನಯದ ಚಿತ್ರವೂ ಬರ್ತಿದೆ. ಅರ್ಜುನ್ ಜನ್ಯ ಅವರ 45 ಚಿತ್ರವೂ ಬರ್ತಿದೆ. ಹಾಗಾಗಿಯೇ ಡಿಸೆಂಬರ್ ತಿಂಗಳು ಈ ವರ್ಷ ಭರ್ಜರಿ ಆಗಿಯೇ ಇರುತ್ತದೆ ನೋಡಿ.

ಡಿಸೆಂಬರ್-25 ಕ್ಕೆ ಮಾರ್ಕ್ ಸಿನಿಮಾ

ಸುದೀಪ್ ಅಭಿನಯದ ಮಾರ್ಕ್ ಚಿತ್ರ ಡಿಸೆಂಬರ್-25 ರಂದು ರಿಲೀಸ್ ಆಗುತ್ತಿದೆ. ಡೈರೆಕ್ಟರ್ ವಿಜಯ್ ಕಾರ್ತಿಕೇಯ ಇದನ್ನ ಹೆಚ್ಚು ಕಡಿಮೆ 7 ತಿಂಗಳಲ್ಲಿಯೇ ಪೂರ್ಣಗೊಳಿಸೋ ಪ್ಲಾನ್ ಮಾಡಿದ್ದಾರೆ. ಈಗಾಗಲೇ ಚಿತ್ರದ ಹಾಡು ಹಾಗೂ ಟೈಟಲ್ ಟೀಸರ್ ರಿಲೀಸ್ ಆಗಿದೆ.

ಈ ಸಿನಿಮಾಗಳಲ್ಲದೆ ಕನ್ನಡದಲ್ಲಿ ಇನ್ನು ಹಲವು ಸಿನಿಮಾಗಳೂ ಇವೆ. ದುನಿಯಾ ವಿಜಯ್, ಗೋಲ್ಡನ್ ಸ್ಟಾರ್ ಗಣೇಶ್, ಸುದೀಪ್ ಬಿಲ್ಲ ರಂಗ ಬಾಷಾ ಸಿನಿಮಾಗಳು ಬರೋದಿವೆ ಅಂತಲೇ ಹೇಳಬಹುದು.

## 31-10-2025 ದಿನ ಭವಿಷ್ಯ

**ಮೇಷ:** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ಇಂದು ಅನುಭವಿಗಳ ಒಡನಾಟ ಹೊಂದಿ ಮತ್ತು ಅವರು ಏನು ಹೇಳುತ್ತಾರೆಂದು ಕಲಿಯಿರಿ.

**ವೃಷಭ:** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ.

**ಮಿಥುನ:** ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ. ಡೇಟ್ ಕಾರ್ಯಕ್ರಮ ವಿಫಲವಾಗಬಹುದಾದ್ದರಿಂದ ನಿರಾಶೆಯಾಗಬಹುದು.

**ಕರ್ಕಾಟಕ:** ಕೆಲಸದ ಒತ್ತಡ ಮತ್ತು ಮನೆಯಲ್ಲಿ ಅಪಶೃತಿ ಸ್ವಲ್ಪ ಉದ್ವೇಗ ತರಬಹುದು. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನೀವು ಮಕ್ಕಳು ಅಥವಾ ನಿಮಗಿಂತ ಕಡಿಮೆ ಅನುಭವಿಯಾಗಿರುವವರ ಜೊತೆ ತಾಳ್ಮೆಯಿಂದಿರಬೇಕು. ಪ್ರಣಯದ ಸಂಬಂಧ ಬಹು ಕಾಲ ಬಾಳುವುದಿಲ್ಲ.

**ಸಿಂಹ:** ಅನಂತ ಚೈತನ್ಯ ಮತ್ತು ಉತ್ಸಾಹ ನಿಮ್ಮನ್ನು ಆವರಿಸುತ್ತದೆ ಮತ್ತು ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು. ಇದಕ್ಕಾಗಿ ನಿಮ್ಮ ಆಪ್ತ ನಿಮಗೆ ಆರ್ಥಿಕವಾಗಿ ಸಹಾಯ ಮಾಡಬಹುದು.

**ಕನ್ಯಾ:** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಈ ರಾಶಿಚಕ್ರದ ಉದ್ಯಮಿಗಳು, ಇಂದು ನಿಮ್ಮ ಬಳಿ ಹಣವನ್ನು ಕೇಳುತ್ತಾರೆ ಮತ್ತು ನಂತರ ಮರುಪಾವತಿ ಮಾಡದೇ ಇರುವಂತಹ ನಿಮ್ಮ ಮನೆಯ ಸದಸ್ಯರಿಂದ ದೂರವಿರಬೇಕು ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.

**ತುಲಾ:** ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಇಂದು ನಿಮ್ಮ ವೈವಾಹಿಕ ಜೀವನ ಅಂತರಕ್ಕಾಗಿ ಹಂಬಲಿಸುತ್ತದೆ.

**ವೃಶ್ಚಿಕ:** ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು

**ಧನು:** ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

**ಮಕರ:** ನಿಮ್ಮ ಸಂಗಾತಿಯ ನಿಷ್ಠಾವಂತ ಹೃದಯ ಮತ್ತು ಅದ್ಭುತ ಚೈತನ್ಯ ನಿಮಗೆ ಸಂತೋಷ ನೀಡಬಹುದು. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ, ಸೋದರಿಯ ಪ್ರೀತಿ ನಿಮ್ಮನ್ನು ಉತ್ತೇಜಿಸುತ್ತದೆ. ಅದರೆ ನೀವು ಚಿಕ್ಕ ವಿಷಯಳಿಗೆ ತಾಳ್ಮೆ ಕಳೆದುಕೊಳ್ಳಬಾರದು ಏಕೆಂದರೆ ಅದು ನಿಮ್ಮ ಆಸಕ್ತಿಗಳನ್ನು ಹಾಳು ಮಾಡುತ್ತದೆ.

**ಕುಂಭ:** ಕೆಲವು ಬಿಕ್ಕಟ್ಟುಗಳು ಮತ್ತು ಭಿನ್ನಾಭಿಪ್ರಾಯಗಳು ನಿಮಗೆ ಕಿರಿಕಿರಿ ಹಾಗೂ ಆತಂಕವನ್ನು ತರಬಹುದು. ಇಂದು ಹಣಕಾಸಿನ ಭಾಗ ವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ. ಇದು ನಿಮ್ಮ ಒತ್ತಡ ನಿವಾರಿಸುವುದಲ್ಲದೇ ಆದರೆ ನಿಮ್ಮ ಹಿಂಜರಿಕೆಯನ್ನೂ ತೆಗೆದುಹಾಕುತ್ತದೆ.

**ಮೀನ:** ಧ್ಯಾನ ಪರಿಹಾರ ತರುತ್ತದೆ. ತೀರಾ ಖರ್ಚು ಮಾಡುವ ಮತ್ತು ಮನರಂಜನೆಗೆ ತುಂಬಾ ಖರ್ಚು ಮಾಡುವ ನಿಮ್ಮ ಪ್ರವೃತ್ತಿಗೆ ಕಡಿವಾಣ ಹಾಕಿ. ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ, ಇಂದು ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶೃತಿ ಉಂಟಾಗುವ ಸಾಧ್ಯತೆ ಇದೆ. ಅಂತಹ ಪರಿಸ್ಥಿತಿಯಲ್ಲಿ ನಿಮ್ಮನ್ನು ನಿಯಂತ್ರಿಸಿ. ನೀವು ಇಂದು ಪ್ರೀತಿ ಮಾಲಿನ್ಯವನ್ನು ಹರಡುತ್ತೀರಿ.

## ಕೌಸಲ್ಯ ಸುಪ್ರಜಾ ರಾಮ ಬಳಿಕ ಬ್ಯಾಟ್ ಮೂಲಕ ಮೋಡಿ ಮಾಡಲು ಸಜ್ಜಾದ ಶಶಾಂಕ್-ಡಾರ್ಲಿಂಗ್ ಕೃಷ್ಣ

ಸಿನಿಪ್ರಿಯರಲ್ಲಿ ಕುತೂಹಲ ಹುಟ್ಟಿಸಿರುವ ಬ್ಯಾಟ್ ಚಿತ್ರ ಈ ವಾರ ಪ್ರೇಕ್ಷಕರೆದುರು ಬರುತ್ತಿದೆ.

ಕೌಸಲ್ಯ ಸುಪ್ರಜಾ ರಾಮ ಚಿತ್ರದ ನಂತರ ನಿರ್ದೇಶಕ ಶಶಾಂಕ್ ಹಾಗೂ ನಟ ಡಾರ್ಲಿಂಗ್ ಕೃಷ್ಣ ಕಾಂಬಿನೇಶನ್‌ನಲ್ಲಿ ಮೂಡಿಬರುತ್ತಿರುವ ಚಿತ್ರ ಬ್ಯಾಟ್. ಟ್ರೇಲರ್ ಹಾಗೂ ಹಾಡುಗಳಿಂದಲೇ ಸಿನಿಪ್ರಿಯರಲ್ಲಿ ಕುತೂಹಲ ಹುಟ್ಟಿಸಿರುವ ಚಿತ್ರ ಈ ವಾರ ಪ್ರೇಕ್ಷಕರೆದುರು ಬರಲಿದೆ.

ಈಗಾಗಲೇ ಕಿಚ್ಚ ಸುದೀಪ್ ಈ ಚಿತ್ರದ ಟ್ರೇಲರ್ ಲಾಂಚ್ ಮಾಡಿ ಸಾಥ್ ಕೊಟ್ಟಿದ್ದಾರೆ. ಜೊತೆಗೆ ನಿರ್ದೇಶಕ ಶಶಾಂಕ್ ಹಾಗೂ ಡಾರ್ಲಿಂಗ್ ಕೃಷ್ಣ ಕಾಂಬಿನೇಷನ್ ಹಿಟ್ ಸಿನಿಮಾವನ್ನು ಸ್ಯಾಂಡಲ್‌ವುಡ್‌ಗೆ ಕೊಟ್ಟಿದೆ. ಡಾರ್ಲಿಂಗ್ ಕೃಷ್ಣ ಅವರನ್ನು ಈ ಸಿನಿಮಾದಲ್ಲಿ ಮಾಸ್ ಲುಕ್‌ನಲ್ಲಿ ತೋರಿಸುತ್ತಿದ್ದು, ಬಹಳ ಚೆನ್ನಾಗಿ ಮೂಡಿ ಬಂದಿದೆ ಎಂದು ಸುದೀಪ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಡಾರ್ಲಿಂಗ್ ಕೃಷ್ಣ ಅವರಿಗೆ ನಾಯಕಿಯಾಗಿ ಮನಿಶಾ ಕಂದಕೂರ್ ನಟಿಸಿದ್ದಾರೆ. ಉಳಿದಂತೆ, ಅಚ್ಯುತ್ ಕುಮಾರ್, ರಮೇಶ್ ಇಂದಿರಾ, ಡ್ರ್ಯಾಗನ್ ಮಂಜು ಸೇರಿದಂತೆ ಮೊದಲಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ. ಫಸ್ಟ್ ರ್ಯಾಂಕ್ ರಾಜು ಚಿತ್ರದ ನಂತರ ಮಂಜುನಾಥ್ ವಿ ಕಂದಕೂರ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ.

ಅರ್ಜುನ್ ಜನ್ಯ ಸಂಗೀತ ನಿರ್ದೇಶನ, ಅಭಿಲಾಶ್ ಕಲ್ಲತ್ತಿ ಛಾಯಾಗ್ರಹಣ, ಗಿರಿ ಮಹೇಶ್ ಸಂಕಲನ ಹಾಗೂ ಮಾಸ್ ಮಾದ ಅವರ ಸಾಹಸ ನಿರ್ದೇಶನ ಬ್ಯಾಟ್ ಚಿತ್ರಕ್ಕಿದೆ.

ಬಿಡುಗಡೆಗೆ ಸಜ್ಜಾದ ಬ್ಯಾಟ್: ಯಶಸ್ವಿ ಕೌಸಲ್ಯ ಸುಪ್ರಜಾ ರಾಮ ಚಿತ್ರದ ನಂತರ ಶಶಾಂಕ್ ಹಾಗೂ ಡಾರ್ಲಿಂಗ್ ಕೃಷ್ಣ ಕಾಂಬಿನೇಶನ್‌ನಲ್ಲಿ ಮೂಡಿ ಬಂದಿರುವ ಬ್ಯಾಟ್ ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಅರ್ಜುನ್ ಜನ್ಯ ಸಂಗೀತ ನೀಡಿರುವ ಈ ಚಿತ್ರದ ಹಾಡುಗಳು ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದ್ದು, ಜನರ ಮನ ಗೆದ್ದಿದೆ. ಟೀಸರ್ ಹಾಗೂ ಟ್ರೇಲರ್‌ಗೂ ಮೆಚ್ಚುಗೆಯ ಮಹಾಪೂರವೇ ಹರಿದುಬಂದಿದೆ.

ನಟ ಡಾರ್ಲಿಂಗ್ ಕೃಷ್ಣ : ಡಾಲ್ಫಿನ್ ಎಂಟರ್‌ಟೈನ್ಮೆಂಟ್ ಲಾಂಛನದಲ್ಲಿ ಮಂಜುನಾಥ್ ಕಂದಕೂರ್ ಈ ಚಿತ್ರವನ್ನು ನಿರ್ಮಿಸಿದೆ. ಈಗಾಗಲೇ ಕೃಷ್ಣ ಅವರ ಲುಕ್‌ಗೆ ಅಭಿಮಾನಿಗಳು ಫಿದಾ ಆಗಿದ್ದು, ಚಿತ್ರವನ್ನು ತೆರೆಯ ಮೇಲೆ ನೋಡುವ ಕಾತುರದಲ್ಲಿದ್ದಾರೆ. ಅಕ್ಟೋಬರ್ 31ಕ್ಕೆ ಈ ಚಿತ್ರ ರಾಜ್ಯಾದ್ಯಂತ ತೆರೆ ಕಾಣಲಿದೆ.




## ರೋರಿಂಗ್ ಸ್ಟಾರ್ ಶ್ರೀಮುರಳಿ ಪರಾಕ್ ಸಿನಿಮಾ ಅಡ್ಡಕ್ಕೆ ಫೇಮಸ್ ಸ್ಟಂಟ್ ಮಾಸ್ಟರ್ ಎಂಟ್ರಿ



ಶ್ರೀಮುರಳಿ ಮುಖ್ಯಭೂಮಿಕೆಯ ಮುಂದಿನ ಸಿನಿಮಾ ವೀಕ್ಷಿಸಲು ಅಭಿಮಾನಿಗಳು ಬಹಳ ಕಾತರರಾಗಿದ್ದಾರೆ. ಬಹುನಿರೀಕ್ಷಿತ ಚಿತ್ರಗಳಲ್ಲೊಂದಾದ ಪರಾಕ್ ಶೂಟಿಂಗ್ ಸೆಟ್‌ಗೆ ಫೇಮಸ್ ಸ್ಟಂಟ್ ಮಾಸ್ಟರ್ ಪ್ರವೇಶವಾಗಿದೆ.

ಬಘೀರ ಸಿನಿಮಾದ ಭರ್ಜರಿ ಯಶಸ್ಸಿನ ನಂತರ ರೋರಿಂಗ್ ಸ್ಟಾರ್ ಗ್ರೀನ್ ಸಿಗ್ನಲ್ ಕೊಟ್ಟ ಚಿತ್ರ ಪರಾಕ್. ವಿಭಿನ್ನ ಶೀರ್ಷಿಕೆಯ ಮೂಲಕ ಗಮನ ಸೆಳೆಯುತ್ತಿರುವ ಸಿನಿಮಾದ ಅಪ್ಡೇಟ್ಸ್‌ಗಾಗಿ ಅಭಿಮಾನಿಗಳು ಕಾತರರಾಗಿದ್ದರು. ಅದರಂತೆ, ಇದೀಗ ಶೂಟಿಂಗ್ ಸೆಟ್‌ಗೆ ಫೇಮಸ್ ಸ್ಟಂಟ್ ಮಾಸ್ಟರ್‌ನ ಪ್ರವೇಶವಾಗಿದ್ದು, ಸಿನಿಪ್ರಿಯರ ನಿರೀಕ್ಷೆಗಳನ್ನು ದುಪ್ಪಟ್ಟುಗೊಳಿಸಿದೆ.

ಉಗ್ರಂ, ಭರಾಟೆ, ಮಫ್ತಿ, ಬಘೀರ ನಂತಹ ಸಿನಿಮಾಗಳ ಮೂಲಕ ನಟ ಶ್ರೀಮುರಳಿ ಕನ್ನಡ ಚಿತ್ರರಂಗದಲ್ಲಿ ತಮ್ಮದೇ ಆದ ವಿಶಿಷ್ಟ ಸ್ಟಾರ್‌ಡಮ್ ಹೊಂದಿದ್ದಾರೆ. ಅವರ ಸಿನಿಮಾ ವೀಕ್ಷಿಸಲೆಂದು ಅಪಾರ ಸಂಖ್ಯೆಯ ಅಭಿಮಾನಿಗಳು ಕಾತರರಾಗಿರುತ್ತಾರೆ. ಪರಾಕ್ ಕೂಡಾ ಇದೇ ಸಾಲಿನಲ್ಲಿದೆ. ಕಳೆದ ವರ್ಷ ತೆರೆಕಂಡ ಬಘೀರ ಸಿನಿಮಾ ಅಭೂತಪೂರ್ವ ಯಶಸ್ಸು ಕಂಡಿದ್ದು, ಇತ್ತೀಚೆಗೆ ಪರಾಕ್ ಸೆಟ್ಟೇರಿತು. ಸೆಪ್ಟೆಂಬರ್ ತಿಂಗಳಾಂತ್ಯ ಬೆಂಗಳೂರಿನ ಬಂಡೆ ಮಹಾಕಾಳಮ್ಮ ದೇವಸ್ಥಾನದಲ್ಲಿ ಚಿತ್ರದ ಮುಹೂರ್ತ ಸಮಾರಂಭ ನೆರವೇರಿದ್ದು, ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ಮೊದಲ ದೃಶ್ಯಕ್ಕೆ ಕ್ಲ್ಯಾಪ್ ಮಾಡಿದ್ದರು.

ಯುವ ಪ್ರತಿಭೆ ಹಾಲೇಶ್ ಕೋಗುಂಡಿ ಆ್ಯಕ್ಷನ್ ಕಟ್ ಹೇಳುತ್ತಿರುವ ಚೊಚ್ಚಲ ಚಿತ್ರದ ಚಿತ್ರೀಕರಣ ಭರದಿಂದ ಸಾಗಿದೆ. ಪರಾಕ್ ಅಂಗಳಕ್ಕೆ ಖ್ಯಾತ ಸ್ಟಂಟ್ ಮಾಸ್ಟರ್ ರವಿವರ್ಮ ಎಂಟ್ರಿ ಕೊಟ್ಟಿದ್ದಾರೆ. ಹಾಗಾಗಿ, ಸಿನಿಮಾ ಸುತ್ತಲಿನ ಕುತೂಹಲ ಬಹಳ ದೊಡ್ಡ ಮಟ್ಟದಲ್ಲೇ ಇದೆ.

ರವಿವರ್ಮ ಅವರು ಸ್ಯಾಂಡಲ್‌ವುಡ್ ಮಾತ್ರವಲ್ಲದೇ ಬಾಲಿವುಡ್ ಸ್ಟಾರ್ ಹೀರೋ, ಸ್ಟಾರ್ ಡೈರೆಕ್ಟರ್‌ಗಳಿಂದ ಸೈ ಎನಿಸಿಕೊಂಡಿದ್ದಾರೆ. ಸಲ್ಮಾನ್ ಖಾನ್, ಶಾರುಖ್ ಖಾನ್ ಅವರಂತಹ ಘಟಾನುಘಟಿಗಳ ಸಿನಿಮಾಗಳಿಗೆ ಸಾಹಸ ಸಂಯೋಜಿಸಿ ಜನಪ್ರಿಯತೆ ಗಳಿಸಿರುವ ರವಿವರ್ಮ ಈಗ ಶ್ರೀಮುರಳಿ ಅವರಿಗೆ ಆ್ಯಕ್ಷನ್ ಹೇಳಿಕೊಡಲು ರೆಡಿಯಾಗಿದ್ದಾರೆ.

ಸಿನಿಮಾ ಸೆಟ್ಟೇರಿದ್ದ ಸಂದರ್ಭ ಮಾತನಾಡಿದ್ದ ನಾಯಕ ನಟ ಶ್ರೀಮುರಳಿ, ಬಘೀರ ಬಳಿಕ ಮುಂದಿನ ಸಿನಿಮಾದ ಆಯ್ಕೆಗೆ ಸಂಬಂಧಿಸಿದಂತೆ ಚಿಂತೆ ಇತ್ತು. ನಾನು ಸರಿ-ಸುಮಾರು 200 ಕಥೆಗಳನ್ನು ಕೇಳಿದ್ದೆ. ಇದೀಗ ಪರಾಕ್ ಚಿತ್ರತಂಡದ ಜೊತೆ ಕೆಲಸ ಮಾಡಲು ಉತ್ಸುಕನಾಗಿದ್ದೇನೆ ಎಂದು ತಿಳಿಸಿದ್ದರು.

ಬ್ಯಾಂಡ್ ಸ್ಟುಡಿಯೋಸ್ ಬ್ಯಾನರ್ ಅಡಿ ಪರಾಕ್ ಸಿನಿಮಾ ನಿರ್ಮಾಣ ಆಗುತ್ತಿದೆ. ಚರಣ್ ರಾಜ್ ಸಂಗೀತ, ಸಂದೀಪ್ ವಲ್ಲೂರಿ ಕ್ಯಾಮರಾ ವರ್ಕ್ ನಿಭಾಯಿಸುತ್ತಿದ್ದರೆ, ಉಲ್ಲಾಸ್ ಹೈದೂರ್ ಅವರ ಕಲಾ ನಿರ್ದೇಶನವಿದೆ. ಜೊತೆಗೆ, ಇಂಚರಾ ಸುರೇಶ್ ಕಾಸ್ಟ್ಯೂಮ್ ಡಿಸೈನ್ ಜವಾಬ್ದಾರಿ ಹೊತ್ತಿದ್ದಾರೆ. ಸಿನಿಮಾ ವಿಂಟೇಜ್ ಸ್ಟೈಲ್‌ನಲ್ಲಿ ಮೂಡಿ ಬರಲಿದ್ದು, ಸಿನಿಮಾ ಬಿಡುಗಡೆಗಾಗಿ ಸಿನಿಪ್ರಿಯರು ಎದುರು ನೋಡುತ್ತಿದ್ದಾರೆ.

## ಭಾರತದ ಸಾಕ್ಷಿಪ್ರಜ್ಞೆ ಇಂದಿರಾ ಗಾಂಧಿ ಹತ್ಯೆಗೆ 31 ವರ್ಷ



1984ರ ಅಕ್ಟೋಬರ್ 31 ಭಾರತದ ರಾಜಕೀಯ ಮತ್ತು ಸಾಮಾಜಿಕ ಇತಿಹಾಸದಲ್ಲಿ ಅಚ್ಚಳಿಯದ ಗುರುತು ಬಿಟ್ಟ ದಿನ. ಈ ದಿನ ಭಾರತದ ಪ್ರಥಮ ಮತ್ತು ಏಕೈಕ ಮಹಿಳಾ ಪ್ರಧಾನಮಂತ್ರಿ ಇಂದಿರಾ ಗಾಂಧಿ ಹತ್ಯೆಗೀಡಾದರು. ಅವರು ನಮ್ಮನ್ನು ಅಗಲಿ ಇಂದಿಗೆ 31 ವರ್ಷ.

1984ರ ಜೂನ್ ತಿಂಗಳಲ್ಲಿ ಅಮೃತಸರದ ಸ್ವರ್ಣ ಮಂದಿರದಲ್ಲಿ ನಡೆದ ''ಆಪರೇಷನ್ ಬ್ಲೂ ಸ್ಟಾರ್'' ಕಾರ್ಯಾಚರಣೆಯು ಈ ಘಟನೆಯ ಮೂಲವಾಗಿದೆ. ಸಿಖ್ ಉಗ್ರರನ್ನು ಹೊರಹಾಕಲು ಭಾರತೀಯ ಸೇನೆ ಈ ಆಪರೇಷನ್ ನಡೆಸಿತು. ಈ ಕ್ರಮದಿಂದ ಸಿಖ್ ಸಮುದಾಯದಲ್ಲಿ ಆಕ್ರೋಶ ಉಂಟಾಯಿತು.

ಈ ಹಿನ್ನೆಲೆಯಲ್ಲೇ ಇಂದಿರಾ ಗಾಂಧಿಯವರದೇ ಅಂಗ ರಕ್ಷಕರಾದ ಸತವಂತ್ ಸಿಂಗ್ ಮತ್ತು ಬಿಯಂತ್ ಸಿಂಗ್ ಇಬ್ಬರೂ ಸಿಖ್ ಮೂಲದವರು ಅ. 31ರ ಬೆಳಿಗ್ಗೆ 9 ಗಂಟೆ ಸುಮಾರಿಗೆ ದೆಹಲಿಯ ಸಫ್ದರ್ಜಂಗ್ ರಸ್ತೆಯಲ್ಲಿ ಇಂದಿರಾ ಗಾಂಧಿ ಅವರಿಗೆ ಗುಂಡು ಹಾರಿಸಿದರು.


ಇಂದಿರಾ ಗಾಂಧಿ ಅವರು ಬೆಳಿಗ್ಗೆ ಪೀಟರ್ ಉಸ್ತಿನೋವ್ ಎಂಬ ಇಂಗ್ಲಿಷ್ ಚಲನಚಿತ್ರ ನಿರ್ದೇಶಕರಿಗೆ ಸಂದರ್ಶನ ನೀಡಲು ಹೊರಟಿದ್ದರು. ಅವರು ತೋಟದ ದಾರಿಯಲ್ಲಿ ನಡೆದುಕೊಂಡು ಬರುತ್ತಿದ್ದಾಗಲೇ ಇಬ್ಬರು ಅಂಗ ರಕ್ಷಕರು ಆಕಸ್ಮಿಕವಾಗಿ ಗುಂಡಿನ ದಾಳಿ ನಡೆಸಿದರು. ಗುಂಡುಗಳು ದೇಹದ ವಿವಿಧ ಭಾಗಗಳನ್ನು ಹೊಕ್ಕವು. ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು, ಆದರೆ ವೈದ್ಯರು ಅವರನ್ನು ಉಳಿಸಲು ಸಾಧ್ಯವಾಗಲಿಲ್ಲ.

ದೇಶದ ಮೇಲೆ ಪರಿಣಾಮ: ಇಂದಿರಾ ಗಾಂಧಿಯ ಹತ್ಯೆಯ ಬಳಿಕ ಭಾರತದಲ್ಲಿ ಉಗ್ರ ಸ್ಥಿತಿ ನಿರ್ಮಾಣವಾಯಿತು. ದೇಶದಾದ್ಯಂತ ಸಿಖ್ ವಿರೋಧಿ ಗಲಭೆಗಳು ಸ್ಫೋಟಗೊಂಡವು. ಸಾವಿರಾರು ಜನರು ಪ್ರಾಣ ಕಳೆದುಕೊಂಡರು, ಅನೇಕರು ನಿರಾಶ್ರಿತರಾದರು. ಆ ದಿನ ಕೇವಲ ಒಬ್ಬ ನಾಯಕಿಯ ಜೀವನವಲ್ಲ ಭಾರತದ ರಾಜಕೀಯ ನಿಶ್ಚಲತೆ ಮತ್ತು ಸಾಮಾಜಿಕ ಏಕತೆಗೂ ದೊಡ್ಡ ಹೊಡೆತ ಬಿದ್ದಿತು.

ಇಂದಿರಾ ಗಾಂಧಿಯ ಪರಂಪರೆ: ಗರ್ ಗಾಂಧಿ ಬಚೀ ಹೈ, ತೋ ದೇಶ ಬಚಾ ಹೈ ಈ ಮಾತುಗಳು ಇಂದಿಗೂ ಸ್ಮರಣೀಯ. ಬಲಿಷ್ಠ ನೇತೃತ್ವ, ಅಚ್ಚುಕಟ್ಟಾದ ನಿರ್ಧಾರಗಳು ಮತ್ತು ಮಹಿಳಾ ಶಕ್ತಿ ಎಂಬ ತತ್ತ್ವವನ್ನು ಅವರು ಪ್ರತಿನಿಧಿಸಿದರು.

ಬ್ಯಾಂಕ್‌ಗಳ ರಾಷ್ಟ್ರೀಕರಣದಿಂದ ಹಿಡಿದು ಬಾಂಗ್ಲಾದೇಶ ಯುದ್ಧದ ಜಯದವರೆಗೂ ಅವರ ಪಾತ್ರ ಇತಿಹಾಸದಲ್ಲೇ ವಿಶಿಷ್ಟ. ಇಂದಿರಾ ಗಾಂಧಿ ಅವರು ಹತ್ಯೆಯಾದ ಅಕ್ಟೋಬರ್ 31 ರಂದು ದೇಶದಲ್ಲಿ ರಾಷ್ಟ್ರ ಏಕತಾ ದಿನ ಆಚರಿಸಲಾಗುತ್ತದೆ.

### ಇಂದಿರಾ ಗಾಂಧಿ ಜೀವಮಾನ ಸಾಧನೆ:



- ಭಾರತದ ಮೊದಲ ಮತ್ತು ಏಕೈಕ ಮಹಿಳಾ ಪ್ರಧಾನ ಮಂತ್ರಿ ಇಂದಿರಾ ಗಾಂಧಿ. ಅವರ ಸಾಧನೆಗಳಲ್ಲಿ 1971ರಲ್ಲಿ ಬಾಂಗ್ಲಾದೇಶ ವಿಮೋಚನೆ, ಹಸಿರು ಕ್ರಾಂತಿಯ ಮೂಲಕ ಕೃಷಿಯಲ್ಲಿ ಸುಧಾರಣೆ, ಬ್ಯಾಂಕುಗಳ ರಾಷ್ಟ್ರೀಕರಣ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತದ ಪ್ರತಿಷ್ಠೆಯನ್ನು ಹೆಚ್ಚಿಸುವಂತಹ ಅನೇಕ ನಿರ್ಧಾರಗಳು ಸೇರಿವೆ. ಅವರು ಅನೇಕ ಅಂತರರಾಷ್ಟ್ರೀಯ ಪ್ರಶಸ್ತಿಗಳನ್ನು ಸ್ವೀಕರಿಸಿದರು, ಇದರಲ್ಲಿ 1972 ರಲ್ಲಿ ದೊರೆತ ಭಾರತ ರತ್ನ ಕೂಡ ಸೇರಿದೆ.
- ಬಾಂಗ್ಲಾದೇಶ ವಿಮೋಚನೆ: 1971ರ ಭಾರತ-ಪಾಕಿಸ್ತಾನ ಯುದ್ಧದಲ್ಲಿ ಭಾರತದ ವಿಜಯಕ್ಕೆ ಕಾರಣರಾದರು ಮತ್ತು ಬಾಂಗ್ಲಾದೇಶದ ರಚನೆಗೆ ಸಹಾಯ ಮಾಡಿದರು.
- ಹಸಿರು ಕ್ರಾಂತಿ: ಕೃಷಿ ಉತ್ಪಾದನೆಯನ್ನು ಹೆಚ್ಚಿಸಲು ಹಸಿರು ಕ್ರಾಂತಿಯನ್ನು ಯಶಸ್ವಿಯಾಗಿ ಜಾರಿಗೆ ತಂದರು.
- ಬ್ಯಾಂಕುಗಳ ರಾಷ್ಟ್ರೀಕರಣ: 1969ರಲ್ಲಿ 14 ದೊಡ್ಡ ಭಾರತೀಯ ಖಾಸಗಿ ಬ್ಯಾಂಕುಗಳನ್ನು ರಾಷ್ಟ್ರೀಕರಣ ಮಾಡಿದರು, ಇದರಿಂದಾಗಿ ಬ್ಯಾಂಕಿಂಗ್ ವ್ಯವಸ್ಥೆಯು ಹೆಚ್ಚು ಜನರಿಗೆ ತಲುಪಿತು.
- ಗರೀಬಿ ಹಟಾವೋ ಯೋಜನೆ: ಬಡತನ ನಿವಾರಣೆಗಾಗಿ ಈ ಯೋಜನೆಯನ್ನು ಪ್ರಾರಂಭಿಸಿದರು.
- ಸಿಕ್ಕಿಂನ ಭಾರತಕ್ಕೆ ಸೇರ್ಪಡೆ: 1975ರಲ್ಲಿ ಬಹುತೇಕ ಸಿಕ್ಕಿಂ ಜನತೆಯ ಒಪ್ಪಿಗೆಯ ನಂತರ ಸಿಕ್ಕಿಂ ಅನ್ನು ಭಾರತಕ್ಕೆ ಸೇರಿಸಿಕೊಂಡರು.
- ಯೋಜನಾ ಆಯೋಗದ ಅಧ್ಯಕ್ಷತೆ: 1966-77ರ ಅವಧಿಯಲ್ಲಿ ಯೋಜನೆ ಆಯೋಗದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದರು.
- ಅಂತಾರಾಷ್ಟ್ರೀಯ ಗುರುತಿಸುವಿಕೆ: 1972ರಲ್ಲಿ ಭಾರತ ರತ್ನ, 1972ರಲ್ಲಿ ಮೆಕ್ಸಿಕನ್ ಅಕಾಡೆಮಿ ಪ್ರಶಸ್ತಿ, 1973ರಲ್ಲಿ 2ನೇ ವಾರ್ಷಿಕ ಪದಕ ಮತ್ತು 1976ರಲ್ಲಿ ಸಾಹಿತ್ಯ ವಾಚಸ್ಪತಿ ಮುಂತಾದ ಅನೇಕ ಪ್ರಶಸ್ತಿಗಳನ್ನು ಪಡೆದಿದ್ದಾರೆ.
- ಪ್ರಮುಖ ಸಚಿವಾಲಯಗಳ ನಿರ್ವಹಣೆ: ಮಾಹಿತಿ ಮತ್ತು ಪ್ರಸಾರ ಸಚಿವಾಲಯ, ಗೃಹ ವ್ಯವಹಾರಗಳ ಸಚಿವಾಲಯ, ಹಣಕಾಸು ಸಚಿವಾಲಯ, ಅಣುಶಕ್ತಿ ಮತ್ತು ಬಾಹ್ಯಾಕಾಶ ಸಚಿವಾಲಯ, ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದಂತಹ ವಿವಿಧ ಸಚಿವಾಲಯಗಳ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ.



# ಸೂರ್ಯಕಾಂತ್ ಸುಪ್ರೀಂನ ನೂತನ ಮುಖ್ಯ ನ್ಯಾಯಮೂರ್ತಿ

## ರಾಷ್ಟ್ರಪತಿ ದ್ರೌಪದಿ ಮುರ್ಮು ನೇಮಕ | ನ.24ರಂದು ಜಸ್ಟೀಸ್ ಸೂರ್ಯಕಾಂತ್ ಅವರು ಸಿಜೆಐ ಆಗಿ ಪ್ರಮಾಣವಚನ ಸ್ವೀಕಾರ

• ಪ್ರಜೋದಯ ವರದಿ

**ಹೊಸದಿಲ್ಲಿ:** ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರು ಮುಂಬರುವ ನ.23ರಂದು ನಿವೃತ್ತಿ ಹೊಂದುತ್ತಿರುವ ಹಿನ್ನೆಲೆಯಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಜಸ್ಟೀನ್ ಸೂರ್ಯಕಾಂತ್ ಅವರನ್ನು ಮುಂದಿನ ಸಿಜೆಐ ಆಗಿ ನೇಮಕ ಮಾಡಿದ್ದಾರೆ. ನ್ಯಾ. ಸೂರ್ಯಕಾಂತ್ ಅವರು ಪ್ರಸ್ತುತ ಸುಪ್ರೀಂ ಕೋರ್ಟ್‌ನ ಎರಡನೇ ಹಿರಿಯ ನ್ಯಾಯಾಧೀಶರಾಗಿದ್ದಾರೆ.

ಪ್ರಸ್ತುತ ಸಿಜೆಐ ಬಿಆರ್ ಗವಾಯಿ ಅವರು ನ.23ರಂದು ಸೇವೆಯಿಂದ ನಿವೃತ್ತಿ ಹೊಂದಲಿದ್ದು, ನ.24ರಂದು ಜಸ್ಟೀಸ್ ಸೂರ್ಯಕಾಂತ್ ಅವರು ಸಿಜೆಐ ಆಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು, ರಾಷ್ಟ್ರಪತಿಗಳು ಜಸ್ಟೀನ್ ಸೂರ್ಯಕಾಂತ್ ಅವರನ್ನು ಸಿಜೆಐ ಆಗಿ ನೇಮಕ ಮಾಡಿರುವುದನ್ನು ದೃಢಪಡಿಸಿದ್ದಾರೆ.



ಭಾರತದ ಸಂವಿಧಾನವು ನೀಡಿರುವ ಅಧಿಕಾರವನ್ನು ಚಲಾಯಿಸಿ, ರಾಷ್ಟ್ರಪತಿಗಳು ಭಾರತದ ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶರಾದ ನ್ಯಾ. ಸೂರ್ಯಕಾಂತ್ ಅವರನ್ನು ನವೆಂಬರ್ 24, 2025 ರಿಂದ ಜಾರಿಗೆ ಬರುವಂತೆ ಭಾರತದ ಮುಖ್ಯ ನ್ಯಾಯಮೂರ್ತಿಯಾಗಿ ನೇಮಕ ಮಾಡಲು ಆದೇಶ ಹೊರಡಿಸಿದ್ದಾರೆ ಎಂದು ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಕಾನೂನು ಸಚಿವರು ನ್ಯಾಯಮೂರ್ತಿ ಸೂರ್ಯಕಾಂತ್ ಅವರಿಗೆ ತಮ್ಮ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಶುಭಾಶಯಗಳನ್ನು ತಿಳಿಸಿದ್ದು, ನೂತನ ಸಿ.ಜೆ.ಐ. ನೇತೃತ್ವದಲ್ಲಿ ಸುಪ್ರೀಂಕೋರ್ಟ್ ನ್ಯಾಯವನ್ನು ಎತ್ತಿ ಹಿಡಿಯುವ ಕೆಲಸವನ್ನು ಮುಂದುವರೆಸಲಿದೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

### 53ನೇ ಸಿಜೆಐ ಆಗಿ ಫೆಬ್ರವರಿ 9, 2027ರವರೆಗೆ ಅಧಿಕಾರ

### ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಮಾಹಿತಿ

### ನ.23ರಂದು ಸಿಜೆಐ ಬಿಆರ್ ಗವಾಯಿ ಸೇವೆಯಿಂದ ನಿವೃತ್ತಿ

ಈ ವಾರದ ಆರಂಭದಲ್ಲಿ ನ್ಯಾ. ಸೂರ್ಯಕಾಂತ್ ಅವರ ಹೆಸರನ್ನು ಭಾರತದ ಮುಂದಿನ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಸ್ತಾಪಿಸಿ, ಪ್ರಸ್ತುತ ಸಿಜೆಐ ಬಿಆರ್ ಗವಾಯಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದರು. 53ನೇ ಸಿಜೆಐ ಆಗಿ, ನ್ಯಾ. ಸೂರ್ಯಕಾಂತ್ ಫೆಬ್ರವರಿ 9, 2027ರವರೆಗೆ ಅಧಿಕಾರದಲ್ಲಿ ಚಲಾಯಿಸಲಿದ್ದಾರೆ.

ಜಸ್ಟೀಸ್ ಸೂರ್ಯಕಾಂತ್ ಅವರು ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡುವ ಆರ್ಟಿಕಲ್ 370 ರದ್ದತಿ ವಿಚಾರಣೆಯಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸಿದ್ದರು. ಅಲ್ಲದೇ ನ್ಯಾ. ಸೂರ್ಯಕಾಂತ್ ಅವರು ಚುನಾವಣಾ ಬಾಂಡ್‌ಗಳು ಅಕ್ರಮ ಎಂದು ತೀರ್ಪು ನೀಡಿದ ಸುಪ್ರೀಂಕೋರ್ಟ್ ಪೀಠದ ಸದಸ್ಯರಾಗಿದ್ದರು.

ನ್ಯಾ. ಸೂರ್ಯಕಾಂತ್ ಅವರು ಪೆಗಾಸಸ್ ಫೋನ್ ಕದ್ದಾಲಿಕೆ ಪ್ರಕರಣದ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಪೀಠದ ಸದಸ್ಯ ರಾಗಿಯೂ ಕಾರ್ಯ ನಿರ್ವಹಿಸಿದ್ದಾರೆ. ರೋಹ್ಟಕ್‌ನ ಮಹರ್ಷಿ ದಯಾನಂದ್ ಸರಸ್ವತಿ ವಿಶ್ವ ವಿದ್ಯಾಲಯದಿಂದ 1984 ರಲ್ಲಿ ಕಾನೂನು ಪದವಿ ಪಡೆದ ನ್ಯಾ. ಸೂರ್ಯಕಾಂತ್, 1985ರಲ್ಲಿ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನಲ್ಲಿ ಕಾನೂನು ಅಭ್ಯಾಸವನ್ನು ಆರಂಭಿಸಿದರು.

2000ರಲ್ಲಿ ಹರಿಯಾಣದ ಅತ್ಯಂತ ಯುವ ವಕೀಲರಾಗಿ ನೇಮಕೊಂಡಿದ್ದ ನ್ಯಾ,. ಸೂರ್ಯಕಾಂತ್, 2001ರಲ್ಲಿ ಸಿನಿಯರ್ ಅಡ್ವೋಕೇಟ್ ಆಗಿ ನೇಮಕೊಂಡಿದ್ದರು. ಮುಂದೆ 2004 ರಲ್ಲಿ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನ ಜಡ್ಜ್ ಆಗಿ ನ್ಯಾ. ಸೂರ್ಯಕಾಂತ್ ನೇಮಕಗೊಂಡರು. ಅದೇ ರೀತಿ 2018ರಲ್ಲಿ ಹಿಮಾಚಲ ಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಮೂರ್ತಿಯಾಗಿ ನ್ಯಾ. ಸೂರ್ಯಕಾಂತ್ ಸೇವೆ ಸಲ್ಲಿಸಿದ್ದಾರೆ.

# ರೈಲ್ವೆಗೇಟ್ ಮುರಿದು ದಾಟಿದ ಕಾಡಾನೆ




• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ಒಸೂರು ಎಸ್ಟೇಟ್ ಹತ್ತಿರದ ಹಲಸುಲಿಗೆ ಕಾಫಿ ಬೋರ್ಡ್ ಮಾರ್ಗದ ರೈಲ್ವೆ ಗೇಟನ್ನು ತಡರಾತ್ರಿ ಸುಮಾರು 1.30ರ ವೇಳೆಗೆ ಒಂಟಿ ಕಾಡಾನೆಯೊಂದು ಮುರಿದು ದಾಟಿದ ದೃಶ್ಯ ಮೊಬೈಲ್ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ, ಪ್ರದೇಶದ ಜನರಲ್ಲಿ ಆತಂಕ ಉಂಟು ಮಾಡಿದೆ. ತಾಲ್ಲೂಕಿನಲ್ಲಿ ಇತ್ತೀಚೆಗೆ ಕಡಿಮೆಯಾಗಿದ್ದ ಕಾಡಾನೆ ಉಪಟಳ ಮತ್ತೆ ಪ್ರಾರಂಭಗೊಂಡಿದ್ದು, ಇದರಿಂದ ಬೆಳೆಗಾರರು ಹಾಗೂ ಗ್ರಾಮಸ್ಥರು ಆತಂಕಗೊಂಡಿದ್ದಾರೆ. ಕಳೆದ ಒಂದು ವಾರದಿಂದ ಹಾನುಬಾಳ್ ಮತ್ತು ಹೆತ್ತೂರು ಹೋಬಳಿಗಳಲ್ಲಿ ಕಾಡಾನೆಗಳ ಸಂಚಾರ ಹೆಚ್ಚಾಗಿ, ಕಾಫಿ, ಬಾಳೆ ಹಾಗೂ ಇತರ ಬೆಳೆಗಳಿಗೆ ಹಾನಿ ಉಂಟುಮಾಡುತ್ತಿದೆ.

ಗ್ರಾಮಸ್ಥರು ಅರಣ್ಯ ಇಲಾಖೆಗೆ ಕಾಡಾನೆಗಳ ಚಲನವಲನದ ಬಗ್ಗೆ ಮಾಹಿತಿ ನೀಡಿದರೂ ಯಾವುದೇ ಕ್ರಮ ಕೈಗೊಳ್ಳದಿರುವುದರಿಂದ ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಡರಾತ್ರಿ ಹೊತ್ತು ರೈಲ್ವೆ ಮಾರ್ಗದ ಮೂಲಕ ಸಂಚರಿಸುವ ಕಾಡಾನೆಗಳು ವಾಹನ ಚಾಲಕರಿಗೂ ಅಪಾಯವನ್ನು ಉಂಟು ಮಾಡುತ್ತಿವೆ ಎನ್ನಲಾಗಿದೆ.

# ರಾಷ್ಟ್ರೀಯ ಹೆದ್ದಾರಿ ಅಕ್ಕಪಕ್ಕ ಸರ್ವಿಸ್ ರಸ್ತೆಗೆ ಆಗ್ರಹ

• ಪ್ರಜೋದಯ ವರದಿ

**ಸಕಲೇಶಪುರ:** ಬಾಳ್ಳುಪೇಟೆ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಯ ಅಕ್ಕಪಕ್ಕದಲ್ಲಿ ಸರ್ವಿಸ್ ರಸ್ತೆ ಹಾಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದಿದ್ದರೆ ಉಗ್ರ ಹೋರಾಟಕ್ಕೆ ಮುಂದಾಗುವುದಾಗಿ ಗ್ರಾಮ ಪಂಚಾಯಿತಿ ಸದಸ್ಯ ರೋಹಿತ್ ಹೇಳಿದರು.

ಬಾಳ್ಳುಪೇಟೆಯ ರಾಷ್ಟ್ರೀಯ ಹೆದ್ದಾರಿಯ ಸರ್ವಿಸ್ ರಸ್ತೆಯ ಸಮಸ್ಯೆ ಕುರಿತು ಎನ್‌ಎಚ್‌ಎಐ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಮಾತನಾಡಿದ ಅವರು, ರಸ್ತೆಯಲ್ಲಿ ಆಗುತ್ತಿರುವ ಅಪಘಾತಗಳ ಬಗ್ಗೆ ಮಾಹಿತಿ ನೀಡಿ ಅಗತ್ಯವಿರುವ ಸ್ಪೀಡ್ ಬಂಪರ್‌ಗಳು ಹಾಗೂ ಸೂಚನಾ ಫಲಕಗಳನ್ನು ಅಳವಡಿಸಬೇಕೆಂದು ಅಧಿಕಾರಿಗಳಿಗೆ ಮನವಿ ಮಾಡಿದರು.



ಮುಂದಿನ ತಿಂಗಳಲ್ಲಿ ಸರ್ವಿಸ್ ರಸ್ತೆಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳಲಿದ್ದು, ಶೀಘ್ರದಲ್ಲೇ ಕಾಮಗಾರಿ ಪ್ರಾರಂಭವಾಗಲಿದೆ ಎಂದು ಎನ್‌ಎಚ್‌ಎಐ ಅಧಿಕಾರಿಗಳು ತಿಳಿಸಿದ್ದಾರೆ. ಇದೇ ವೇಳೆ ಹೆದ್ದಾರಿಯಲ್ಲಿ ಏಕಮುಖ ಸಂಚಾರ ಉಲ್ಲಂಘಿಸುವ ವಾಹನ ಚಾಲಕರ ವಿರುದ್ಧ ಪ್ರಕರಣ ದಾಖಲಿಸಲಾಗುವುದೆಂದು ಸರ್ಕಲ್ ಇನ್‌ಸ್ಪೆಕ್ಟರ್ ಬಿ.ಎ. ಪಾಟೀಲ್ ಹಾಗೂ ಗ್ರಾಮಾಂತರ ಠಾಣೆ ಇನ್‌ಸ್ಪೆಕ್ಟರ್ ಪ್ರಸನ್ನ ತಿಳಿಸಿದ್ದಾರೆ ಎಂದು ಹೇಳಿದರು.

ಹೆದ್ದಾರಿಯ ಅಕ್ಕಪಕ್ಕದಲ್ಲಿರುವ ಪರವಾನಿಗೆ ಇಲ್ಲದ ಅಂಗಡಿಗಳನ್ನು ತೆರವುಗೊಳಿಸುವ ಕ್ರಮ ಕೈಗೊಳ್ಳಬೇಕೆಂದು, ಪರವಾನಿಗೆ ಇಲ್ಲದೆ ಗುಡಾರದ ಅಂಗಡಿಗಳನ್ನು ನಡೆಸಿ ಅಪಘಾತಗಳು ಸಂಭವಿಸಿದರೆ ಸಂಬಂಧಿಸಿದವರ ವಿರುದ್ಧ ಪ್ರಕರಣ ದಾಖಲಿಸಬೇಕೆಂದು ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲತಾ ಚಂದ್ರು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹರೀಶ್, ಕಾರ್ಯದರ್ಶಿ ಶೇಖರ್, ಉಪಾಧ್ಯಕ್ಷ ಸ್ವಾಮಿ ಎಚ್.ಎಂ., ಎನ್‌ಎಚ್‌ಎಐ ಅಧಿಕಾರಿಗಳು ಹಾಗೂ ಇಂಜಿನಿಯರ್‌ಗಳು ಉಪಸ್ಥಿತರಿದ್ದರು.

# ನಿರಂತರ ಓದುವ ಅಭ್ಯಾಸದಿಂದ ವಿದ್ಯಾರ್ಥಿಗಳಿಗೆ ಯಶಸ್ಸು ಸಾಧ್ಯ

• ಪ್ರಜೋದಯ ವರದಿ

**ಹಾಸನ:** ವಿದ್ಯಾರ್ಥಿಗಳ ನಿರಂತರ ಓದುವ ಅಭ್ಯಾಸದಿಂದ ಉತ್ತಮ ಜ್ಞಾನ ಸಂಪಾದಿಸುವ ನಿಟ್ಟಿನಲ್ಲಿ ಯಶಸ್ಸು ನಮ್ಮದಾಗುತ್ತದೆ ಎಂದು ಹಾಸನ ಅಕ್ಷರ ಅಕಾಡೆಮಿಯ ವ್ಯವಸ್ಥಾಪಕ ಕಾರ್ತಿಕ್ ಡಿ.ಪಿ.ಹೇಳಿದರು.

ನಗರದ ಆರ್.ಸಿ. ರಸ್ತೆ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿರ್ವಹಣಾಶಾಸ್ತ್ರ ವಿಭಾಗದ ವತಿಯಿಂದ ಗುರುವಾರ ಪ್ರಥಮ ವರ್ಷದ ಬಿ.ಬಿ.ಎ. ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸ್ವಾಗತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ಸ್ಪರ್ಧಾತ್ಮಕ ಜಗತ್ತಿನಲ್ಲಿ ನಮ್ಮ ಜ್ಞಾನಾಭಿವೃದ್ಧಿಗೆ ಬೇಕಾದ ಸಿದ್ದತೆಯನ್ನು ಮಾಡುವುದು ಅಗತ್ಯ. ಶಿಕ್ಷಣ ಪ್ರತಿಯೊಬ್ಬ ವ್ಯಕ್ತಿಯ ಅತ್ಯಮೂಲ್ಯ ಸಂಪಾದನೆ ಎಂದರೆ ತಪ್ಪಾಗಲಾರದು. ಯಾವುದೇ ಒಂದು ನಿರ್ದಿಷ್ಟ ಕ್ಷೇತ್ರದಲ್ಲಿ ಪರಿಣತಿ ಹೊಂದಿದಾಗ ಮಾತ್ರ ಯಶಸ್ಸು ನಮ್ಮ ಕೈಸೇರುತ್ತದೆ ಎಂದು ಹೇಳಿದರು.




ವಿದ್ಯಾರ್ಥಿಗಳು ದಿನನಿತ್ಯ ಸ್ಪರ್ಧಾತ್ಮಕ ಪರೀಕ್ಷೆಗಾಗಿ ಹೆಚ್ಚಿನ ಸಮಯವನ್ನು ಮೀಸಲಿಡಬೇಕು. ಜೊತೆಗೆ ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಬರುವ ಮಾದರಿಯುತ ಪ್ರಶ್ನೆಗಳ ಬಗ್ಗೆ ತಿಳಿಸಿಕೊಟ್ಟರು. ಇಂದಿನ ಯುವ ಜನತೆ ವಿದ್ಯಾಭ್ಯಾಸದಲ್ಲಿ ಹಿಂದುಳಿಯಲು ಸಾಮಾಜಿಕ ಮಾಧ್ಯಮಗಳು ಮುಖ್ಯ ಕಾರಣವಾಗಿವೆ. ಮೊಬೈಲ್‌ನಲ್ಲಿ ಕಳೆಯುವ ಸಮಯವನ್ನು ತಮ್ಮ ಓದಿಗೆ ಮೀಸಲಿಟ್ಟಾಗ ಮಾತ್ರ ಸಾಧನೆಯ ಮೆಟ್ಟಿಲೇರಲು ಸಾಧ್ಯವಾಗುತ್ತದೆ. ಯುವಕರು ವಿದ್ಯಾಭ್ಯಾಸದಲ್ಲಿ ಇಂದು ಕುಂಠಿತರಾಗಲು ಸಾಮಾಜಿಕ ಮಾಧ್ಯಮಗಳು ಕಾರಣವಾಗಿದೆ. ಸಾಧನೆಯ ಹಾದಿಯಲ್ಲಿ ಜಯ ಸಾಧಿಸಬೇಕಾದರೆ ಏಕಾಗ್ರತೆಯಿಂದ ಶಿಸ್ತು ಮೈಗೂಡಿಸಿಕೊಂಡು ಸಾಗಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಿ.ಕೆ.ಮಂಜಯ್ಯ ಮಾತನಾಡಿ, ವಿದ್ಯಾರ್ಥಿಗಳಿಗೆ ಪಠ್ಯದ ಶಿಕ್ಷಣದ ಜೊತೆಗೆ ಶಿಸ್ತು, ಸಮಯ ಪಾಲನೆ ಮುಖ್ಯ. ಶಿಕ್ಷಣದಿಂದ ಸಮಾಜದ ಬದಲಾವಣೆ ಸಾಧ್ಯ. ವಿದ್ಯಾರ್ಥಿನಿಯರು ಕಲಿಕೆಯೆಡೆಗೆ ಹೆಚ್ಚಿನ ಗಮನ ಹರಿಸಬೇಕು. ಗುರು-ಹಿರಿಯರ ಮಾರ್ಗದರ್ಶನವನ್ನು ಅಳವಡಿಸಿಕೊಂಡಾಗ ಮಾತ್ರ ಜೀವನದಲ್ಲಿ ಉನ್ನತ ಮಟ್ಟಕ್ಕೆ ತಲುಪಬಹುದು. ವಿದ್ಯಾರ್ಥಿ ಜೀವನದ ಪ್ರಾಮಾಣಿಕ ಕಲಿಕೆ ಭವಿಷ್ಯದ ಯಶಸ್ಸಿನ ಕ್ಷಣಗಳಿಗೆ ಕಾರಣವಾಗುವುದು. ಯುವತಿಯರು ವಿದ್ಯಾಭ್ಯಾಸದ ಅವಧಿಯಲ್ಲಿ ಯಾವುದೇ ಅಡ್ಡದಾರಿಯನ್ನು ಹಿಡಿಯದರೆ ಉತ್ತಮ ಗುಣಗಳನ್ನು ಮೈಗೂಡಿಸಿಕೊಂಡು ತಮ್ಮ ಜೀವನವನ್ನು ಕಟ್ಟಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಐ.ಕ್ಯೂ.ಎ.ಸಿ. ಸಂಚಾಲಕ ಜಿ.ಆರ್. ಮೋಹನ್‌ಕುಮಾರ್, ನಿರ್ವಹಣಾಶಾಸ್ತ್ರ ವಿಭಾಗದ ಮುಖ್ಯಸ್ಥೆ ಎಸ್.ಜಿ. ರೇಖಾ, ಉಪನ್ಯಾಸಕರಾದ ನವೀನ್ ಕೆ.ಸಿ., ಬಿಂದು, ಅತಿಥ್, ಸ್ವಪ್ನ ಹಾಗೂ ಇತರರು ಹಾಜರಿದ್ದರು.

# ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪ್ರಕಟ

## ಪ್ರಕಾಶ್‌ರಾಜ್ ಸೇರಿ 70 ಮಂದಿಗೆ ಗೌರವ

• ಪ್ರಜೋದಯ ವರದಿ

**ಬೆಂಗಳೂರು:** 2025 ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಯ ಅಧಿಕೃತ ಪಟ್ಟಿ ಕರ್ನಾಟಕ ಸರ್ಕಾರದಿಂದ ಪ್ರಕಟವಾಗಿದೆ. ಮೊದಲ ಬಾರಿಗೆ ರಾಜ್ಯೋತ್ಸವ ಪ್ರಶಸ್ತಿಗೆ ಅರ್ಜಿ ಕರೆಯದೆ ಒಟ್ಟು 70 ಮಂದಿಯನ್ನು ಆಯ್ಕೆ ಮಾಡಲಾಗಿದೆ. ನಟ ಪ್ರಕಾಶ್ ರಾಜ್ ಸೇರಿದಂತೆ ವಿವಿಧ ವಲಯಗಳ ಅರ್ಹರಿಗೆ ನಾಡಿನ ಅತ್ಯುನ್ನತ ಗೌರವ ನೀಡಲಾಗುತ್ತಿದೆ.

ಪ್ರಶಸ್ತಿ ನೀಡಿಕೆಯಲ್ಲಿ ಜಿಲ್ಲಾವಾರು, ಸಾಮಾಜಿಕ ಪರಿಪಾಲನೆಯಡಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಆಯ್ಕೆ ಸಲಹಾ ಸಮಿತಿ ಸದಸ್ಯರು ಶಿಫಾರಸ್ಸು ಮಾಡಿದ್ದವರನ್ನು ಬಹುತೇಕ ಆಯ್ಕೆ ಮಾಡಲಾಗಿದೆ. ನಾಲ್ಕೈದು ಬಾರಿ ಸಭೆ ನಡೆಸಿದ ಸದಸ್ಯರು ಅರ್ಹರನ್ನು ಆಯ್ಕೆ ಮಾಡಲು ಸಹಕರಿಸಿದ್ದಾರೆ ಎಂದು ಸಚಿವ ಶಿವರಾಜ್ ತಂಗಡಗಿ ವಿಧಾನಸೌಧದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಇತಿಹಾಸದಲ್ಲೇ ಮೊದಲ ಬಾರಿಗೆ ಸಮಗಾರ ಹರಳಯ್ಯ ಸಮುದಾಯಕ್ಕೆ ಸೇರಿದ ಇಬ್ಬರು ಪ್ರತಿಭೆಗಳನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಮೊದಲೇ ನಿರ್ಧರಿಸಿದಂತೆ ಈ ಬಾರಿ ಯಾವುದೇ ಸಂಘ-ಸಂಸ್ಥೆಗಳಿಗೆ ಪ್ರಶಸ್ತಿ ನೀಡಿಲ್ಲ. 12 ಮಂದಿ ಮಹಿಳೆಯರಿಗೆ ಈ ಬಾರಿ ಪ್ರಶಸ್ತಿ ಆಯ್ಕೆ ಮಾಡಲಾಗಿದೆ. ಈ ಪೈಕಿ ಕೆಲವರು ಸ್ವಯಂ ಮನವಿ ನೀಡಿದ್ದು, ಅಂತಹವರು ಪ್ರಶಸ್ತಿಗೆ ಅರ್ಹರಿದ್ದ ಕಾರಣ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

# ಗ್ರಾಮೀಣ ಮಕ್ಕಳಲ್ಲೂ ಅಪಾರ ಪ್ರತಿಭೆ; ಪ್ರೋತ್ಸಾಹದ ಅಗತ್ಯವಿದೆ

• ಪ್ರಜೋದಯ ವರದಿ

**ಸಕಲೇಶಪುರ:** ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಪ್ರತಿಭೆಗೆ ಕೊರತೆಯಿಲ್ಲ, ಆದರೆ ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಅಗತ್ಯವಿದೆ ಎಂದು ಭೀಮ ಕೋರೆಗಾಂವ್ ವಿಜಯೋತ್ಸವ ಸಮಿತಿ ಹಾಗೂ ಕಲ್ಚರಲ್ ಪಬ್ಲಿಕ್ ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷ ರಾಜಶೇಖರ್ ಅವರು ಹೇಳಿದರು.

ಪಟ್ಟಣದ ಶಾಪ್ ಸಿದ್ದೇಗೌಡ ಹಿರಿಯ ಪ್ರಾಥಮಿಕ ಪಾಠಶಾಲೆಯ ವಿದ್ಯಾರ್ಥಿಗಳಿಗೆ ಟ್ರ್ಯಾಕ್‌ಸೂಟ್‌ಗಳನ್ನು ವಿತರಿಸಿ ಅವರು ಮಾತನಾಡಿದರು. ನಗರ ಪ್ರದೇಶದ ಮಕ್ಕಳಿಗೆ ಶಿಕ್ಷಣ, ಕ್ರೀಡೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಕಲಿಯಲು ಸಾಕಷ್ಟು ಸೌಲಭ್ಯಗಳು ದೊರಕುತ್ತವೆ. ಆದರೆ ಗ್ರಾಮೀಣ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯುತ್ತಿದ್ದರೂ, ಅವರ ಪ್ರತಿಭೆ ಬೆಳೆಯಲು ಅಗತ್ಯವಾದ ಸೌಲಭ್ಯ ಮತ್ತು ಮಾರ್ಗದರ್ಶನದ ಕೊರತೆ ಇದೆ ಎಂದು ಹೇಳಿದರು.



ನಮ್ಮ ಟ್ರಸ್ಟ್ ಈಗಾಗಲೇ ಗ್ರಾಮೀಣ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಮತ್ತು ಸಹಕಾರ ನೀಡುತ್ತಾ ಬಂದಿದೆ. ಈ ಪ್ರಯತ್ನದ ಭಾಗವಾಗಿ ವಿದ್ಯಾರ್ಥಿಗಳಿಗೆ ಆಟೋಟಗಳಲ್ಲಿ ಧರಿಸಲು ಅನುಕೂಲವಾಗುವಂತಹ ಟ್ರ್ಯಾಕ್ ಸೂಟ್‌ಗಳನ್ನು ವಿತರಿಸಿದ್ದು, ಮಕ್ಕಳು ಕ್ರೀಡೆಯಲ್ಲಿ ಹೆಚ್ಚಿನ ಸಾಧನೆ ಮಾಡಲಿ ಎಂದು ಹಾರೈಸುತ್ತೇವೆ ಎಂದರು.

ಟ್ರಸ್ಟ್‌ನ ಸಂಯೋಜಕ ಶಾಂತರಾಜ್ ಹೆನ್ನಲಿ ಮಾತನಾಡಿ, ಟ್ರಸ್ಟ್ ಹಲವು ಸಮಾಜಮುಖಿ ಕಾರ್ಯಗಳನ್ನು ಕೈಗೊಂಡಿದ್ದು, ಈ ಹಿಂದೆ ಹಲವು ಶಾಲೆಗಳಿಗೆ ಅಗತ್ಯ ವಸ್ತುಗಳನ್ನು ವಿತರಿಸಿದೆ ಎಂದರು. ಸಮಾಜದ ಹಿತಕ್ಕಾಗಿ ಶಿಕ್ಷಣ, ಆರೋಗ್ಯ ಮತ್ತು ಸಾಮಾಜಿಕ ಸೇವೆಯ ಕ್ಷೇತ್ರಗಳಲ್ಲಿ ಸಹಾಯಹಸ್ತ ಚಾಚುವ ಯೋಜನೆಗಳನ್ನು ಮುಂದಿನ ದಿನಗಳಲ್ಲಿ ಕೈಗೊಳ್ಳಲಾಗುವುದು ಎಂದರು.

ವಿದ್ಯಾರ್ಥಿಗಳು ಶೈಕ್ಷಣಿಕ ಕ್ಷೇತ್ರದ ಜೊತೆಗೆ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ಮುನ್ನಡೆಸಬೇಕು. ಅದಕ್ಕಾಗಿ ಟ್ರಸ್ಟ್ ಸದಾ ಮಕ್ಕಳಿಗೆ ಪ್ರೋತ್ಸಾಹ ನೀಡಲು ಸಿದ್ಧವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕ ಲಕ್ಕಪ್ಪ, ಭೀಮ ಕೋರೆಗಾಂವ್ ವಿಜಯೋತ್ಸವ ಸಮಿತಿಯ ದೇವರಾಜ್ ಬೈಕೆರೆ, ಪ್ರಶಾಂತ್ ಕಲ್ಗನೆ, ನಲ್ಲೂಲ್ಲಿ ಈರಯ್ಯ, ಮಳಲಿ ಗೋಪಾಲ್, ಪುನೀತ್ ಬೆಳಗೋಡು, ಸಂದೀಪ ಬೆಳಗೋಡು, ನೀಡನೂರು ಜಗದೀಶ್, ಗಂಗಣ್ಣ, ಹಳೆಕೆರೆ ಚಂದ್ರು, ಅನಿಲ್ ಬಿಳಿಸರೆ, ಕುಮಾರ್ ಕ್ಯಾಮನಹಳ್ಳಿ ಮತ್ತು ದಿನೇಶ್‌ಗೌಡ ಹೆನ್ನಲಿ ಸೇರಿದಂತೆ ಇನ್ನಿತರರಿದ್ದರು.

# ಕನ್ನಡ ರಾಜ್ಯೋತ್ಸವ: ರಕ್ತದಾನ ಶಿಬಿರ

• ಪ್ರಜೋದಯ ವರದಿ

ಹಾಸನ: ಕನ್ನಡ ರಾಜ್ಯೋತ್ಸವದ ಅಂಗವಾಗಿ ರೋಟರಿ ಕ್ಲಬ್ ಆಫ್ ಹಾಸನ್ ಟೈಗರ್ಸ್ ವತಿಯಿಂದ ಅಕ್ಟೋಬರ್ 31, ಶುಕ್ರವಾರ ಬೆಳಿಗ್ಗೆ 11.30ಕ್ಕೆ, ರೋಟರಿ ಕ್ಲಬ್ ಆಫ್ ಹಾಸನ ಟೈಗರ್ಸ್ ಆಫೀಸ್, ಅಕ್ಷರ ಬುಕ್ ಹೌಸ್ ಎದುರು, ಶಂಕರ ಮಠ ರಸ್ತೆ, ಹಾಸನದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ.

ಸಂಜೆ 6.30ಕ್ಕೆ ಹೋಟೆಲ್ ಸೈಬರ್ಡ್, ಹಾಸನದಲ್ಲಿ, ಸಕಲೇಶಪುರದ ಖ್ಯಾತ ಬರಹಗಾರ ವಿಶ್ವಾಸ್.ಡಿ. ಗೌಡ ಅವರ ಎಂಟನೇ ಕೃತಿ ನೆಮ್ಮದಿಯ ವಿಳಾಸವೆಲ್ಲಿದೆ? ಪುಸ್ತಕದ ಲೋಕಾರ್ಪಣೆ ಸಮಾರಂಭ ನಡೆಯಲಿದೆ.

ಕತ್ತರಿಘಟ್ಟ ಮತ್ತು ಹರಿಸೇವಾ, ನೆನಪುಗಳ ಖಾತೆ, ಬಾಳೊಂದು ಚೈತ್ರಾಮಯ, ಚಿಂತನ ಚೈತ್ರ, ಭಾವನೆಗಳ ಪ್ರತಿರೂಪ, ವಿಶ್ವಾಸದ ವಿಮರ್ಶೆ ಮೊದಲಾದ ಕೃತಿಗಳ ಮೂಲಕ ಸಾಹಿತ್ಯ ಲೋಕದಲ್ಲಿ ಗುರುತಿಸಿಕೊಂಡಿರುವ ವಿಶ್ವಾಸ್.ಡಿ.ಗೌಡ ಅವರು ಪತ್ರಿಕಾ ಅಂಕಣಗಳಲ್ಲಿಯೂ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಅವರ ಅನೇಕ ಕೃತಿಗಳು ಪ್ರಸ್ತುತ ಮುದ್ರಣ ಹಂತದಲ್ಲಿವೆ.ಈ ಸಂದರ್ಭದಲ್ಲಿ ಎಸ್. ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ ಅತ್ಯಧಿಕ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸಲು ತೀರ್ಮಾನಿಸಲಾಗಿದೆ.

ಕಾರ್ಯಕ್ರಮವನ್ನು ರೋಟರಿ ಕ್ಲಬ್ ಆಫ್ ಹಾಸನ್ ಟೈಗರ್ಸ್ ಅಧ್ಯಕ್ಷ ರೋಟೇರಿಯನ್ ನಿಶ್ಚಯ ಧನಪಾಲ್ ಅವರ ಅಧ್ಯಕ್ಷತೆಯಲ್ಲಿ ನಡೆಸಲಾಗಲಿದ್ದು, ಅಸಿಸ್ಟೆಂಟ್ ಗವರ್ನರ್ ರೋಟೇರಿಯನ್ ಮಂಜುನಾಥ್ ಹಾಗೂ ಝೋನಲ್ ಲೆಫ್ಟಿನೆಂಟ್ ಶಿವಕುಮಾರ್ ಉಪಸ್ಥಿತರಿರುವರು.

# ಮಂಗಗಳಿಂದ ಉಪದ್ರವ: ರೈತ ಕಂಗಾಲು

• ಪ್ರಜೋದಯ ವರದಿ

**ಹೊಳೆನರಸೀಪುರ:** ತಾಲ್ಲೂಕಿನಲ್ಲಿ ಚಿರತೆ ಉಪಟಳ ಆಗಾಗ್ಗೆ ಸಂಭವಿಸುತ್ತಿರುವ ಜತೆಗೆ ಕೆಲ ಗ್ರಾಮಗಳ ತೋಟ, ಗದ್ದೆಗಳಿಗೆ ಲಗ್ಗೆ ಇಟ್ಟಿರುವ 25 ಕ್ಕೂ ಹೆಚ್ಚಿನ ಮಂಗಗಳ ಗುಂಪು ಹೊಸದೊಂದು ಪ್ರಾಣಿ ಸಂಘರ್ಷಕ್ಕೆ ನಾಂದಿಯಾಗುತ್ತಿದೆ.

ತಾಲ್ಲೂಕಿನ ಕಟ್ಟಳ್ಳಿ ಹಾಗೂ ಚಿಕ್ಕಬ್ಯಾಗತವಳ್ಳಿ ಗ್ರಾಮದ ರೈತರು ಮಂಗಗಳ ಹಾವಳಿಯಿಂದ ಕಳೆದ 8 ತಿಂಗಳಿನಿಂದ ಸಹನೆ ಕಳೆದುಕೊಂಡಿದ್ದು, ಬೆಳೆ ನಷ್ಟ ತಪ್ಪಿಸಿ, ಮಂಗಗಳನ್ನು ಹಿಡಿದು ಕಾಡಿಗೆ ಬಿಡುವಂತೆ ಕೋರಿ ಅರಣ್ಯ ಇಲಾಖೆಗೆ ಮನವಿ ನೀಡಿದ್ದಾರೆ. ಆದರೆ ಅವುಗಳ ಕಾರ್ಯಾಚರಣೆಗೆ ನಮ್ಮಲ್ಲಿ ಯಾವುದೇ ಸಲಕರಣೆಗಳಾಗಲಿ, ಅನುದಾನವಾಗಲಿ ಇಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಎರಡೂ ಗ್ರಾಮಗಳ ಸುಮಾರು 40 ಕ್ಕೂ ಹೆಚ್ಚಿನ ರೈತರು ಮಂಗಗಳ ಕಾಟದಿಂದ ತಮ್ಮ ಬೆಳೆ ನಷ್ಟ ಅನುಭವಿಸಿದ್ದಾರೆ. ಮುಸುಕಿನ ಜೋಳ, ತೆಂಗು, ಬಾಳೆ, ಎಳನೀರು ಬೆಳೆಗಳು ತಿಂದು ಬಿಡಾಡಿರುವ ವೀಡಿಯೋ, ಫೋಟೊ ಸಹಿತ ತಮ್ಮ ಅಳಲು ತೋಡಿಕೊಂಡಿದ್ದಾರೆ.

> 'ಕೋತಿಗಳು ಮತ್ತು ಮಾವನ ಸಂಘರ್ಷ ಕುರಿತು ಹೊಸದೊಂದು ಆದೇಶವೇ ಇದೆ. ಅದನ್ನು ಹಿಡಿದು ಸುರಕ್ಷಿತ ವನಕ್ಕೆ ಬಿಡುವ ತಂಡವೇ ಬೇರೆ ಇದೆ. ಸ್ಥಳೀಯ ಸಂಸ್ಥೆಗಳು ಅನುದಾನ ಬಳಕೆ ಮಾಡಬೇಕಿದೆ. ಅರಣ್ಯ ಇಲಾಖೆ ಜತೆ ಇರಲಿದೆ ಅಷ್ಟೆ. ಗ್ರಾಮ ಭಾಗದಲ್ಲಿ ತಾಪಂ ಕಾರ್ಯನಿರ್ವಹಕರೇ ಗಮನ ಹರಿಸಬೇಕಿದೆ.'
> –ದಿಲೀಪ್‌ಕುಮಾರ್, ವಲಯ ಅರಣ್ಯಾಧಿಕಾರಿ, ಹೊಳೆನರಸೀಪುರ.

ಕಟ್ಟಳ್ಳಿ ಗ್ರಾಮದ ನಂಜೇಗೌಡ, ಗಿಡ್ಡೇಗೌಡ, ಸುದಾ ಚಿಕ್ಕಬ್ಯಾಗತವಳ್ಳಿ ಶಿವಣ್ಣ, ಮಂಜು, ಮೋಹನ, ದಿನೇಶ್ ಸೇರಿದಂತೆ ಹತ್ತಾರು ರೈತರು ಅರಣ್ಯಾಧಿಕಾರಿಗಳಲ್ಲಿ ಮನವಿ

# ಕಾಳುಮೆಣಸು ಕುರಿತ ವಿಚಾರ ಸಂಕಿರಣ



• ಪ್ರಜೋದಯ ವರದಿ

**ಅರೇಹಳ್ಳಿ:** ಕಾಳುಮೆಣಸಿನ ನಾಟಿ, ನಿರ್ವಹಣೆ, ಪೋಷಣೆ, ಕೊಯ್ಲು ಹಾಗು ಸ್ಪಾಟ್‌ಜೆಟ್ ತುಂತುರು ಹನಿ ನೀರಾವರಿ ವ್ಯವಸ್ಥೆಯಿಂದಾಗುವ ಪ್ರಯೋಜನಗಳ ಸಂಬಂಧಪಟ್ಟಂತೆ ಪಟ್ಟಣದ ಕಾಫಿ ಬೆಳೆಗಾರರ ಸಂಘದ ಆವರಣದಲ್ಲಿ ವಿಚಾರ ಸಂಕಿರಣ ನಡೆಯಿತು.

ಅಂತಾರಾಷ್ಟ್ರೀಯ ಕಾಫಿ ಮತ್ತು ಕಾಳು ಮೆಣಸು ಪ್ರಶಸ್ತಿ ವಿಜೇತ, ಪ್ರಗತಿಪರ ಕೃಷಿಕ ಹೆಚ್.ಎಸ್. ಧರ್ಮರಾಜ್ ಭಾಗವಹಿಸಿ, ಕೃಷಿಯಲ್ಲಿನ ತಮ್ಮ ಅನುಭವವನ್ನು ಹಂಚಿಕೊಂಡರು. ಇದೇ ವೇಳೆ ಕಾರ್ಯಕ್ರಮದಲ್ಲಿ ಹಾಜರಿದ್ದ ಹೋಬಳಿ ವ್ಯಾಪ್ತಿಯ ನೂರಾರು ಬೆಳೆಗಾರರು ಕೃಷಿ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡ ತಮ್ಮ ಅನುಭವವನ್ನು ವಿನಿಮಯ ಮಾಡಿಕೊಂಡರು.


ಕಾಫಿ ಬೆಳೆಗಾರರ ಸಂಘದ ಹೋ. ಅಧ್ಯಕ್ಷ ಶಾರಿಬ್ ಫರ್ಹಾನ್, ಉಪಾಧ್ಯಕ್ಷ ಪುಟ್ಟರಾಜು, ಕಾರ್ಯದರ್ಶಿ ಎಂ.ಟಿ ರಾಜು, ಖಜಾಂಚಿ ಜಾವೀದ್,

# ಸಂಸದರ ಅನುದಾನ ಹೆಚ್ಚಳಕ್ಕೆ ಮನವಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ಕ್ಷೇತ್ರಾವಾರು ಪ್ರದೇಶವಾರು ಅಭಿವೃದ್ದಿಗಾಗಿ ವೆಚ್ಚಗೊಳಿಸಲು ನೀಡುವ ಸಂಸದರ ಅನುದಾನ ಹೆಚ್ಚಳ ಕೋರಿ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದೇವೆ ಎಂದು ಸಂಸದ ಶ್ರೇಯಸ್ ಎಂ. ಪಟೇಲ್ ತಿಳಿಸಿದರು.

ತಾಲ್ಲೂಕಿನ ಕಡವಿನಹೊಸಹಳ್ಳಿ ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ್ ಭವನಕ್ಕೆ 10 ಲಕ್ಷ ರೂ. ವೆಚ್ಚದಲ್ಲಿ ಅಡುಗೆ ಮನೆ ಮೇಲ್ಚಾವಣಿ ನಿರ್ಮಾಣ ಕಾಮಗಾರಿಗೆ ಶುಕ್ರವಾರದಂದು ಚಾಲನೆ ನೀಡಿ ಮಾತನಾಡಿದ ಅವರು, ದೇಶದಾದ್ಯಂತ ಎಲ್ಲ ಸಂಸದರಿಗೆ ವರ್ಷಕ್ಕೆ 5 ಕೋಟಿ ರೂ ಅಷ್ಟೆ ಅನುದಾನ ನೀಡಲಾಗುತ್ತದೆ. ಇದರ ಹೊರತಾಗಿ ರಾಷ್ಟ್ರೀಯ ಹೆದ್ದಾರಿ ಅಭಿವೃದ್ದಿ, ರಾಜ್ಯ ರಸ್ತೆ ಕಾಮಗಾರಿಗೆ ಪ್ರತ್ಯೇಕವಾಗಿ ಹಣ ವಿನಿಯೋಗಿಸಲಾಗುತ್ತದೆ ಎಂದರು.



ಆದರೆ, ನನ್ನ ಕ್ಷೇತ್ರದ ಪ್ರತಿ ತಾಲೂಕಿಗೂ ಪ್ರಾಶಸ್ತ್ಯ ಇರಿಸಿ ವೆಚ್ಚ ಮಾಡಲು ಅನುದಾನ ಸಾಕಾಗದು. ಅಂತೆಯೇ ಹಲವು ಕ್ಷೇತ್ರಗಳ ವಿಸ್ತಾರಕ್ಕನುಗುಣವಾಗಿ ಹೆಚ್ಚಿನ ಅನುದಾನ ಬೇಕಾಗುತ್ತದೆ. ಇದರಿಂದ ನಮ್ಮ ಮನವಿ ಕೇಂದ್ರ ಸರಕಾರ ಪುರಸ್ಕರಿಸುವ ವಿಶ್ವಾಸ ಇದೆ. ತಾಲೂಕಿನ ಕಸಬಾ ಹೋಬಳಿಯ ಲಕ್ಕೂರು, ಚಿಟ್ಟನಹಳ್ಳಿ ಹಾಗೂ ಲಕ್ಷ್ಮಿಪುರ ಗ್ರಾಮಗಳಲ್ಲಿ ಗುರುವಾರ ನಾನಾ ಅಭಿವೃದ್ದಿ ಕೆಲಸಗಳಿಗೆ ಚಾಲನೆ ನೀಡಿದ್ದೇನೆ. ಪ್ರಸುತ ಹಳೆಕೋಟೆ ಹೋಬಳಿಯ ಕಡವಿನಹೊಸಹಳ್ಳಿ, ಬನ್ನಕುಪ್ಪೆ, ಹಿರೇಬೆಳಗಲಿ, ಕಾಳೇನಹಳ್ಳಿ ಕಾವಲು, ದೊಡ್ಡಕುಂಚೇವು, ಮಳಲಿ, ತೆರಣ್ಯ, ಶ್ರೀರಾಮದೇವರ 5 ಕಿಲೋ ಮೀಟರ್ ನಾಲೆ ಹಾಗೂ ಮಾವಿನಕೆರೆ ಕುಡಿಯುವ ನೀರಿನ ಕಿರುಘಟಕ ಸ್ಥಾಪನೆಗೆ ಚಾಲನೆ ನೀಡಿದ್ದೇನೆ ಎಂದು ಶ್ರೇಯಸ್ ಪಟೇಲ್ ಅವರು ತಿಳಿಸಿದರು.

## ಧೂಮಪಾನ ಮತ್ತು ಮದ್ಯಪಾನ ಸೇವನೆಯಿಂದ ದೂರವಿರಿ: ನರ ರೋಗ ತಜ್ಞೆ ಡಾ.ಎ.ವತ್ಸಲ ಲಕ್ಷ್ಮೀ

# ರಕ್ತ ಒತ್ತಡದಿಂದ ಸ್ಟ್ರೋಕ್; ಆರೋಗ್ಯದ ಬಗ್ಗೆ ತಾತ್ಸಾರ ಬೇಡ

• ಪ್ರಜೋದಯ ವರದಿ

**ಹಾಸನ:** ಅತಿಯಾದ ರಕ್ತದ ಒತ್ತಡ, ಅತಿಯಾದ ಧೂಮಪಾನ ಮತ್ತು ಮದ್ಯಪಾನ ಸೇವನೆ, ಅನಾರೋಗ್ಯಕರ ಆಹಾರ ಸೇವನೆ, ನಿಯಂತ್ರಣಕ್ಕೆ ಬಾರದ ಮಧುಮೇಹ, ಅತಿಯಾದ ಕೊಲೆಸ್ಟ್ರಾಲ್‌ನಿಂದ **ಸ್ಟ್ರೋಕ್** ಕಾಯಿಲೆ ಬರಬಹುದು. ಆದ್ದರಿಂದ ಪ್ರತಿಯೊಬ್ಬರು ಆರೋಗ್ಯದ ಬಗ್ಗೆ ತಾತ್ಸಾರ ಮಾಡದೇ ರಕ್ತದ ಒತ್ತಡ ನಿಯಂತ್ರಣದಲ್ಲಿ ಇಡಿ ಎಂದು ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮದ ನ್ಯೂರೋಲಜಿಸ್ಟ್ ಡಾ.ಎ.ವತ್ಸಲ ಲಕ್ಷ್ಮೀ ಅವರು ಅಭಿಪ್ರಾಯಪಟ್ಟರು.

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಸನ ಮತ್ತು ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಹಾಸನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಸನ ಜಿಲ್ಲೆ, ರೋಟರಿ ಕ್ಲಬ್ ಆಫ್ ಹಾಸನ್ ಮಿಡ್ ಟೌನ್, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಹಾಸನ ಇವರ ಸಹಭಾಗಿತ್ವದಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಹಾಸನ ಕಛೇರಿಯಲ್ಲಿ ಏರ್ಪಡಿಸಿದ್ದ ವರ್ಲ್ಡ್ ಸ್ಟ್ರೋಕ್ ಡೇ ಮತ್ತು ಸ್ಟ್ರೋಕ್ ರೋಗಿಗಳ ಬೆಂಬಲ ಗುಂಪು ಸಭೆ ಹಾಗೂ ಆಯ್ದ ಸ್ಟ್ರೋಕ್ ರೋಗಿಗಳಿಗೆ ಮೊಟ್ಟೆ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಧೂಮಪಾನ ಹಾಗೂ ಮದ್ಯಪಾನ ನಿಲ್ಲಿಸಿ, ನಿಯಮಿತ ವ್ಯಾಯಾಮ ಮಾಡಿ, ಕೊಲೆಸ್ಟ್ರಾಲ್‌ನ್ನು ನಿಯಂತ್ರಣದಲ್ಲಿಡಬೇಕು, ಒಂದು ವೇಳೆ ಯಾರಿಗಾದರೂ ಸ್ಟ್ರೋಕ್ ಕಾಯಿಲೆ ಉದ್ಭವಿಸಿದರೆ ತಕ್ಷಣ ತಜ್ಞ ವೈದ್ಯರನ್ನು ಸಂಪರ್ಕಿಸಿ, ಸೂಕ್ತ ಚಿಕಿತ್ಸೆ ಪಡೆದರೆ ರೋಗಿಯ ಆರೋಗ್ಯದ ಮೇಲೆ ಉದ್ಭವಿಸುವ ಪರಿಣಾಮ ಮತ್ತು ಜೀವನಕ್ಕೆ ಆಗುವ ತೊಂದರೆಯನ್ನು ತಪ್ಪಿಸಬಹುದು ಎಂದರು.



ಜಿಲ್ಲಾ ಕುಷ್ಟರೋಗ ನಿಯಂತ್ರಣಾಧಿಕಾರಿ ಮತ್ತು ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮದ ಹಾಸನ ಜಿಲ್ಲಾ ನೋಡಲ್ ಅಧಿಕಾರಿಗಳಾದ ಡಾ. ನಾಗೇಶ್ ಪಿ.ಆರಾಧ್ಯ ಅವರು ಮಾತನಾಡಿ, ಯಾರಿಗಾದರೂ ಇದ್ದಕ್ಕಿದ್ದಂತೆ ಕೈ ಕಾಲು ಬಲ ದುರ್ಬಲವಾಗುವುದು, ತೀವ್ರ ತಲೆನೋವು, ಮಾತು ಬಾರದಿರುವುದು, ಮುಖದ ಒಂದು ಬಾಗ ತಿರುಗುವುದು ಇತ್ಯಾದಿ ಲಕ್ಷಣಗಳು ಕಂಡು ಬಂದರೆ ತಡ ಮಾಡದೇ ತಜ್ಞ ವೈದ್ಯರನ್ನು ಸಂಪರ್ಕಿಸಬೇಕು ಹಾಗೂ ಕರ್ನಾಟಕ ಆರೋಗ್ಯ ಉಪಕ್ರಮದ ಅಡಿಯಲ್ಲಿ ದೊರೆಯುವ ವಿವಿಧ ಆರೋಗ್ಯ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

ಮೂವ್‌ಮೆಂಟ್ ಸಂಸ್ಥೆಯ ಅಧ್ಯಕ್ಷ ಡಾ. ಸುಧೀರ್ ಬಿ. ಬೆಂಗಳೂರ ಅವರು ಮಾತನಾಡಿ, ಹಿಮ್ಸ್ ಮತ್ತು ಎಸ್‌ವಿವೈಎಂ ಸಂಸ್ಥೆಯ ಸಹಭಾಗಿತ್ವದಲ್ಲಿ ಕಳೆದ 7 ವರ್ಷಗಳಿಂದ ಹಾಸನ ಜಿಲ್ಲೆಯ ಆಯ್ದ ಪ್ರದೇಶಗಳಲ್ಲಿ ಮೂಲಕ ಕ್ಯಾನ್ಸರ್ ಮತ್ತು ಇನ್ನಿತರೇ ಮಾರಣಾಂತಿಕ ಹಾಗೂ ದೀರ್ಘಾವಧಿ ಕಾಯಿಲೆಯಿಂದ ಬಳಲುತ್ತಿರುವ ರೋಗಿಗಳ ಮನೆಗಳಿಗೆ ತೆರಳಿ ಮನೆಯಾಧಾರಿತ ಉಪಶಮನ ಆರೈಕೆ ನಿಡುತ್ತಿದ್ದು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸುತ್ತ, ಪ್ರತಿಯೊಬ್ಬರು ಆರೋಗ್ಯಕರ ಜೀವನ ಶೈಲಿ ದೀರ್ಘಾವಧಿಯಾಗಿ ಆರೋಗ್ಯಕರ ಜೀವನ ನಡೆಸಬಹುದು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಆಫ್ ಹಾಸನ್ ಮಿಡ್ ಟೌನ್ ಮಾಜಿ ಅಧ್ಯಕ್ಷ ರೊ. ಲಲಿತ್ ಕುಮಾರ್, ಹಾಲಿ ಅಧ್ಯಕ್ಷ ರೊ. ಸಿದ್ದೇಶ್ವರ್ ಹೆಚ್, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಗೃಹ ವೈದ್ಯರುಗಳಾದ ಡಾ. ದೀಪ್ತಿ ಎ, ಮತ್ತು ಡಾ. ದೀನ ಸಹೇರ್, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಹಾಸನದ ಜಿಲ್ಲಾ ಸಂಯೋಜಕಿಯಾದ ಲತಾಮಣಿ, ಫಿಜಿಯೋಥೆರಪಿಸ್ಟ್ ಕುಮಾರಿ ಐಶ್ವರ್ಯ ಯು ಶೆಟ್ಟಿ, ನಾಗೇಂದ್ರ, ಸ್ಪೀಚ್‌ಥೆರಫಿಸ್ಟ್ ಮಾನಸ ಕೆ ಕೆ ಹಾಗೂ ಎಸ್‌ವಿವೈಎಂ ಹಾಸನ ಶಾಖೆಯ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಪ್ರತಿ ಸ್ಟ್ರೋಕ್ ರೋಗಿಗೆ 12 ಮೊಟ್ಟೆಗಳಂತೆ ಒಟ್ಟು 25 ಫಲಾನುಭವಿಗಳಿಗೆ 320 ಮೊಟ್ಟೆಗಳನ್ನು ವಿತರಿಸಲಾಯಿತು. ಮೂವ್‌ಮೆಂಟ್ ಸಂಸ್ಥೆಯ ಜಿಲ್ಲಾ ಸಂಯೋಜಕ ಯೋಗನಾಥ್ ಎಂ.ಹೆಚ್., ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮದ ಜಿಲ್ಲಾ ಸಂಯೋಜಕಿ ಲತಾಮಣಿ ಇದ್ದರು.

ಕಾರ್ಯಕ್ರಮದಲ್ಲಿ 22 ಫಲಾನುಭವಿಗಳು, 9 ಆರೈಕೆದಾರರು, 14 ಸಿಬ್ಬಂದಿಗಳು ಮತ್ತು ಆತಿಥಿಗಳು ಸೇರಿದಂತೆ ಒಟ್ಟು 45 ಜನ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

# ರಾಜ್ಯ ಮಟ್ಟದ ಬಾಕ್ಸಿಂಗ್ ಸ್ಪರ್ಧೆಗೆ ಮೂವರು ವಿದ್ಯಾರ್ಥಿಗಳು ಆಯ್ಕೆ



• ಪ್ರಜೋದಯ ವರದಿ

**ಹಾಸನ:** ಪದವಿ ಪೂರ್ವ ಕಾಲೇಜುಗಳ ರಾಜ್ಯ ಮಟ್ಟದ ಬಾಕ್ಸಿಂಗ್ ಪಂದ್ಯಾವಳಿಗೆ ಅಮೆಚೂರ್ ಬಾಕ್ಸಿಂಗ್ ಸಂಸ್ಥೆಯ ಮೂವರು ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ಚಿಪ್ಪಿನಕಟ್ಟೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೊಹಮ್ಮದ್ ಫೈಜ್, ವಿದ್ಯಾನಿಕೇತನ ಕಾಲೇಜಿನ ಮೊಹಮ್ಮದ್ ಸುಜೇನ್, ಜಿ.ಎಂ. ಕಾಲೇಜಿನ ವಿದ್ಯಾರ್ಥಿನಿ ಬಿ.ಬಿ. ಹಲಿಮಾ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಹಾಸನದ ಹೋಲಿಮೌಂಟ್ ಶಾಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಅಮೆಚೂರ್ ಬಾಕ್ಸಿಂಗ್ ಸಂಸ್ಥೆ ವತಿಯಿಂದ ಪದವಿ ಪೂರ್ವ ಕಾಲೇಜುಗಳ 19 ವರ್ಷ ವಯೋಮಿತಿ ಒಳಗಿನ ಜಿಲ್ಲಾ ಮಟ್ಟದ ಬಾಲಕ-ಬಾಲಕಿಯರ ಬಾಕ್ಸಿಂಗ್ ಪಂದ್ಯಾವಳಿ ಇತ್ತೀಚೆಗೆ ನಡೆಯಿತು. ನ.27 ಮತ್ತು 28ರಂದು ಶಿವಮೊಗ್ಗಾದಲ್ಲಿ ಪದವಿ ಪೂರ್ವ ಕಾಲೇಜುಗಳ ರಾಜ್ಯ ಮಟ್ಟದ ಬಾಕ್ಸಿಂಗ್ ಪಂದ್ಯಾವಳಿ ನಡೆಯಲಿದೆ. ಮಹಮ್ಮದ್ ಆರೀಫ್ ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದಾರೆ.

## ಮಗುಚಿ ಬಿದ್ದ ಮಿನಿ ಬಸ್: ವ್ಯಕ್ತಿ ಸಾವು, 20 ಮಂದಿಗೆ ಗಾಯ

» ಮೊದಲನೇ ಪುಟದಿಂದ

ಗ್ರಾಮಸ್ಥರು, ಸಂಬಂಧಿಕರು ಮಿನಿ ಬಸ್‌ನಲ್ಲಿ 30ಕ್ಕೂ ಹೆಚ್ಚು ಮಂದಿ ತೆರಳುತ್ತಿದ್ದರು. ಬಿಸಿಲೆಘಾಟ್ ರಸ್ತೆಯ ತಿರುವಿನಲ್ಲಿ ಎದುರು ಬಂದ ವಾಹನಕ್ಕೆ ದಾರಿ ಬಿಡಲು ಹೋದ ಸಂದರ್ಭದಲ್ಲಿ ಚಾಲಕನ ನಿಯಂತ್ರಣ ತಪ್ಪಿ ಮಿನಿ ಬಸ್ ಕೆಳಗಿನ ರಸ್ತೆಗೆ ಮಗುಚಿ ಬಿದ್ದಿದೆ.

ಬಸ್‌ನಲ್ಲಿದ್ದ ಎಲ್ಲರೂ ಗಾಯಗೊಂಡಿದ್ದಾರೆ. ಗಾಯಾಳುಗಳುಗಳನ್ನು ಸುಬ್ರಹ್ಮಣ್ಯ ಆಸ್ಪತ್ರೆಗೆ ರವಾನಿಸಲಾಯಿತು. ಗಂಭೀರವಾಗಿ ಗಾಯಗೊಂಡವರಿಗೆ ಸುಬ್ರಹ್ಮಣ್ಯ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರು ಆಸ್ಪತ್ರೆಗೆ ಸಾಗಿಸಲಾಯಿತು. ತೀವ್ರ ಪೆಟ್ಟು ಬಿದ್ದಿದ್ದ ಶಿವರಾಜ್ ಅವರು ಚಿಕಿತ್ಸೆಗೆ ಸ್ಪಂದಿಸದೆ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ. ಸಣ್ಣಪುಟ್ಟ ಗಾಯಗಳಾದವರು ಚಿಕಿತ್ಸೆ ಪಡೆದು ಮನೆಗೆ ಮರಳಿದ್ದಾರೆ. ಯಸಳೂರು ಠಾಣೆ ಪೊಲೀಸರು ಪ್ರಕರಣ ದಾಖಲಿಸಿ ಕೊಂಡಿದ್ದಾರೆ.

**ಅರಣ್ಯ ಇಲಾಖೆ ಅಡ್ಡಿಯಿಂದ ತಡೆಗೋಡೆ ಸ್ಥಗಿತ**

ರಸ್ತೆಯ ತಿರುವಿನಲ್ಲಿ ಕಳೆದ ಕೆಲ ತಿಂಗಳ ಹಿಂದೆ ಇದೇ ಜಾಗದಲ್ಲಿ ಬಸ್ ಮಗುಚಿ ಬಿದ್ದು ಅಪಘಾತ ಸಂಭವಿಸಿತ್ತು. ತಡೆಗೋಡೆ ನಿರ್ಮಾಣ ಮಾಡದ ಕಾರಣ ಅಪಘಾತಗಳು ಸಂಭವಿಸುತ್ತವೆ ಎಂದು ಸಾರ್ವಜನಿಕರು ಆರೋಪಿಸಿದ್ದರು. ಈ ಹಿನ್ನಲೆ ಲೋಕೋಪಯೋಗಿ ಇಲಾಖೆಯಿಂದ ತಡೆಗೋಡೆ ನಿರ್ಮಾಣ ಮಾಡಲು ಮುಂದಾಗಿದ್ದರು. ಅರಣ್ಯ ಇಲಾಖೆ ಆರ್‌ಎಫ್‌ಒ ಕಾಮಗಾರಿಗೆ ಅಡ್ಡಿಪಡಿಸಿದ್ದು, ಕಾಮಗಾರಿ ಸ್ಥಗಿತಗೊಂಡಿತ್ತು. ಅರಣ್ಯ ಇಲಾಖೆ ಅಧಿಕಾರಿಗಳ ಬೇಜಾಬ್ದಾರಿಯೇ ಅಪಘಾತಕ್ಕೆ ಕಾರಣವೆಂದು ಸ್ಥಳೀಯರು ಆರೋಪಿಸಿದ್ದಾರೆ. ತಡೆಗೋಡೆ ನಿರ್ಮಾಣಕ್ಕೆ ತೆಗೆದಿದ್ದ ಗುಂಡಿಯನ್ನು ಲೋಕೋಪಯೋಗಿ ಇಲಾಖೆ ಮುಚ್ಚದೆ ಇರುವುದು ಅಪಘಾತಕ್ಕೆ ಕಾರಣವೆಂದು ಕಿಡಿಕಾರಿದ್ದಾರೆ.

# ಯುವಜನರ ಪ್ರತಿಭೆ ಪ್ರಪಂಚದಲ್ಲಿ ಪ್ರಜ್ವಲಿಸಲಿ

## ಯುವಜನೋತ್ಸವದಲ್ಲಿ ಕ್ರೀಡಾ ಪ್ರಾಧಿಕಾರ ಉಪಾಧ್ಯಕ್ಷ ಅರುಣ ಮಾಚಯ್ಯ ಅಭಿಲಾಷೆ

• ಪ್ರಜೋದಯ ವರದಿ

**ಹಾಸನ:** ಭಾರತೀಯರು ಪ್ರಪಂಚದ ಎಲ್ಲಾ ರಂಗಗಳಲ್ಲೂ ತಮ್ಮ ಛಾಪು ಮೂಡಿಸಿದ್ದಾರೆ. ಯುವ ಜನತೆಯೂ ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಿ ಪ್ರಜ್ವಸಬೇಕೆಂದು ರಾಜ್ಯ ಕ್ರೀಡಾ ಪ್ರಾಧಿಕಾರ ಉಪಾಧ್ಯಕ್ಷ ಅರುಣ ಮಾಚಯ್ಯ ಅವರು ತಿಳಿಸಿದರು.

ಹಾಸನಾಂಬ ಕಲಾ ಕ್ಷೇತ್ರದಲ್ಲಿ ನಡೆದ ಜಿಲ್ಲಾ ಮಟ್ಟದ ಯುವಜನೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಬಹುದೊಡ್ಡ ಮಾನವ ಸಂಪನ್ಮೂಲ ಹೊಂದಿರುವ ನಮ್ಮ ದೇಶದಲ್ಲಿ ಶೇ.62 ರಷ್ಟು 40 ವರ್ಷದೊಳಗಿನ ಯುವ ಸಮುದಾಯವನ್ನು ಹೊಂದಿರುವುದು ಹೆಮ್ಮೆ ವಿಷಯ. ನಮ್ಮ ದೇಶ ಪ್ರಪಂಚದ ನಾನಾ ರಾಷ್ಟ್ರಗಳಿಗೆ ಮಾನವ ಸಂಪನ್ಮೂಲ ರಫ್ತು ಮಾಡುವ ಸ್ಥಿತಿಯಲ್ಲಿರುವುದು ಉತ್ತಮ ಬೆಳವಣಿಗೆ ಎಂದರು.

ನಮ್ಮ ನಾಡು, ನುಡಿ, ಸಂಸ್ಕೃತಿ, ಆಚಾರ-ವಿಚಾರ, ಜಾನಪದ, ಸಂಪ್ರದಾಯಗಳನ್ನು ಬಿಂಬಿಸುವ ಕಲೆಗಳನ್ನು ಜೀವಂತವಾಗಿ ಉಳಿಸಲು ಯುವ ಸಮೂಹವನ್ನು ಸದೃಢಗೊಳಿಸುವುದು ಅಗತ್ಯವಿದೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಚ್.ಎಲ್.ಮಲ್ಲೇಶಗೌಡ ಅವರು ಮಾತನಾಡಿ, ಯುವ ಜನತೆಯ ಮೂಲಕ ದೇಶವನ್ನು ಎತ್ತರದ ಸ್ಥಾನದಲ್ಲಿ ಕಲ್ಪಿಸಿಕೊಳ್ಳುತ್ತಿದ್ದೇವೆ. ಈ ನಿಟ್ಟಿನಲ್ಲಿ ಯುವ ಜನತೆ ಪ್ರಾಮಾಣಿಕ ಪ್ರಯತ್ನ ಮಾಡಿದರೆ ವಿಶ್ವ ಆಳಬಹುದು. ಯುವ ಜನತೆ ತಮ್ಮಲ್ಲಿರುವ ಪ್ರತಿಭೆಯನ್ನು ಸಕಾರಾತ್ಮಕವಾಗಿ ನಿರ್ದಿಷ್ಟ ಮಾರ್ಗದಲ್ಲಿ



ವಿನಿಯೋಗಿಸಿದರೆ ವಿಶ್ವ ಮಟ್ಟದಲ್ಲಿ ಬೆಳಗಬಹುದೆಂದು ಅಭಿಪ್ರಾಯಪಟ್ಟರು.

ಯುವ ಜನತೆ ಅಮೂಲ್ಯವಾದ ಸಮಯವನ್ನು ಅನಗತ್ಯವಾಗಿ ಟಿವಿ ವೀಕ್ಷಣೆ, ಸಾಮಾಜಿಕ ಜಾಲತಾಣಗಳಲ್ಲಿ ಕಳೆಯುತ್ತಾ ತಮ್ಮಲ್ಲಿರುವ ಪ್ರತಿಭೆಯನ್ನು ವ್ಯರ್ಥ ಮಾಡುತ್ತಿದ್ದಾರೆ. ಇದು ಭವಿಷ್ಯದ ಭಾರತದ ಬಗ್ಗೆ ಆತಂಕ ಕಾಡುತ್ತಿದೆ. ತಮ್ಮನ್ನು ಗಟ್ಟಿಗೊಳಿಸಿಕೊಂಡು ದೇಶ ಕಟ್ಟಲು ಮುಂದಾಗಬೇಕು. ತಮ್ಮ ಕುಟುಂಬ ಮತ್ತು ಗ್ರಾಮವನ್ನು ಪ್ರೀತಿಸುವುದರ ಮೂಲಕ ದೇಶ ಪ್ರೀತಿಯ ಕಡೆಗೆ ಸಾಗಲಿ ಎಂದರು.

ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ಕೃಷ್ಣೇಗೌಡ ಅವರು ಮಾತನಾಡಿ. ಯುವ ಜನತೆ ಜಾನಪದ ಕಲೆ, ಸಂಸ್ಕೃತಿಕ ಉಳಿಸುವ ನಿಟ್ಟಿನಲ್ಲಿ ಸಾಗಿ ಎಂದು ಶುಭ ಹಾರೈಸಿದರು.

ಜಿಲ್ಲಾ ನೌಕರರ ಸಂಘದ ಕಾರ್ಯದರ್ಶಿ ಲಕ್ಷ್ಮೀ ಕಾಂತ್ , ಹಿರಿಯ ಕಲಾವಿದರಾದ ಗ್ಯಾರಂಟಿ ರಾಮಣ್ಣ, ಶೇಖರಪ್ಪ, ವೀರಶೈವ ಮಹಾಸಭಾದ ತಾಲ್ಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಚಂದ್ರಶೇಖರ್ ಇದ್ದರು.

## ಜಿಲ್ಲಾಧಿಕಾರಿ ಬಹಿರಂಗ ಕ್ಷಮೆಯಾಚನೆಗೆ ವಕೀಲರ ಆಗ್ರಹ

» ಮೊದಲನೇ ಪುಟದಿಂದ

ವಕೀಲರು ಗಂಟೆಗಳ ಕಾಲ ಕಾದು ನಿಂತರೂ, ಜಿಲ್ಲಾಧಿಕಾರಿ ಅವರು ಸ್ಥಳಕ್ಕೆ ಬಾರದೆ, ಅಪರ ಜಿಲ್ಲಾಧಿಕಾರಿ ಮೂಲಕ ಮನವಿ ಸ್ವೀಕರಿಸಲು ನಿರ್ದೇಶನ ನೀಡಿದರು. ಇದು ಅವರ ನಿರ್ಲಕ್ಷ್ಯ ಧೋರಣೆಯ ಪ್ರತೀಕ. ಈಗಾಗಲೇ ಜಿಲ್ಲಾಧಿಕಾರಿ ಅವರ ವಿರುದ್ಧ ರಾಜ್ಯ ಬಾರ್ ಕೌನ್ಸಿಲ್‌ಗೂ ದೂರು ನೀಡಿದ್ದು, ರಾಜ್ಯಪಾಲರು, ಜಿಲ್ಲಾ ಉಸ್ತುವಾರಿ ಸಚಿವರು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಗೃಹ ಸಚಿವರ ಗಮನಕ್ಕೂ ತರಲಾಗಿದೆ. ಮುಂದಿನ ದಿನಗಳಲ್ಲಿ ಕಾನೂನು ಹೋರಾಟ ಸಹ ಮಾಡಲಾಗುವುದೆಂದು ತಿಳಿಸಿದರು.

ಕಚೇರಿಯಲ್ಲಿದ್ದರೂ, ಮನವಿ ಸ್ವೀಕರಿಸದೆ ಅಹಂಕಾರ ತೋರಿದ ಜಿಲ್ಲಾಧಿಕಾರಿ ಅವರು ಕ್ಷಮೆ ಕೇಳೋವವರೆಗೂ ಹೋರಾಟ ನಿಲ್ಲಲ್ಲ. ನಂತರದ ಹೋರಾಟದ ರೂಪು ರೇಷೆ ತಿಳಿಸಲಾಗುವುದೆಂದು ತಿಳಿಸಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಹೊಂಬೇಶ್ ಅವರು ಮಾತನಾಡಿ, ಹಿರಿಯ ವಕೀಲರ ಮನವಿಗೂ ಸ್ಪಂದಿಸದೇ ಮನುಷ್ಯತ್ವ ಇಲ್ಲದೇ ನಡೆದುಕೊಂಡರು. ಜಿಲ್ಲಾಧಿಕಾರಿ ಕೇಂದ್ರ ಸ್ಥಾನದಲ್ಲಿ ಇಲ್ಲದಾಗ ಮಾತ್ರ ಮನವಿ ಸ್ವೀಕರಿಸಲು ಹೆಚ್ಚುವರಿ ಜಿಲ್ಲಾಧಿಕಾರಿ ಬರಬೇಕು. ಆದರೆ, ಜಿಲ್ಲಾಧಿಕಾರಿ ಅವರು ನಿಯಮ ಉಲ್ಲಂಘನೆ ಮಾಡಿದ್ದಾರೆ. ಅವರ ಈ ವರ್ತನೆ ಖಂಡಿಸಿ ಜಿಲ್ಲಾದ್ಯಂತ ಪ್ರತಿಭಟನೆ ನಡೆಯುತ್ತಿದೆ. ಮುಂದೆ ರಾಜ್ಯಾದ್ಯಂತ ಮುಂದುವರಿಸಲಾಗುವುದು. ಹೈಕೋರ್ಟ್ ಮೊರೆ ಹೋಗಲೂ ನಿರ್ಧರಿಸಿದ್ದೇವೆ ಎಂದರು. ಜಿಲ್ಲಾ ವಕೀಲರ ಸಂಘದ ಖಜಾಂಚಿ ಜಿ.ಎನ್.ಸುಗುಣ ಉಪಾಧ್ಯಕ್ಷ ಎಂ.ಟಿ.ತಿಮ್ಮೇಗೌಡ, ಜಂಟಿ ಕಾರ್ಯದರ್ಶಿ ರಘು, ವಕೀಲರಾದ, ದೇವರಾಜೇಗೌಡ, ನವಿಲೆ ಅಣ್ಣಪ್ಪ, ಪೂರ್ಣಚಂದ್ರ, ತಮ್ಮಣ್ಣಗೌಡ, ಚನ್ನಂಗಿಹಳ್ಳಿ ಶ್ರೀಕಾಂತ್ ಇದ್ದರು.

## ಕಣ್ಣು ಅತಿಸೂಕ್ಷ್ಮ, ಅತ್ಯಮೂಲ್ಯವಾದ ಅಂಗ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ದೃಷ್ಟಿ ದೋಷ ಕಂಡುಬಂದ ತಕ್ಷಣವೇ ಪರೀಕ್ಷೆ ಮಾಡಿಸಿಕೊಂಡು ಕನ್ನಡಕ ಧರಿಸುವುದು ಸೂಕ್ತ ಎಂದು ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಅವರು ಹೇಳಿದರು.

ತಾಲ್ಲೂಕಿನ ಕಬ್ಬಳಿ ಮಠದಲ್ಲಿ ಶ್ರೀ ಬಸವೇಶ್ವರಸ್ವಾಮಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿ ಗಳಿಗೆ ಉಚಿತ ಕನ್ನಡಕ ವಿತರಿಸಿ ಮಾತನಾಡಿದ ಅವರು, ಅದರಿಂದ ಮುಂದಿನ ದಿನಗಳಲ್ಲಿ ಸಂಭವಿಸುವ ದೃಷ್ಟಿ ಸಮಸ್ಯೆಗಳನ್ನು ಸರಿಪಡಿಸಿಕೊಳ್ಳಲು ಸಾಧ್ಯವಾಗಲಿದೆ ಎಂದರು.

ಮನುಷ್ಯನಲ್ಲಿ ಕಣ್ಣು ಅತಿಸೂಕ್ಷ್ಮ ಹಾಗೂ ಅತ್ಯಾಮೂಲ್ಯವಾದ ಅಂಗ. ಅವುಗಳನ್ನು ರಕ್ಷಿಸಿ ಕೊಳ್ಳುವುದು ಅಷ್ಟೇ ಮುಖ್ಯವಾಗಿರುತ್ತದೆ. ನಿರ್ಲಕ್ಷ್ಯಿ ಸಿದ್ದಲ್ಲಿ ಅಪಾಯ ಕಟ್ಟಿಟ್ಟ ಬುತ್ತಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಅತಿಹೆಚ್ಚು ಟಿವಿ ವೀಕ್ಷಣೆ ಹಾಗೂ ಮೊಬೈಲ್ ಬಳಕೆ ಒಳ್ಳೆಯದಲ್ಲ. ಅದರಲ್ಲಿಯೂ ಚಿಕ್ಕ ವಯಸ್ಸಿನ ಮಕ್ಕಳಿಗೆ ಮೊಬೈಲ್ ನೀಡುವುದು ಅಪಾಯಕಾರಿ ಸಂಗತಿ. ಇತ್ತೀಚಿನ ದಿನಗಳಲ್ಲಿ ಮಗುವಿಗೆ ಊಟ, ಉಪಚಾರ ಹಾಗೂ ಆಟವಾಡಿಸಲು ಪಾಲಕರು ಮೊಬೈಲ್ ಬಳಕೆ ಮಾಡುತ್ತಿ ದ್ದಾರೆ. ಇದು ಅತ್ಯಂತ ಆತಂಕಕಾರಿ ಬೆಳವಣಿ ಗೆಯಾಗಿದ್ದು, ಸುಂದರ ಪ್ರಪಂಚ ನೋಡುವ ಮೊದಲೇ ಮಕ್ಕಳ ಬದು ಕಿನಲ್ಲಿ ಕತ್ತಲೆ ಆವರಿಸಲಿದೆ ಎಂದು ಎಚ್ಚರಿಸಿದರು.

ಕಳೆದ ತಿಂಗಳು ಶಾಲೆಯಲ್ಲಿ ನಡೆದ ಶಿಬಿರದಲ್ಲಿ ನೇತ್ರ ಪರೀಕ್ಷೆಗೆ ಒಳಪಟ್ಟಿದ್ದು ದೃಷ್ಟಿ ದೋಷ ಹೊಂದಿದ್ದ 40 ವಿದ್ಯಾರ್ಥಿಗಳಿಗೆ ಕನ್ನಡಕಗಳನ್ನು ಶ್ರೀ ಶಂಭುನಾಥ ಸ್ವಾಮೀಜಿ ವಿತರಿಸಿದರು. ಶ್ರೀಕ್ಷೇತ್ರ ಕಬ್ಬಳಿ ಮಠದ ಶ್ರೀ ಶಿವಪುತ್ರನಾಥ ಸ್ವಾಮೀಜಿ, ಆದಿಚುಂಚನಗಿರಿಆಸ್ಪತ್ರೆಪಿಆರ್‌ಒ ಧರ್ಮೇಂದ್ರ, ಶಾಲಾ ಮುಖ್ಯಶಿಕ್ಷಕ ಟಿ.ತಿಮ್ಮೇಗೌಡ, ಶಿಕ್ಷಕ ವೃಂದ ಇದ್ದರು.

## ಅಪಾಯಕ್ಕೆ ಆಹ್ವಾನ ನೀಡುತ್ತಿರುವ ಮರಗಳ ತೆರವುಗೊಳಿಸಿ

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕಿನಾದ್ಯಂತ ಸುರಿಯುತ್ತಿರುವ ಮಳೆ ಹಾಗು ಗಾಳಿಗೆ ರಸ್ತೆ ಬದಿಯ ಮರ, ಕೊಂಬೆಗಳು ಧರೆಗುರುಳುತ್ತಿದ್ದು ಸಾರ್ವಜನಿಕರನ್ನು ಆತಂಕಕ್ಕೀಡು ಮಾಡಿದೆ.

ತಾಲ್ಲೂಕಿನಲ್ಲಿ ಪ್ರತಿ ಬಾರಿ ರಭಸವಾದ ಮಳೆ, ಗಾಳಿಗೆ ಮರ, ವಿದ್ಯುತ್ ಕಂಬಗಳು ನೆಲಕ್ಕು ರುಳಿ ಅನಾಹುತ ಸಂಭವಿಸುತ್ತಿದೆ. ವಾಹನಗಳ ಮೇಲೆ ಬಿದ್ದು ಅಪಾರ ನಷ್ಟ ಉಂಟು ಮಾಡು ತ್ತಿವೆ. ವಾಹನಗಳು ಜಖಂಗೊಂಡಿರುವುದು ಮಾತ್ರವಲ್ಲದೆ ಅನೇಕರು ಗಾಯಗೊಂಡಿದ್ದಾರೆ. ಅಪಾಯಕ್ಕೆ ಆಹ್ವಾನ ನೀಡುವ ಮರಗಳ ತೆರವುಗೊಳಿಸಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

ತಾಲ್ಲೂಕಿನ ದೇವರಾಜಪುರ ಗ್ರಾಮದ ರಾಜ್ಯ ರಸ್ತೆಯ ಸಮೀಪದ ಲಕ್ಕಮ್ಮ ಅವರ ಮನೆಯ ಮೇಲೆ ಎರಡು ಮರ ಬಿದ್ದು ಮನೆಯು ಜಖಂಗೊಂಡು ಇಬ್ಬರು ಕೂದಲೆಳೆ ಅಂತರದಲ್ಲಿ ಪಾರಾಗಿದ್ದಾರೆ. ಮುಂಗಾರಿನ ಪ್ರಾರಂಭದಲ್ಲಿ ಲಕ್ಷ್ಮೀಪುರ ಭಾಗದಲ್ಲಿ ಬೃಹತ್ ಮರ ಬಿದ್ದು ಸಂಚಾರ ಅಸ್ತವ್ಯಸ್ತವಾಗಿತ್ತು. ಕಾರ್ಜುವಳ್ಳಿ ರಸ್ತೆಯ ಪಕ್ಕದಲ್ಲಿದ್ದ ಮರಗಳು ನೆಲಕ್ಕುರುಳಿದ್ದವು. ರಸ್ತೆ ಅಂಚಿನ ಅಕೇಶಿಯಾ ಮರಗಳು ಬುಡಮೇಲಾಗುತ್ತಿವೆ. ಹಲವೆಡೆ ವಿದ್ಯುತ್ ತಂತಿ, ಕಂಬ ಧರೆಗುರುಳಿ ಅನಾಹುತ ಸೃಷ್ಟಿಸುತ್ತಿವೆ. ಕೂಡಲೇ ಎಚ್ಚೆತ್ತು ರಸ್ತೆಬದಿ ಒಣಗಿರುವ, ರಸ್ತೆಗೆ




ಚಾಚಿಕೊಂಡಿರುವ, ವಿದ್ಯುತ್ ತಂತಿಗೆ ಚಾಚಿಕೊಂಡಿರುವ ಮರ ಹಾಗು ಕೊಂಬೆಗಳ ತೆರವಿಗೆ ಅರಣ್ಯ ಇಲಾಖೆ ಮುಂದಾಗಬೇಕೆಂಬ ಒತ್ತಾಯ ಕೇಳಿಬಂದಿದೆ.

ಆಲೂರು-ಬಿಕ್ಕೋಡು ಮಾರ್ಗದ ರಸ್ತೆಯಲ್ಲಿ ಮರದ ಕೊಂಬೆಗಳು ರಸ್ತೆಗೆ ಚಾಚಿಕೊಂಡಿವೆ. ವಿದ್ಯುತ್ ತಂತಿಗೂ ತಗುಲಿವೆ. ಅನಾಹುತ ಸಂಭವಿಸುವ ಮುನ್ನ ಕ್ರಮ ಕೈಗೊಳ್ಳಬೇಕೆಂದು ದೇವರಾಜಪುರ ಗ್ರಾಮದ ದೇವರಾಜು ಆಗ್ರಹಿಸಿದರು.

# ಪತ್ರಕರ್ತರ ರಾಜ್ಯ ಸಂಘಕ್ಕೆ ಶಿವಾನಂದ ತಗಡೂರು ಪುನಾರಾಯ್ಕೆ

## ನ.9 ರಂದು ಜಿಲ್ಲಾ ಸಂಘಕ್ಕೆ ಚುನಾವಣೆ | 25 ಸ್ಥಾನಕ್ಕೆ 41 ಮಂದಿ ಸ್ಪರ್ಧೆ

• ಪ್ರಜೋದಯ ವರದಿ



**ಹಾಸನ:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ(ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷರಾಗಿ ಶಿವಾನಂದ ತಗಡೂರು ಸೇರಿ ಎಲ್ಲಾ ಪದಾಧಿಕಾರಿಗಳು ಅವಿರೋಧ ಆಯ್ಕೆಯಾಗಿದ್ದಾರೆ.

2025-28ನೇ ಸಾಲಿಗೆ ನಡೆಯುತ್ತಿರುವ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಒಂದೇ ನಾಮಪತ್ರ ಸಲ್ಲಿಕೆಯಾದ್ದರಿಂದ ಅವಿರೋಧ ಆಯ್ಕೆ ನಡೆದಿದೆ. ಉಳಿದಂತೆ ಉಪಾಧ್ಯಕ್ಷರಾಗಿ ಹೆಚ್.ಬಿ.ಮದನಗೌಡ, ಮತ್ತಿಕೆರೆ ಜಯರಾಂ, ಅಜ್ಜಮಾಡು ರಮೇಶ್ ಕುಟ್ಟಪ್ಪ, ಪ್ರಧಾನ ಕಾರ್ಯದರ್ಶಿಯಾಗಿ ಜೆ.ಸಿ. ಲೋಕೇಶ, ಕಾರ್ಯದರ್ಶಿಯಾಗಿ ಪುಂಡಲೀಕ ಬಿ. ಬಾಳೋಜಿ, ಸೋಮಶೇಖರ ಕೆರಗೋಡು ಮತ್ತು ನಿಂಗಪ್ಪ ಚಾವಡಿ ಅವರು ಅವಿರೋಧ ಆಯ್ಕೆಯಾಗಿದ್ದಾರೆ. ರಾಜ್ಯ ಖಜಾಂಚಿಯಾಗಿ ಎಂ.ವಾಸುದೇವ ಹೊಳ್ಳ ಅವರು ಚುನಾಯಿತರಾಗಿದ್ದಾರೆಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಎನ್.ರವಿಕುಮಾರ್ ಅವರು ತಿಳಿಸಿದ್ದಾರೆ.

ಚನ್ನರಾಯಪಟ್ಟಣ ತಾಲ್ಲೂಕು ತಗಡೂರು ಗ್ರಾಮದ ರೈತ ಕುಟುಂಬದ ಕಮ ಲಮ್ಮ ಮತ್ತು ವೀರೇಗೌಡ ದಂಪತಿ ಪುತ್ರನಾಗಿ ಜನಿಸಿದ ಟಿ.ವಿ.ಶಿವಾನಂದ (ಆನಂದ) ಅವರು ತೊಂಬತ್ತರ ದಶಕದಲ್ಲಿ ಪತ್ರಿಕೋದ್ಯಮ ಪ್ರವೇಶಿಸಿ ದವರು. ಬಾಗೂರು-ನವಿಲೆ ಸುರಂಗ ಸಂತ್ರಸ್ತರ ಪರವಾಗಿ ಹೋರಾಟ ಸಂಘಟಿಸಿದ್ದ ಅವರು, ಜಿಲ್ಲಾ ನೀರಾವರಿ ಹೋರಾಟ ಸಮಿತಿಗಳ ಒಕ್ಕೂಟ, ರೈತ ಹಿತ ರಕ್ಷಣಾ ಸಮಿತಿ, ಜಿಲ್ಲಾ ಸಾಕ್ಷರತಾ ಆಂದೋಲನ ಸಮಿತಿ ಸಂಚಾಲಕರಾಗಿ ದುಡಿದವರು. ಹಲವು ಜನಪರ ಚಳವಳಿಯಲ್ಲಿ ಮುಂದಾಳಾಗಿ ಗುರು ತಿಸಿಕೊಳ್ಳುತ್ತಲೇ ಪತ್ರಕರ್ತರಾಗಿ ಮಾಗಿದವರು.

2004ರಲ್ಲಿ ಹಾಸನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘ ಅಧ್ಯಕ್ಷರಾಗಿದ್ದಾಗ ಸುಸಜ್ಜಿತ ಪತ್ರಕರ್ತರ ಭವನ ನಿರ್ಮಾಣ ಮಾಡಿದ್ದು, ಅವರ ಕ್ರಿಯಾಶೀಲತೆಗೆ ಸಾಕ್ಷಿ. 2018ರಲ್ಲಿ ಉಪಾಧ್ಯಕ್ಷರಾಗಿ ಆಯ್ಕೆಯಾಗುವ ಮೂಲಕ ಕೆಯುಡಬ್ಲ್ಯೂಜೆಗೆ ಹೆಜ್ಜೆ ಇಟ್ಟ ತಗಡೂರು, ಅಧ್ಯಕ್ಷರೊಬ್ಬರ ರಾಜೀನಾಮೆ ತರುವಾಯ ಆ ಸಂಘಟನೆಯ ಚುಕ್ಕಾಣಿ ಹಿಡಿದವರು.

ಕೋವಿಡ್ ಸಂದರ್ಭದಲ್ಲಿ ಮೃತಪಟ್ಟ ಪತ್ರಕರ್ತರ ಕುಟುಂಬಗಳಿಗೆ ತಲಾ 5 ಲಕ್ಷ ರೂ. ನೆರವು ಕೊಡಿಸಿದ ಅವರ ಹೋರಾಟದ ಪರಿಯನ್ನು ಯಾರೂ ಮರೆಯುವಂತಿಲ್ಲ. ಬಹುರೂಪಿ ಪ್ರಕಾಶನ ಪ್ರಕಟಿಸಿರುವ ಕೋವಿಡ್ ಕಥೆಗಳು ಪುಸ್ತಕದಲ್ಲಿ ಪ್ರತಿಘಟನೆಗಳನ್ನು ತಗಡೂರು ದಾಖಲಿಸಿದ್ದಾರೆ.

75ನೇ ವರ್ಷದ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಹಿರಿಯ ಪತ್ರಕರ್ತರ ಮನೆಯಂಗಳಕ್ಕೆ ಕೆಯುಡಬ್ಲ್ಯೂಜೆ ಎನ್ನುವ ಹೊಸ ಕಲ್ಪನೆಯೊಂದಿಗೆ ಹಿರಿಯ ಪತ್ರಕರ್ತರನ್ನು ಅವರ ಮನೆ ಅಂಗಳದಲ್ಲಿಯೇ ಗೌರವಿಸಿ, ಅವರ ಅನುಭವಗಳನ್ನು ದಾಖಲೀಕರಣ ಮಾಡಿದ್ದು ವಿಶೇಷ. ಅಷ್ಟೇ ಅಲ್ಲ, ಈ ಬಗ್ಗೆ ಅಮೃತ ಬೀಜ ಎನ್ನುವ ಪುಸ್ತಕವನ್ನು ಹೊರ ತಂದಿದ್ದಾರೆ.

ರಾಜ್ಯ ಪತ್ರಕರ್ತರ ಸಮ್ಮೇಳನಗಳಿಗೆ ಹೊಸ ರೂಪ ನೀಡಿದ್ದಲ್ಲದೆ, ಪತ್ರಕರ್ತರ ಕ್ಷೇಮ ನಿಧಿಯನ್ನು ಒಂದು ಕೋಟಿ ರೂ.ಗೆ ಹೆಚ್ಚಿಸಿದ್ದು ಸಾಧನೆ. ಹತ್ತು ಹಲವು ಕಾರ್ಯಕ್ರಮದ ಮೂಲಕ ಕೆಯುಡಬ್ಲ್ಯೂಜೆಗೆ ಹೊಸ ಆಯಾಮ ನೀಡಿದ ತಗಡೂರು ಅವರು ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವುದು ಅವರ ಸಾಧನೆಗೆ ಹಿಡಿದ ಕನ್ನಡಿ ಮತ್ತು ಅವರ ಸೇವೆಗೆ ಸಂದ ಗೌರವ.

### ಜಿಲ್ಲಾ ಸಂಘಕ್ಕೆ ಚುನಾವಣೆ ನಿಗದಿ

**ಹಾಸನ:** ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆಗೆ ನ.9 ರಂದು ಮತದಾನ ನಡೆಯಲಿದೆ. ಜಿಲ್ಲಾಧಿಕಾರಿ ಕಚೇರಿ ಹಿಂಭಾಗದಲ್ಲಿರುವ ಪತ್ರಕರ್ತರ ಸಂಘದ ಕಚೇರಿಯಲ್ಲಿ ಗುರುವಾರ ನಾಮಪತ್ರ ವಾಪಾಸ್ ಪಡೆಯುವ ಪ್ರಕ್ರಿಯೆ ನಡೆಯಿತು.

ಅಧ್ಯಕ್ಷ ಸ್ಥಾನಕ್ಕೆ ಜೆ.ಆರ್.ಕೆಂಚೇಗೌಡ ಮತ್ತು ಕೆ.ಹೆಚ್.ವೇಣುಕುಮಾರ್ ಕಣದಲ್ಲಿದ್ದಾರೆ. ಉಪಾಧ್ಯಕ್ಷ ಸ್ಥಾನಕ್ಕೆ ಹೆಚ್.ಟಿ.ಮೋಹನ್ ಕುಮಾರ್, ನಾಗರಾಜ್ ಹೆತ್ತೂರು, ಎನ್. ನಂಜುಂಡೇಗೌಡ ಮತ್ತು ಜಿ.ಪ್ರಕಾಶ್ ಕಣದಲ್ಲಿದ್ದು, ಅವರಲ್ಲಿ ಮೂವರು ಆಯ್ಕೆ ಆಗಬೇಕಿದೆ.

ಪ್ರಧಾನ ಕಾರ್ಯದರ್ಶಿ 1 ಸ್ಥಾನಕ್ಕೆ ಜೋಸೆಫ್ ಡಿಸೋಜಾ, ಬಿ.ಸಿ.ಶಶಿಧರ ಮತ್ತು ಕೆ.ಜಿ. ಸುರೇಶ್ ಸ್ಪರ್ಧೆ ಮಾಡಿದ್ದಾರೆ. ಮೂವರು ಕಾರ್ಯದರ್ಶಿ ಸ್ಥಾನಗಳಿಗೆ ಬಿ.ಆರ್.ಬೊಮ್ಮೇಗೌಡ, ಕೆ.ಎಂ.ಹರೀಶ್, ಡಿ.ಐ.ಖುಶ್ವಂತ್, ಸಿ.ಎನ್. ನಾಗರಾಜ್, ಸಿ.ಬಿ.ಸಂತೋಷ್ ಮತ್ತು ಬಿ.ಎಸ್.ವೆಂಕಟೇಶ್ ಕಣದಲ್ಲಿದ್ದಾರೆ.

ಖಜಾಂಚಿ ಸ್ಥಾನಕ್ಕೆ ಪಿ.ಎ.ಶ್ರೀನಿವಾಸ ಮತ್ತು ತ್ಯಾಗರಾಜ್(ಪ್ರಕಾಶ್), ರಾಜ್ಯ ಕಾರ್ಯಕಾರಿ ಸಮಿತಿಗೆ ಕೆ.ಆರ್.ಮಂಜುನಾಥ ಮತ್ತು ಕೆಪಿಎಸ್ ಪ್ರಮೋದ್ ಸ್ಪರ್ಧೆ ಮಾಡಿದ್ದಾರೆ. 15 ಸ್ಥಾನಗಳ ಜಿಲ್ಲಾ ಕಾರ್ಯಕಾರಿ ಸಮಿತಿಗೆ 22 ಮಂದಿ ಕಣದಲ್ಲಿದ್ದಾರೆ. ಅನಂತೇಗೌಡ, ಕೆ.ಪಿ.ಭರತ್, ಜಿ.ಡಿ.ಧರ್ಮೇಶ್, ಎಚ್.ಎನ್.ಜ್ಞಾನೇಶ್ವರ, ಗೋಪಾಲ್, ಸಿ.ಆರ್.ಜಗದೀಶ್, ಜಿ.ಎಚ್. ಕಿಶೋರ್, ಐ.ಕೆ.ಕೃಷ್ಣಮೂರ್ತಿ, ಮಲ್ಲೇಶ್, ಎಚ್.ಎ.ನಾಗರಾಜ್, ಸಿ.ಆರ್. ನವೀನ್, ಪ್ರಸನ್ನ ಕುಮಾರ್ (ಚಲಂ ಹಾಡ್ಲಹಳ್ಳಿ), ಎಚ್.ಜಿ.ಪ್ರತಾಪ್, ಎಚ್. ವಿ.ರಾಘವೇಂದ್ರ, ಜಿ.ಶರಣ್, ಹೆಚ್.ಆರ್.ಶರತ್, ಹೆಚ್.ವಿ.ಸುರೇಶ್ ಕುಮಾರ್,ಎಂ.ಎಸ್.ಸ್ವಾಗತ್,ಎಂ.ಜಿ.ಸ್ವರೂಪ್, ತೌಫಿಕ್ ಅಹಮದ್, ಪಿ.ಬಿ. ವಿರೂಪಾಕ್ಷ ಮತ್ತು ಎನ್.ಆರ್. ವಿಶ್ವನಾಥ್ ಚುನಾವಣೆ ಎದುರಿಸಲಿದ್ದಾರೆ.

## ನಾಳೆ 2500 ಅಡಿ ಉದ್ದದ ಕನ್ನಡ ಧ್ವಜ ಮೆರವಣಿಗೆ




• ಪ್ರಜೋದಯ ವರದಿ

**ಹಾಸನ:** ನಮ್ಮ ಹಾಸನ ಟಿವಿ, ಜಿಲ್ಲಾಡಳಿತದಿಂದ ನ.1ರ ಶನಿವಾರ ಕನ್ನಡ ರಾಜ್ಯೋತ್ಸವದಂದು 2,500 ಅಡಿ ಉದ್ದದ ಕನ್ನಡ ಧ್ವಜ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ನಮ್ಮ ಹಾಸನ ಟಿವಿ ಸಂಪಾದಕ ತೌಫಿಕ್ ಅಹ್ಮದ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಅತೀ ಉದ್ದದ ಕನ್ನಡ ಧ್ವಜ ಮೆರವಣಿಗೆಗೆ ಈ ಬಾರಿ ಹಾಸನದ ಕಾರ್ಯಕ್ರಮ ಸಾಕ್ಷಿಯಾಗಲಿದೆ. ಆಂಧ್ರಪ್ರದೇಶದ ಲಕ್ಷ್ಮಿ ನಾರಾಯಣ ಗುಪ್ತ ಅವರು ಧ್ವಜ ರಚಿಸಿದ್ದಾರೆ. ಅಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾಧಿಕಾರಿ ಕಚೇರಿಯಿಂದ ಜಿಲ್ಲಾ ಕ್ರೀಡಾಂಗಣದವರೆಗೆ ಮೆರವಣಿಗೆ ನಡೆಯಲಿದ್ದು, 3,500 ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆಂದರು.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಶಾಸಕ ಹೆಚ್.ಪಿ. ಸ್ವರೂಪ್, ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹ ಣಾಧಿಕಾರಿ ಬಿ.ಆರ್.ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಮೊಹಮ್ಮದ್ ಸುಜೀತಾ ಮತ್ತಿತರರು ಪಾಲ್ಗೊಳ್ಳಲಿದ್ದಾರೆಂದರು.

ನಮ್ಮ ನಡೆ ಸೌಹಾರ್ದ, ಕನ್ನಡದ ಕಡೆಗೆ ಎಂಬ ಧ್ಯೇಯ ವಾಕ್ಯದೊಂದಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕನ್ನಡಾಭಿಮಾನಿಗಳು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಸಂಗೀತ ನಿರ್ದೇಶಕ ಶಕೀಲ್ ಅಹ್ಮದ್, ಸೈಯದ್ ತಾಜ್, ಗುರುಪ್ರಸಾದ್ ಇದ್ದರು.

# ನ.1ರಿಂದ ಬಸವೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ

## ನ.3 ರಂದು ಉಚಿತ ಸಾಮೂಹಿಕ ವಿವಾಹ | ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಶ್ರೀಕ್ಷೇತ್ರದ ಮಠದಲ್ಲಿ ನ.1 ರಿಂದ ನ.5 ರವರೆಗೆ 5 ದಿನಗಳ ಕಾಲ ಶ್ರೀ ಬಸವೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವವನ್ನು ಆಯೋಜಿಸಲಾಗಿದೆ ಎಂದು ಆದಿಚುಂಚನ ಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಪುರಾಣ ಪ್ರಸಿದ್ಧ ಶ್ರೀ ಕ್ಷೇತ್ರ ಕಬ್ಬಳಿ ಮಠದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.1ರ ಶನಿವಾರ ಬೆಳಿಗ್ಗೆ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿಯವರ ಸನ್ನಿಧಿಯ ಆವರಣದಲ್ಲಿ ಧರ್ಮ ಧ್ವಜಾರೋಹಣ ನೆರವೇರಿಸುವ ಮೂಲಕ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಶ್ರೀ ಬಸವೇಶ್ವರ ಸ್ವಾಮೀಜಿ ವಿಶೇಷ ಪೂಜೆ ಸಲ್ಲಿಸಲಿದ್ದು ಗೋಪೂಜೆ ನೆರವೇರಲಿದೆ ಎಂದರು.

ಅಂದು ಸಂಜೆ ಶ್ರೀ ಬಸವೇಶ್ವರಸ್ವಾಮಿ ಆಂಗ್ಲ ಮಾಧ್ಯಮ ಶಾಲೆ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಜರುಗಲಿದೆ.




ನ.2ರ ಭಾನುವಾರ ಬೆಳಿಗ್ಗೆ ಶ್ರೀ ಬಸವೇಶ್ವರ ಸ್ವಾಮಿಗೆ ವಿಶೇಷ ಅಲಂಕಾರ ಹಾಗೂ ಪೂಜಾ ವಿಧಿ ವಿಧಾನಗಳು ಜರುಗಲಿದ್ದು, ಸಂಜೆ 6.30 ರಿಂದ ಮಿಮಿಕ್ರಿ ಗೋಪಿ ಅವರಿಂದ ಹಾಸ್ಯ ಸಂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ನ.3ರ ಸೋಮವಾರ ಬೆಳಿಗ್ಗೆ ಚುಂಚಶ್ರೀಗಳ ಸಾನಿಧ್ಯದಲ್ಲಿ ಬೆಂಗಳೂರಿನ ಉದ್ಯಮಿ ಶ್ರೀಮತಿ ಪ್ರದೀಪಾ ಶ್ರೀ ವೆಂಕಟೇಶ ಪ್ರಸಾದ್ ಕುಟುಂಬದವರಿಂದ ಉಚಿತ ಸಾಮೂಹಿಕ ವಿವಾಹ ಕಾರ್ಯ ಕ್ರಮ ನೆರವೇರಲಿದೆ. ಸಂಜೆ ಸುಮಾರಿಗೆ ಶ್ರೀ ಬಸವೇಶ್ವರಸ್ವಾಮಿ ಸರ್ಪೋತ್ಸವ, ಶ್ರೀ ಚೌಡೇಶ್ವರಿದೇವಿ ಉತ್ಸವ, ಜಗದ್ಗುರು ಶ್ರೀ ಬಾಲಗಂಗಾಧರನಾಥ ಮಹಾಸ್ವಾಮೀಜಿ ಯವರ ಪುತ್ಥಳಿಕೆ, ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಯವರ ಮುತ್ತಿನ ಪಲ್ಲಕ್ಕಿ ಉತ್ಸವ, ನಂತರ ದೇಗುಲದ ಆವರ ಣದಲ್ಲಿರುವ ಪುಷ್ಕರಣಿಯಲ್ಲಿ ಚುಂಚಶ್ರೀಗಳ ತೆಪ್ಪೋತ್ಸವ ವೈಭವದಿಂದ ಸಾಗ ಲಿದೆ. ನಂತರ ಧಾರ್ಮಿಕ ಸಭೆ, ಚುಂಚಶ್ರೀಗಳಿಗೆ ಪುಷ್ಪವೃಷ್ಟಿ ನಡೆಯಲಿದೆ ಎಂದರು.

ನ.4ರ ಮಂಗಳವಾರ ಬೆಳಿಗ್ಗೆ ಭಕ್ತರಿಂದ ಬಸವೋತ್ಸವ ಹಾಗೂ ಸಂಜೆ ಸುಮಾರಿನಲ್ಲಿ ಖ್ಯಾತ ವಾಗ್ಮಿ ಶಿವಾರ ಉಮೇಶ್ ಅವರಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ನ.5ರ ಬುಧವಾರ ಬೆಳಿಗ್ಗೆ ಎಂದಿನಂತೆ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿದ್ದು, ಸಂಜೆ 5 ಗಂಟೆಗೆ ಸಲ್ಲುವ ಗೋಧೂಳಿ ಲಗ್ನದಲ್ಲಿ ಧರ್ಮಧ್ವಜ ಅವರೋಹಣ, ಶ್ರೀ ಬಸವೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ಊರಿನ ರಾಜಬೀದಿಯಲ್ಲಿರುವ ಮೆರವಿಗ್ರಹ ದೇಗುಲಕ್ಕೆ ಉತ್ಸವ ಮೂರ್ತಿಯನ್ನು ಗುಡಿದುಂಬಿಸುವ ಮೂಲಕ ಜಾತ್ರಾ ಮಹೋತ್ಸವಕ್ಕೆ ತೆರೆ ಬೀಳಲಿದೆ ಎಂದರು.

ಕಳೆದ 2 ವರ್ಷದ ಹಿಂದೆ ಜಾತ್ರಾ ಮಹೋತ್ಸವದ ಸಮಯದಲ್ಲಿ ಕಬ್ಬಳಿ ಗ್ರಾಮಸ್ಥರು ಹಾಗೂ ಸಮಸ್ತ ಭಕ್ತರ ಸಹಕಾರದೊಂದಿಗೆ ಶ್ರೀ ಬಸವೇಶ್ವರ ಸ್ವಾಮಿಯ ದೇಗುಲದ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದ್ದು, ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ ಎಂದರು.

ಸುತ್ತಮುತ್ತಲ ಗ್ರಾಮಗಳಿಂದ ರೈತರು ತಮ್ಮ ಜಾನುವಾರುಗಳನ್ನು ಶ್ರೀ ಕ್ಷೇತ್ರದ ಸನ್ನಿಧಿಗೆ ಕರೆತಂದು ದೇಗುಲದ ಸುತ್ತ ಪ್ರದಕ್ಷಣೆ ಮಾಡಿಸಿ ತೀರ್ಥ ಪ್ರೋಕ್ಷಣೆ ಮಾಡಿಸುವುದು ವಿಶೇಷ. ಶ್ರೀ ಕ್ಷೇತ್ರದಲ್ಲಿ ನಡೆಯಲಿರುವ ಜಾತ್ರಾ ಮಹೋತ್ಸವಕ್ಕೆ ಪ್ರತಿ ವರ್ಷಕ್ಕಿಂತಲೂ ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಲಿದ್ದು ನೀರು, ನೆರಳು ಹಾಗೂ ಅನ್ನದಾಸೋಹದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಎಂದಿನಂ ತೆ ಮಾಡಲಾಗುವುದೆಂದು ತಿಳಿಸಿದರು.

ಶ್ರೀಕ್ಷೇತ್ರ ಕಬ್ಬಳಿ ಮಠದ ಶ್ರೀ ಶಿವಪುತ್ರನಾಥ ಸ್ವಾಮೀಜಿ ಹಾಗೂ ಆದಿಚುಂಚನಗಿರಿ ಆರೋಗ್ಯ ಸಂಸ್ಥೆಯ ಪಿಆರ್‌ಒ ಧರ್ಮೇಂದ್ರ ಇದ್ದರು.

## ಪಾಲಿಕೆ ಸದಸ್ಯನ ಮನೆಯಲ್ಲಿ ಪೌರ ಕಾರ್ಮಿಕರಿಗೆ ಔತಣ

• ಪ್ರಜೋದಯ ವರದಿ

**ಹಾಸನ:** ಮಹಾನಗರ ಪಾಲಿಕೆ 1ನೇ ವಾರ್ಡ್ ಸದಸ್ಯ ಹೆಚ್.ಎಂ.ರಕ್ಷಿತ್ ಕುಮಾರ್ ಅವರು ತಮ್ಮ ವಾರ್ಡ್ ವ್ಯಾಪ್ತಿಯ ಪೌರ ಕಾರ್ಮಿಕರು ಸೇರಿ 20 ಸಿಬ್ಬಂದಿಗೆ ಮನೆಯಲ್ಲಿ ಔತಣಕೂಟ ಏರ್ಪಡಿಸಿ ಸಹಬಾಳ್ವೆಯ ಸಂದೇಶ ಸಾರಿದ್ದಾರೆ.

ಕಳೆದ ಎಂಟು ವರ್ಷಗಳಿಂದ ಇದೇ ಸಂಪ್ರದಾಯ ಮುಂದುವರಿಸಿಕೊಂಡು ಬಂದಿರುವ ಅವರು ಬುಧವಾರ ತಮ್ಮ ವಾರ್ಡ್‌ನಲ್ಲಿ ಸ್ವಚ್ಛತಾ ಕೆಲಸ ಮಾಡುವ ಪೌರ ಕಾರ್ಮಿಕರು, ನೀರು ಗಂಟಿ, ಕಸ ಸಂಗ್ರಹ ಆಟೋ ಚಾಲಕ ಮತ್ತು ಕ್ಲೀನರ್ ಅವರನ್ನು ಮನೆಗೆ ಕರೆಸಿ ಉಪ ಚರಿಸಿದ್ದಾರೆ. ಜೊತೆಗೆ ಮಹಿಳಾ ಕಾರ್ಮಿ ಕರಿಗೆ ಬಾಗಿನ ವಿತರಿಸಿದರೆ ಪುರುಷರಿಗೆ ಒಂದು ಜೊತೆ ಬಟ್ಟೆ ನೀಡಿ ಸಹೋದರತ್ವ ಮೆರೆದಿದ್ದಾರೆ.

ಪ್ರತಿವರ್ಷ ಹಾಸನಾಂಬ ಜಾತ್ರಾ ಮಹೋತ್ಸವ ಮುಗಿದ ಬಳಿಕ ಅವರು ಈ ಕಾರ್ಯಕ್ರಮ ವನ್ನು ಮಾಡುತ್ತಾರೆ. ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ಹೊರ ಜಿಲ್ಲೆ ಹಾಗು ರಾಜ್ಯದಿಂದ ಸಾರ್ವಜನಿಕರು ಬಂದಿರುತ್ತಾರೆ. ಅಂತಹ ಸಂದರ್ಭದಲ್ಲಿ ನಗರವನ್ನು ಸ್ವಚ್ಛವಾಗಿಡುವಲ್ಲಿ ಪಾಲಿಕೆ ಸಿಬ್ಬಂದಿ ಶ್ರಮ ಹೆಚ್ಚಿರುತ್ತದೆ. ನಗರದ ಕೀರ್ತಿ ಹೆಚ್ಚಿಸುವವರಿಗೆ ಗೌರವಿಸುವುದು ನನ್ನ ಆದ್ಯತೆ. ಆದ್ದರಿಂದ ನನ್ನ ವಾರ್ಡ್‌ನ ಶ್ರಮಜೀವಿಗಳಿಗೆ ಈ ಮೂಲಕ ಗೌರವಿಸುತ್ತೇನೆ. ಜಾತಿ ಬೇಧವಿಲ್ಲದೆ ಕುಟುಂಬ ಸದಸ್ಯರಂತೆ ಅವರನ್ನು ಭಾವಿಸುತ್ತೇನೆ. ಮುಜುಗರ ಪಡದೆ ಸಹೋದ ರನ ರೀತಿ ಅವರು ನನ್ನನ್ನು ಪರಿಗಣಿಸುತ್ತಾರೆಂದು ರಕ್ಷಿತ್‌ಕುಮಾರ್ ಪ್ರತಿಕ್ರಿಯಿಸಿದರು.



## ದೇವಾಲಯ ಹುಂಡಿ ಹಣ ಕಳವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ರಾತ್ರೋ ರಾತ್ರಿ ದೇವಾಲಯ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 45 ಸಾವಿರ ರೂ. ಮೌಲ್ಯದ ಚಿನ್ನಾಭರಣ ಹಾಗು ಅಂದಾಜು 50 ಸಾವಿರ ರೂ. ಹುಂಡಿ ಹಣ ಕದ್ದಿರುವ ಘಟನೆ ತಾಲ್ಲೂಕಿನ ಬಾಗೂರು ಗ್ರಾಮದ ಶ್ರೀ ಸಂತೆ ಕಾಳೇಶ್ವರಿ ಮತ್ತು ಚಿಕ್ಕಮ್ಮ ದೇವಸ್ಥಾನದಲ್ಲಿ ನಡೆದಿದೆ.

ಅ.28ರ ರಾತ್ರಿ ಕಳ್ಳತನ ನಡೆದಿದ್ದು ದೇವಸ್ಥಾನದ ಬೀಗವನ್ನು ಯಾರೋ ಕಳ್ಳರು ಬಲವಾದ ಆಯುಧದಿಂದ ಒಡೆದು 5 ಗ್ರಾಂ ತೂಕದ ಚಿನ್ನದ 4 ತಾಳಿ, ಹುಂಡಿಯಲ್ಲಿದ್ದ ಅಂದಾಜು 50 ಸಾವಿರ ರೂ. ಕಾಣಿಕೆ ಹಣ ಕದ್ದಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಿನಿಸ್ಟೇಟ್ ಗೇಮ್‌ಗೆ ಜಿಲ್ಲಾ ಅಥ್ಲೆಟಿಕ್ ತಂಡ

• ಪ್ರಜೋದಯ ವರದಿ

**ಹಾಸನ:** ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನ.4 ರಿಂದ 6ರ ವರೆಗೆ ನಡೆಯಲಿರುವ ರಾಜ್ಯ ಮಟ್ಟದ ಕ್ರೀಡಾಕೂಟದ 4ನೇ ಮಿನಿಸ್ಟೇಟ್ ಗೇಮ್‌ನಲ್ಲಿ ಜಿಲ್ಲಾ ತಂಡ ಭಾಗವಹಿಸಲಿದೆ.



ತಂಡದಲ್ಲಿ ಶ್ರುತಿ, ತನ್ಯಶ್ರೀ, ಕೆ.ಕೆ. ಸರಸ, ಎನ್.ಗೀತಾಂಜಲಿ, ಕೃತಿಕ, ಶರಣ್ಯ, ಪ್ರಥಮ್, ಬಿ.ಯು.ನಿತಿನ್, ಯು.ಎಂ.ಹರ್ಷ, ರಿತೇಶ್ ಜೊತೆಗೆ ತಂಡದ ವ್ಯವಸ್ಥಾಪಕರಾಗಿ ನಾಗ ಭರಣ ಮತ್ತು ತಂಡದ ತರಬೇತಿ ದಾರರಾಗಿ ಕೆ.ಎಸ್.ರಕ್ಷಿತ್ ಭಾಗವಹಿಸಲಿದ್ದಾರೆ.

ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಸಂಸ್ಥೆಯ ಸಹಾಯಕ ಕಾರ್ಯದರ್ಶಿ ಎಸ್.ಎಲ್.ಪ್ರಸನ್ನ ಕುಮಾರ್ ಅವರು ಮುಖ್ಯ ತೀರ್ಪುಗಾರರಾಗಿ ಆಯ್ಕೆಯಾಗಿದ್ದಾರೆ. ಎಲ್ಲಾ ಕ್ರೀಡಾಪಟುಗಳು ವಿಜೇತರಾಗಿ ಜಿಲ್ಲೆಗೆ ಕೀರ್ತಿ ತರಲೆಂದು ಅಮೆಚೂರ್ ಅಥ್ಲೆಟಿಕ್ ಸಂಸ್ಥೆ ಹಾಗು ಜಿಲ್ಲಾಯುವ ಸಬಲೀಕರಣ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಶುಭ ಕೋರಿದ್ದಾರೆ.

# ಆಡಳಿತ ಮಂಡಳಿ ನಿಷ್ಠೆಯಿಂದ ಸಂಘಗಳ ಅಭಿವೃದ್ಧಿ

• ಪ್ರಜೋದಯ ವರದಿ

**ಆಲೂರು:** ಸಂಘ-ಸಂಸ್ಥೆಗಳ ಶ್ರೇಯೋಭಿವೃದ್ಧಿ ಆಡಳಿತ ಮಂಡಳಿ ಕಾರ್ಯವೈಖರಿ ಮತ್ತು ನಿಷ್ಠೆಯನ್ನು ಒಳಗೊಂಡಿರುತ್ತದೆ ಎಂದು ಮಾಜಿ ಶಾಸಕ ಹೆಚ್.ಕೆ.ಕುಮಾರಸ್ವಾಮಿ ಅವರು ತಿಳಿಸಿದರು.

ತಾಲ್ಲೂಕಿನ ಭಕ್ತರವಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿ, ಗ್ರಾಮೀಣ ಭಾಗದ ರೈತರಿಗೆ ಹೈನುಗಾರಿಕೆ ಪ್ರಮುಖ ಆರ್ಥಿಕವಾಗಿ ಲಾಭದಾಯಕವಾಗಿದೆ. ಹಸುಗಳನ್ನು ಸಾಕುವುದರಿಂದ ಹಾಲಿನ ಜೊತೆಗೆ ಕೊಟ್ಟಿಗೆ ಗೊಬ್ಬರ ಬಳಸಿಕೊಂಡು ಜಮೀನು ಫಲವತ್ತತೆ ಉಳಿಸಿಕೊಳ್ಳಬಹುದು. ಹೀಗಾಗಿ ರೈತರು ಕೃಷಿ ಜೊತೆಗೆ ಉಪಕಸುಬಾಗಿ ಹೈನುಗಾರಿಕೆ ಅವಲಂಬಿಸಿರುವುದು ಒಳಿತು ಎಂದರು.

ನಾನು ಮೂರು ಬಾರಿ ಶಾಸಕನಾಗಿ ವಿರೋಧ ಪಕ್ಷದ ಸಾಲಿನಲ್ಲಿ ಕುಳಿತಿದ್ದರೂ ಸಹ, ಈ ಭಾಗದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದೇನೆ. ಹಾಲು ಡೈರಿಗಳಲ್ಲಿ ರಾಜಕೀಯಕ್ಕೆ ಅವಕಾಶ ಕಲ್ಪಿಸದೆ ದೇವಾಲಯ ಎಂದು ಭಾವಿಸಿದರೆ ಯಾವುದೇ ಅವ್ಯವಹಾರ ನಡೆಯುವುದಿಲ್ಲ. ಸರ್ಕಾರ ಮಾಡದ ಕೆಲಸವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಸಂಘವು ದೇವಸ್ಥಾನ ನಿರ್ಮಾಣ, ಬಡವರಿಗೆ ಮನೆ ನಿರ್ಮಾಣ, ಕೆರೆ ಅಭಿವೃದ್ಧಿ ಹೀಗೆ ಹತ್ತು ಹಲವು ಕಾರ್ಯಕ್ರಮ ಹಮ್ಮಿ



ಕೊಂಡು ಜನರ ಒಳಿತಿಗಾಗಿ ದುಡಿಯುತ್ತಿದೆ ಎಂದರು.

ಹೆಚ್.ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕ ಕೆ.ಎಸ್. ಮಂಜೇಗೌಡ ಅವರು ಮಾತನಾಡಿ, ಹಾಲು ಉತ್ಪಾದಕರು ಡೈರಿಗಳಿಗೆ ಹಾಕುವ ಹಾಲಿನ ಗುಣಮಟ್ಟ ಉತ್ತಮವಾಗಿದ್ದರೆ ಉತ್ಪಾದಕರಿಗೆ ಉತ್ತಮ ಬೆಲೆ ಸಿಗುವುದರ ಮೂಲಕ ಸಹಕಾರ ಸಂಘ ಉತ್ತಮವಾಗಿ ಅಭಿವೃದ್ಧಿಯಾಗುತ್ತದೆ. ಹಾಲು ಉತ್ಪಾದಕರಿಗೂ ಆರ್ಥಿಕವಾಗಿ ಸಹಾಯವಾಗುತ್ತದೆ. ಕ್ಷೇತ್ರದ ಅಭಿವೃದ್ಧಿಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ, ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಹೆಚ್.ಡಿ.ರೇವಣ್ಣ ಹಾಗೂ ಮಾಜಿ ಶಾಸಕ ಹೆಚ್.ಕೆ.ಕುಮಾರಸ್ವಾಮಿ ಅವರು ಸಾಕಷ್ಟು ಸಹಕಾರ ನೀಡಿದ್ದಾರೆ ಎಂದರು.

ಕೆಎಂಎಫ್ ನಿರ್ದೇಶಕ ಪಿ.ಎಲ್.ನಿಂಗರಾಜು, ಹಂಚೂರು ಟಿಎಪಿಸಿಎಂಎಸ್ ಅಧ್ಯಕ್ಷ ಮಂಜೇಗೌಡ, ಕಾಂಗ್ರೆಸ್ ಮುಖಂಡ ಎಂ.ಹೆಚ್.ರಂಗೇಗೌಡ, ಜೆಡಿಎಸ್ ಮುಖಂಡ ಅಜಯ್ ಅಜ್ಜೇಗೌಡ, ಹಂಚೂರು ಗ್ರಾಮ ಪಂಚಾಯಿತಿ ಸದಸ್ಯ ಮಂಜೇಗೌಡ, ಸಂಘದ ಅಧ್ಯಕ್ಷ ಪುಟ್ಟ ರಾಜು, ಮಾಜಿ ಅಧ್ಯಕ್ಷ ಶಾಂತರಾಜ್, ಕೃಷ್ಣೇಗೌಡ, ನಿವೃತ್ತ ಶಿಕ್ಷಕ ರಾಮಚಂದ್ರು, ಉಪಸ್ಥಿತರಿದ್ದರು.

## ನ.1 ರಿಂದ 4ರ ವರೆಗೆ ಅಖಿಲ ಭಾರತ ಅಥ್ಲೆಟಿಕ್

• ಪ್ರಜೋದಯ ವರದಿ

**ಹಾಸನ:** ವಿದ್ಯಾಭಾರತಿ ಅಖಿಲ ಭಾರತ ಮಟ್ಟದ ಅಥ್ಲೆಟಿಕ್ ಕ್ರೀಡಾಕೂಟ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನ.1 ರಿಂದ 4ರ ವರೆಗೆ ನಾಲ್ಕು ದಿನಗಳ ಕಾಲ ನಡೆಯಲಿದೆ ಎಂದು ಮಂಗ ಳೂರು ಎಜುಕೇಶನ್ ಅಂಡ್ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷ ಚಂದ್ರರಾಜ್ ಜೈನ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ನ.1ರ ಸಂಜೆ 4 ಗಂಟೆಗೆ ಕ್ರೀಡಾಕೂಟ ಉದ್ಘಾಟನಾ ಸಮಾರಂಭ ನೆರವೇರಲಿದೆ. ವಿದ್ಯಾಭಾರತಿ ಶಿಕ್ಷಣ ಸಂಸ್ಥೆಯು ದೇಶಾದ್ಯಂತ 24 ಸಾವಿರ ಸಂಸ್ಥೆಗಳನ್ನು ಹೊಂದಿದೆ. ಪ್ರತಿವರ್ಷ ಸಬ್ ಜೂನಿಯರ್, ಜೂನಿಯರ್ ಹಾಗು ಸಿನಿಯರ್ ವಿಭಾಗದಲ್ಲಿ ಮಕ್ಕಳಿಗಾಗಿ ಕಳೆದ 35 ವರ್ಷಗಳಿಂದ ಕ್ರೀಡಾಕೂಟ ಹಮ್ಮಿಕೊಳ್ಳುತ್ತಿದೆ. ಈ ವರ್ಷ ಮಂಗಳೂರು ಪಬ್ಲಿಕ್ ಶಿಕ್ಷಣ ಸಂಸ್ಥೆಗಳ ಸಹಕಾರದಲ್ಲಿ ಕ್ರೀಡಾಕೂಟ ಆಯೋಜಿಸಲಾಗಿದೆ ಎಂದರು.

ಎಲ್ಲಾ ರಾಜ್ಯಗಳಿಂದ ಕ್ಷೇತ್ರ ಮಟ್ಟದಲ್ಲಿ ಪ್ರಥಮ ಹಾಗು ದ್ವಿತೀಯ ಸ್ಥಾನ ಪಡೆದ 1,800 ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. 22 ಬಗೆಯ ಸ್ಪರ್ಧೆಗಳು ನಡೆಯಲಿವೆ. ಸುಮಾರು 150ಕ್ಕೂ ಹೆಚ್ಚು ಗಣ್ಯರು ಭಾಗವಹಿಸಲಿದ್ದಾರೆ. ಎಲ್ಲಾ ಕ್ರೀಡಾಪಟುಗಳಿಗೆ ಊಟ ಮತ್ತು ವಸತಿ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ವಿದ್ಯಾಭಾರತಿ ಜಿಲ್ಲಾ ಕಾರ್ಯದರ್ಶಿ ಉಮೇಶ್, ದೇವೇಂದ್ರ, ಜಗದೀಶ್‌ಕುಮಾರ್, ಸುದೀಶ್ ಇದ್ದರು.




ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

C M Y K C M Y K C M Y K C M Y K